22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 301 | ನವದೆಹಲಿ | ಬೆಲೆ ₹ 10 | ಮೇ 07, 2025, ಬುಧವಾರ



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

## ಸಮಾಜ ಕಲ್ಯಾಣ ಇಲಾಖೆ

**ಗೌರವಾನ್ವಿತ ನ್ಯಾಯಮೂರ್ತಿ**

**ಡಾ. ಹೆಚ್.ಎನ್.ನಾಗಮೋಹನ ದಾಸ್**

**ಏಕ ಸದಸ್ಯ ಆಯೋಗ**

ಯವನಿಕಾ, ನೃಪತುಂಗ ರಸ್ತೆ, ಬೆಂಗಳೂರು.



ಶ್ರೀ ಡಿ ಕೆ ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು



**ದಿನಾಂಕ: 05-05-2025 ರಿಂದ ಸಮೀಕ್ಷೆ ಪ್ರಾರಂಭ**

| ಹಂತ | ವಿವರ | ಅವಧಿ |
|---|---|---|
| 1. | ಸಮೀಕ್ಷಾದಾರರಿಂದ ಮನೆ-ಮನೆ ಭೇಟಿ ನೀಡಿ ಸಮೀಕ್ಷೆ | 05-05-2025 ರಿಂದ 17-05-2025 |
| 2. | ಸಮೀಕ್ಷಾದಾರರಿಂದ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ | 19-05-2025 ರಿಂದ 21-05-2025 |
| 3. | ಸ್ವಯಂ ಘೋಷಣೆ (ಆನ್‌ಲೈನ್ ಮೂಲಕ) | 19-05-2025 ರಿಂದ 23-05-2025 |

# ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ - 2025

**ಮನೆಮನೆಗೂ ಬರಲಿದ್ದಾರೆ ಸಮೀಕ್ಷಾದಾರರು**
**ಸಮಯ - ಬೆಳಿಗ್ಗೆ 6:30 ರಿಂದ ಸಮೀಕ್ಷೆ ಶುರುವಾಗಲಿದೆ**

## ಸಹಾಯವಾಣಿ : 9481359000



ಮಾನ್ಯ ಸಮಾಜ ಕಲ್ಯಾಣ ಸಚಿವರಾದ **ಡಾ. ಹೆಚ್.ಸಿ. ಮಹದೇವಪ್ಪ** ರವರು ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಿರುವುದು.

- ಸರ್ಕಾರದ ದಿಟ್ಟ ಹೆಜ್ಜೆ - ಉಪಜಾತಿಗೆ ಅನುಗುಣವಾಗಿ ಮೀಸಲಾತಿ ಹಂಚಿಕೆ ಸೌಲಭ್ಯಕ್ಕಾಗಿ ಸಮೀಕ್ಷೆ
- ಮನೆಮನೆಗೂ ಬರಲಿದ್ದಾರೆ ಸಮೀಕ್ಷಾದಾರರು
- ಸಮೀಕ್ಷೆಗೆ ಸಹಕರಿಸುವುದು ನಮ್ಮೆಲ್ಲರ ಕರ್ತವ್ಯ
- ಸಮೀಕ್ಷೆಯ ವೇಳೆಯಲ್ಲಿ ಪರಿಶಿಷ್ಟ ಜಾತಿಯವರು ತಮ್ಮ ಮೂಲ ಜಾತಿ, ಶಿಕ್ಷಣ, ವರಮಾನ, ಉದ್ಯೋಗ ಮತ್ತು ಇನ್ನಿತರ ಪ್ರಮುಖ ಮಾಹಿತಿಯನ್ನು ತಪ್ಪದೇ ನೀಡುವುದು.




ದಿನಾಂಕ 05-05-2025 ರಂದು ವಿಧಾನ ಸೌಧದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ರವರು ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025ರ ಅಂಗವಾಗಿ ಪತ್ರಿಕಾಗೋಷ್ಠಿ ಜರುಗಿಸುವ ಸಂಧರ್ಭ

**ಈ ಸಮೀಕ್ಷೆಯ** ಸದುದ್ದೇಶಕ್ಕಾಗಿ ಕೈಜೋಡಿಸಿ

ನಮ್ಮ ಕರ್ನಾಟಕ
**ಗ್ಯಾರಂಟಿ ಕರ್ನಾಟಕ**

ಶಕ್ತಿ — ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಅನ್ನಭಾಗ್ಯ — ಬಡವರಿಗೆ ಪ್ರತಿ ತಿಂಗಳು 10 kg, 5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಗೃಹಜ್ಯೋತಿ — ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಗೃಹಲಕ್ಷ್ಮಿ — ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000
ಯುವನಿಧಿ — ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ಪದವೀಧರರಿಗೆ | ₹1500 ಡಿಪ್ಲೋಮಾ ಪದವೀಧರರಿಗೆ

ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು - ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

## ನಿತ್ಯ ಪಂಚಾಂಗ 07.05.2025 ಬುಧವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ ಶಿಶಿರ/ವಸಂತ ಋತು
ಚಾಂದ್ರಮಾನ, ಪಾಲ್ಗುಣ ಬಹುಳ

ಸಪ್ತಮಿ, ಜ್ಯೇಷ್ಠ ನಕ್ಷತ್ರ,
ಕೊಲ್ಲೂರು ಜಾತ್ರೆ, ಕೆಲವಡಿ ಜಾತ್ರೆ, ಹುಲಿಕೊಪ್ಪ
ಬನ್ನಮಹಾಂಕಾಳಿ ರಥ,
ಕಡಕೊಳ ಮಾಡಿವಾಳೇಶ್ವರ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ
## ಜನಾಕ್ರೋಶ ಯಾತ್ರೆಯ ಕೊನೆಯ ಹಂತ ಇಂದು ಆರಂಭ: ವೈ.ವಿಜಯೇಂದ್ರ



"ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕೈಗೊಳ್ಳುವ ಯಾವುದೇ ನಿರ್ಧಾರವನ್ನು ಬೆಂಬಲಿಸುವ ವಾತಾವರಣ ನಿರ್ಮಾಣವಾಗಿದೆ."

**ಬೆಂಗಳೂರು, ಮೇ.6–** ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ, ಅಲ್ಪಸಂಖ್ಯಾತರ ತುಷ್ಟೀಕರಣ ಪರಿಶಿಷ್ಟ ಸಮುದಾಯದ ಅನುದಾನ ದುರ್ಬಳಕೆ ವಿರೋಧಿಸಿ ಬಿಜೆಪಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಜನಾಕ್ರೋಶ ಯಾತ್ರೆಯ ಕೊನೆಯ ಹಂತ ನಾಳೆಯಿಂದ ಆರಂಭವಾಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಬುಧವಾರ ಬೆಳಗ್ಗೆ ಕೋಲಾರದಲ್ಲಿ ಯಾತ್ರೆ ಆರಂಭವಾಗಲಿದ್ದು, ನಾಡಿದ್ದು, ತುಮಕೂರು, ಚಿತ್ರದುರ್ಗ, ಮೇ 9ರಂದು ಬಳ್ಳಾರಿ, ವಿಜಯನಗರ, 10ರಂದು ಚಿಕ್ಕಬಳ್ಳಾಪುರ ಹಾಗೂ 11ರಂದು ಹುಬ್ಬಳ್ಳಿಯಲ್ಲಿ ಯಾತ್ರೆಯ ಸಮಾರೋಪ ಸಮಾರಂಭ ನಡೆಯಲಿದ್ದು, ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಸೇರಿದಂತೆ ಪಕ್ಷದ ಹಲವು ನಾಯಕರು ಪಾಲ್ಗೊಳ್ಳಲಿದ್ದಾರೆ. ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಲ್ಪಸಂಖ್ಯಾತರನ್ನು ಓಲೈಕೆ ಮಾಡುವ ಮೂಲಕ ಬಹು ಸಂಖ್ಯಾತರನ್ನು ನಿರ್ಲಕ್ಷಿಸುವ ಕೆಲಸ ಮಾಡಲಾಗುತ್ತಿದೆ.

ಮೈಸೂರು, ಹುಬ್ಬಳ್ಳಿ, ಮಂಗಳೂರು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಅಪರಾಧ ಕೃತ್ಯಗಳು ನಡೆಯುತ್ತಿವೆ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದ್ದು, ಅಪರಾಧ ಕೃತ್ಯಗಳ ಹಿಂದೆ ಇರುವವರನ್ನು ಗುರುತಿಸಿ, ಬಂಧಿಸಬೇಕು. ಈ ಮೂಲಕ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವಂತೆ ನೋಡಿ ಕೊಳ್ಳಬೇಕು ಎಂದು ಒತ್ತಾಯಿಸಿದರು.

ಪಹಲ್ಗಾಮ್ ಘಟನೆಯ ನಂತರ ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎನ್ನುವ ಸಾರ್ವತ್ರಿಕ ಕೂಗು ದೇಶದೆಲ್ಲೆಡೆ ಕೇಳಿಬರುತ್ತಿದೆ. ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕೈಗೊಳ್ಳುವ ಯಾವುದೇ ನಿರ್ಧಾರವನ್ನು ಬೆಂಬಲಿಸುವ ವಾತಾವರಣ ನಿರ್ಮಾಣವಾಗಿದೆ ಎಂದು ತಿಳಿಸಿದರು.

# ಗ್ರಾಮೀಣ ಭಾಗದಲ್ಲೂ ವೈದ್ಯಕೀಯ ಸೇವೆಗೆ ಆದ್ಯತೆ ನೀಡಿ: ವೈದ್ಯ ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಸಲಹೆ




**ಬೆಂಗಳೂರು, ಮೇ 6:** "ಪ್ರತಿಯೊಬ್ಬರೂ ಸಂತೋಷವಾಗಿರ ಬೇಕು, ಎಲ್ಲರೂ ಆರೋಗ್ಯವಾಗಿರಬೇಕು. ಇದು ವೈದ್ಯಕೀಯ ಸೇವೆಗಳ ಮುಖ್ಯ ಉದ್ದೇಶವಾಗಿದೆ. ವೈದ್ಯಕೀಯ ಸೇವೆಯನ್ನು ಮಾನವೀಯ ದೃಷ್ಟಿಯಿಂದ ಅಳವಡಿಸಿಕೊಂಡು ಪ್ರಾಮಾಣಿಕವಾಗಿ ಜನರಿಗೆ ವೈದ್ಯಕೀಯ ಸೌಲಭ್ಯ ಕಲ್ಪಿಸಬೇಕು" ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಕರೆ ನೀಡಿದ್ದಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ 27 ನೇ ಘಟಿಕೋತ್ಸವದ ಅಧ್ಯಕ್ಷತೆವಹಿಸಿ, "ವೈದ್ಯಕೀಯ ಸೇವೆಯೇ ಶ್ರೇಷ್ಠ ಮಾನವ ಮತ್ತು ದೈವಿಕ ಸೇವೆ, ವೈದ್ಯರನ್ನು ದೇವರ ಸ್ವರೂಪ ಎಂದು ಪರಿಗಣಿಸಲಾಗುತ್ತದೆ. ವೈದ್ಯಕೀಯ ಪದವಿ ಪಡೆದು ವಿದ್ಯಾರ್ಥಿಗಳು ವೈದ್ಯರಾಗಿ ಸೇವೆಗಳನ್ನು ಒದಗಿಸಿದಾಗ ಮತ್ತು ಅದನ್ನು ಮಾನವೀಯ ಸೇವೆಯಾಗಿ ಮಾಡಿದಾಗ, ಖಂಡಿತವಾಗಿಯೂ ಯಶಸ್ವಿ ವೈದ್ಯರಾಗುತ್ತೀರಿ ಮತ್ತು ಭವಿಷ್ಯದಲ್ಲಿ ಶ್ರೇಷ್ಠತೆಯನ್ನು ಸಾಧಿಸುವಿರಿ" ಎಂದರು.

"ಪ್ರಾಚೀನ ಭಾರತವು ವೈದ್ಯಕೀಯ ವಿಜ್ಞಾನದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಿದೆ ಎಂದು ನೀವು ತಿಳಿದಿರಲೇಬೇಕು, ಮಹರ್ಷಿ ಚರಕನನ್ನು ಭಾರತದಲ್ಲಿ ಆಯುರ್ವೇದ ಮತ್ತು ಔಷಧದ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. ಮಹರ್ಷಿ ಸುಶ್ರುತನನ್ನು ಶಸ್ತ್ರಚಿಕಿತ್ಸೆಯ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. ಸ್ವಾತಂತ್ರ್ಯದ ನಂತರ, ದೇಶವು ವೈದ್ಯಕೀಯ ಕ್ಷೇತ್ರ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಅಭೂತಪೂರ್ವ ಪ್ರಗತಿಯನ್ನು ಸಾಧಿಸಿದೆ, ಇದು ಭಾರತೀಯರ ಕಠಿಣ ಪರಿಶ್ರಮ, ನಾವೀನ್ಯತೆ ಮತ್ತು ಉದ್ಯಮಶೀಲತೆಯ ಪ್ರತಿಬಿಂಬವಾಗಿದೆ" ಎಂದು ತಿಳಿಸಿದರು.

"ಪ್ರಸ್ತುತ ವೈದ್ಯಕೀಯ ಕ್ಷೇತ್ರದಲ್ಲಿ ತಂತ್ರಜ್ಞಾನವು ಅತ್ಯಂತ ವೇಗವಾಗಿ ಬದಲಾಗುತ್ತಿದೆ. ಆರ್ಟಿಫಿಶಿಯಲ್ ಇಂಟೆಲಿಜೆನ್ಸ್, ಟೆಲಿಮೆಡಿಸಿನ್, ರೋಬೋಟಿಕ್ ಸರ್ಜರಿ ಯಂತಹ ಆವಿಷ್ಕಾರಗಳು ನಿರಂತರವಾಗಿ ಔಷಧದ ಸ್ವರೂಪವನ್ನು ಬದಲಾಯಿಸುತ್ತಿವೆ. ಹಾಗಾಗಿ, ವೈದ್ಯಕೀಯ ಕ್ಷೇತ್ರಕ್ಕೆ ಕಾಲಿಡುತ್ತಿರುವ ವಿದ್ಯಾರ್ಥಿಗಳು ನಿರಂತರವಾಗಿ ಕಲಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಅಲ್ಲದೆ, ಗ್ರಾಮೀಣ ಭಾರತದ ಆರೋಗ್ಯ ವ್ಯವಸ್ಥೆಯು ಇನ್ನೂ ಬಲವಾದ ವೈದ್ಯರಿಗಾಗಿ ಕಾಯುತ್ತಿದೆ. ಇಂದು ನಮ್ಮ ಯುವ ವೈದ್ಯರು ಹಳ್ಳಿಗಳತ್ತ ಮುಖ ಮಾಡುವ ಅವಶ್ಯಕತೆ ಇದೆ. ಹಳ್ಳಿಗಳಲ್ಲಿ ವಾಸಿಸುತ್ತಿರುವ ಜನರ ಸೇವೆ ಮಾಡಲು ಯುವ ವೈದ್ಯರು ಮುಂದಾಗಬೇಕು ಎಂದು ಕರೆ ನೀಡಿದರು. ಸಮಾಜದ ಬಗ್ಗೆ ನಿಮ್ಮ ಜವಾಬ್ದಾರಿಯನ್ನು ಅರ್ಥಮಾಡಿಕೊಳ್ಳಿ, ಆರೋಗ್ಯ ಜಾಗೃತಿಯನ್ನು ಹರಡಿ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯವಾಗಿ ಭಾಗವಹಿಸಿ. ಸರ್ವೇ ಭವಂತು ಸುಖಿನಃ, ಸರ್ವೇ ಸಂತು ನಿರಾಮಯಃ ಎಂಬುದನ್ನು ಪಾಲಿಸಿ ಎಂದ ಅವರು, ಪದವಿ ಪಡೆದ ವಿದ್ಯಾರ್ಥಿಗಳಿಗೆ ಉಜ್ವಲ ಭವಿಷ್ಯವಾಗಲಿ ಎಂದು ಹಾರೈಸಿದರು.

ಕರ್ನಾಟಕ ರಾಜ್ಯದಲ್ಲಿರುವ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಪ್ರಪಂಚದಾದ್ಯಂತ ವೈದ್ಯಕೀಯ ಶಿಕ್ಷಣದಲ್ಲಿ ಗುಣಮಟ್ಟ ಮತ್ತು ಬದ್ಧತೆಗೆ ಹೆಸರುವಾಸಿಯಾಗಿದೆ. ಡಾ.ಹೊಂಬೇಗೌಡ ಶರತ್ ಚಂದ್ರ, ಡಾ.ಗಿರೀಶ್ ರಾವ್, ಮತ್ತು ಡಾ.ಜಿ.ಟಿ.ಸುಭಾಷ್‌ರಿಗೆ ವಿಜ್ಞಾನ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಅವರ ಅತ್ಯುತ್ತಮ ಮತ್ತು ಅನುಪಮ ಕಾರ್ಯಕ್ಕಾಗಿ ಗೌರವ ಪದವಿ ನೀಡಲಾಗಿದೆ. ವೈದ್ಯಕೀಯ ಕ್ಷೇತ್ರಕ್ಕೆ ಅವರ ಸೇವೆ ನಿರಂತರವಾಗಿರಲಿ ಎಂದು ಆಶಿಸುತ್ತೇನೆಂದರು.

ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್, ವಿಪ್ರೋ ಕಂಪನಿ ಸಂಸ್ಥಾಪಕ ಅಧ್ಯಕ್ಷ ಅಜೀಂ ಪ್ರೇಮ್‌ಜಿ, ಕುಲಪತಿ ಡಾ.ಭಗವಾನ್.ಬಿ.ಸಿ ಉಪಸ್ಥಿತರಿದ್ದರು.

### 63,982 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

**93 ವಿದ್ಯಾರ್ಥಿಗಳಿಗೆ 109 ಚಿನ್ನದ ಪದಕ ಸೇರಿ 63,982 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ವಿಜ್ಞಾನಿ, ಸೆಂಟರ್ ಫಾರ್ ಹ್ಯೂಮನ್ ಜೆನೆಟಿಕ್ಸ್ ಕೇಂದ್ರದ ಮುಖ್ಯಸ್ಥ ಡಾ.ಹೊಂಬೇಗೌಡ ಶರತ್ಚಂದ್ರ, ಒಎಂಎಫ್ ಸರ್ಜನ್ ಡಾ. ಗಿರೀಶ್ ರಾವ್ ಮತ್ತು ನರರೋಗ ತಜ್ಞ ಡಾ. ಜಿ.ಟಿ. ಸುಭಾಷ್ ಅವರಿಗೆ ಡಾಕ್ಟರ್ ಆಫ್ ಸೈನ್ಸ್ ಪ್ರದಾನ ಮಾಡಲಾಯಿತು.**

## ಷರತ್ತಿಲ್ಲದೆ ರಾಜೀನಾಮೆ ನೀಡಲು ನಾನು ಸಿದ್ಧ: ಯತ್ನಾಳ್‌ಗೆ ಸವಾಲು



**ಬೆಂಗಳೂರು, ಮೇ. 6–** ನಾನು ಈಗ ಷರತ್ತಿಲ್ಲದೆ ರಾಜೀನಾಮೆ ನೀಡಲು ಸಿದ್ಧ. ನನ್ನ ಜೊತೆಗೆ ನೀವು ರಾಜೀನಾಮೆ ನೀಡುತ್ತೀರಾ ಎಂದು ಸಚಿವ ಶಿವಾನಂದ ಪಾಟೀಲ್ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಪ್ರಶ್ನಿಸಿದರು.

ಮಂಗಳವಾರ ನಗರದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಷರತ್ತು ಬದ್ಧ ರಾಜೀನಾಮೆಯಿಂದ ನನ್ನ ರಾಜೀನಾಮೆಯನ್ನು ಸ್ಪೀಕರ್ ಅಂಗೀಕಾರ ಮಾಡಿಲ್ಲ. ಹಾಗಾಗಿ ಈಗಲೂ ಸಹ ನಾನು ಷರತ್ತು ರಹಿತ ರಾಜೀನಾಮೆ ನೀಡಲು ಸಿದ್ಧನಿದ್ದೇನೆ. ಆದರೆ ಶಾಸಕ ಯತ್ನಾಳ್ ಕೂಡ ನನ್ನ ಜೊತೆಗೆ ರಾಜೀನಾಮೆ ನೀಡಲಿ ಎಂದರು.

ಲೆಟರ್‌ಹೆಡ್‌ನಲ್ಲಿ ನಾನು ಕೇವಲ ಸಹಿ ಮಾಡಿಕೊಡುತ್ತೇನೆ. ಅವರೇ ರಾಜೀನಾಮೆ ವಿಷಯ ಬರೆಯಲಿ. ಹಾಗೇ ಯತ್ನಾಳ್ ರಾಜೀನಾಮೆ ನೀಡಬೇಕು. ಇಬ್ಬರ ರಾಜೀನಾಮೆ ಪತ್ರ ಸ್ಪೀಕರ್‌ಗೆ ನೀಡೋಣ. ಖಾದರ್ ಬೇಕಾದರೆ ಮೊದಲು ನನ್ನ ರಾಜೀನಾಮೆಯನ್ನು ಅಂಗೀಕಾರ ಮಾಡಿ, ನಂತರ ಯತ್ನಾಳ್ ರಾಜೀನಾಮೆ ಅಂಗೀಕಾರ ಮಾಡಲಿ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು. ಯತ್ನಾಳ್‌ಗೆ ನಾನು ಸವಾಲು ಹಾಕಿಲ್ಲ. ಯತ್ನಾಳ್ ಸವಾಲು ಸ್ವೀಕಾರ ಮಾಡಿದ್ದೇನೆ. ಈಗಲೂ ನಾನು ರಾಜೀನಾಮೆಗೆ ಬದ್ಧ. ಹಾಗೇ ಯತ್ನಾಳ್ ಸಹ ರಾಜೀನಾಮೆ ನೀಡಬೇಕು ಎಂದು ತಿಳಿಸಿದರು.

ಕಳೆದ ಬಾರಿ ಷರತ್ತು ಹಾಕಿ ರಾಜೀನಾಮೆ ನೀಡಿದ್ದೆ. ಕಾರಣ ನನ್ನ ರಾಜೀನಾಮೆ ಬಳಿಕ ಯತ್ನಾಳ್ ರಾಜೀನಾಮೆ ನೀಡದಿದ್ದರೆ ಎಂಬ ಕಾರಣದಿಂದ ಷರತ್ತು ಹಾಕಿದ್ದೆ. ಈಗಲೂ ರಾಜೀನಾಮೆಗೆ ಸಿದ್ಧ. ಯತ್ನಾಳ್ ಸಹ ರಾಜೀನಾಮೆ ನೀಡಬೇಕು ಎಂದರು. ಮಹಮ್ಮದ್ ಪೈಗಂಬರ್ ಕುರಿತು ಯತ್ನಾಳ್ ಅವಹೇಳನಾಕಾರಿ ಮಾತನಾಡಿದ್ದನ್ನು ಖಂಡಿಸಿ ಕಳೆದ ಏಪ್ರಿಲ್ 28 ರಂದು ಯತ್ನಾಳ್ ವಿರುದ್ಧ ಮುಸ್ಲಿಂ ಸಂಘಟನೆಗಳು ಪ್ರತಿಭಟನಾ ಸಮಾವೇಶ ಮಾಡಿದ್ದರು. ಖಾಸಗಿ ವಾಹಿನಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ಭಾಗವಹಿಸ ಬೇಕಿತ್ತು ಎಂದಷ್ಟೇ ಹೇಳಿದ್ದೆ.

## ಭಯೋತ್ಪಾದನೆ ನಿಗ್ರಹ; ಮೋದಿಗೆ ಎಚ್‌ಡಿಡಿ ಬೆಂಬಲ



**ನವದೆಹಲಿ, ಮೇ 6;** ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೈಗೊಳ್ಳುತ್ತಿರುವ ಎಲ್ಲಾ ಕ್ರಮಗಳನ್ನು ಮುಕ್ತಕಂಠದಿಂದ ಬೆಂಬಲಿಸುವುದಾಗಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನಿಗಳಾದ ಎಚ್.ಡಿ. ದೇವೇಗೌಡರು ಘೋಷಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು; ಪೆಹಲ್ಗಾಮ್ ಘಟನೆ ಅಮಾನವೀಯ. ಮೊದಲ ಬಾರಿಗೆ ಭಯೋತ್ಪಾದಕರು ಪ್ರವಾಸಿಗರ ಮೇಲೆ ದಾಳಿ ಮಾಡಿದ್ದಾರೆ. ಈ ಕೆಲಸ ಮಾಡಿದವರಿಗೆ ತಕ್ಕ ಶಾಸ್ತಿ ಆಗಲೇಬೇಕು ಎಂದು ಸ್ಪಷ್ಟಪಡಿಸಿದರು. ರಕ್ಷಣಾ ಪಡೆಗಳಿಗೆ ಮೋದಿ ಮುಕ್ತ ಸ್ವಾತಂತ್ರ್ಯ ನೀಡಿ ದಿಟ್ಟ ನಿರ್ಧಾರ ಕೈಗೊಂಡಿದ್ದಾರೆ. ಇತಿಹಾಸದಲ್ಲಿ ಈ ರೀತಿ ಎಂದೂ ನಿರ್ಧಾರ ಆಗಿರಲಿಲ್ಲ. ಗೃಹ, ರಕ್ಷಣೆ ಹಾಗೂ ವಿದೇಶಾಂಗ ಖಾತೆಗಳನ್ನು ನಿಭಾಯಿಸುತ್ತಿರುವ ಸಚಿವರು ಅತ್ಯಂತ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದಾರೆ ಎಂದರು.

ಇಡೀ ದೇಶ ಪ್ರಧಾನಿ ಮೋದಿಯವರ ಜೊತೆ ನಿಂತಿದೆ. ಎಲ್ಲಾ ರಾಜಕೀಯ ಪಕ್ಷಗಳು ಮೋದಿಯವರ ನಿರ್ಧಾರವನ್ನು ಬೆಂಬಲಿಸಿವೆ. ಭಯೋತ್ಪಾದಕರಿಗೆ ತಕ್ಕ ಪಾಠ ಕಲಿಸಬೇಕಾಗಿದೆ. ಪಾಕಿಸ್ತಾನ ಪ್ರೇರಿತ ಉಗ್ರರನ್ನು ಸದೆಬಡಿಯುವವರೆಗೆ ವಿರಮಿಸುವುದಿಲ್ಲ ಎಂದು ಮೋದಿ ಹೇಳಿದ್ದಾರೆ. 1971ರ ಯುದ್ಧ ಕಾಲಕ್ಕೂ ಈಗಿನ ಪರಿಸ್ಥಿತಿಗೂ ಬಹಳ ವ್ಯತ್ಯಾಸವಿದೆ. ಹೋಲಿಕೆ ಮಾಡಲು ಸಾಧ್ಯವಿಲ್ಲ. ಇಲ್ಲಿ ಹಿಂದೂ ಮುಸ್ಲಿಂ ಪ್ರಶ್ನೆಯಲ್ಲ. ಧರ್ಮ, ಜಾತಿ ಉದ್ಭವವಾಗುವುದಿಲ್ಲ. ಯುದ್ಧ ಮಾಡಬೇಕೋ ಬೇಡವೋ ಎನ್ನುವ ನಿರ್ಧಾರವನ್ನು ಸೇನೆಗೆ ಬಿಡಲಾಗಿದೆ ಎಂದು ಮಾಜಿ ಪ್ರಧಾನಿಗಳು ಹೇಳಿದರು.


### ಭಾರತ-ಪಾಕ್ ನಡುವೆ ಯುದ್ಧದ ಕಾರ್ಮೋಡ
## ಕಾಂಗ್ರೆಸ್‌ನ ಹೇಳಿಕೆಗೆ ಬೊಮ್ಮಾಯಿ ಖಂಡನೆ

**ಬೆಂಗಳೂರು, ಮೇ.6–** ಭಾರತದ ದೇಶದ ಮೇಲೆ ಭಯೋತ್ಪಾದನೆಯ ದಾಳಿ ನಡೆದ ಸಂದರ್ಭದಲ್ಲಿ ಭಾರತ ಪಾಕ್ ನಡುವೆ ಯುದ್ಧದ ಕಾರ್ಮೋಡ ದಟ್ಟವಾಗಿದೆ. ಈ ಸಂದರ್ಭದಲ್ಲಿ ಕಾಂಗ್ರೆಸ್‌ನ ಹಿರಿಯ ನಾಯಕರ ಹೇಳಿಕೆಗಳು ಖಂಡನೀಯ. ಅವೆಲ್ಲ ನೋಡಿದಾಗ ಇವರು ಈ ದೇಶವನ್ನು 55 ವರ್ಷ ಆಳಿದ್ದಾರೊ ಇಲ್ಲವೊ ಎಂಬ ಸಂಶಯ ಮೂಡುತ್ತದೆ. ಕಾಂಗ್ರೆಸ್ ಪಕ್ಷದ ರಾಷ್ಟ್ರ ಪ್ರೇಮ ಅಧಪತನವಾಗಿರುವುದು ಸ್ಪಷ್ಟ ವಾಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ದೂರಿದರು.

ಕಾಂಗ್ರೆಸ್ ಆಡಳಿತ ಅವಧಿಯಲ್ಲಿ ಚೀನಾ ಯುದ್ಧದಲ್ಲಿ ದೇಶಕ್ಕೆ ಸೋಲುಂಟಾಗಿದೆ. ದೇಶದ ವಿವಿಧ ಕಡೆಗಳಲ್ಲಿ ಅಂದರೆ ಮುಂಬೈ, ದೆಹಲಿ, ಬೆಂಗಳೂರು, ಹೈದರಾಬಾದ್ ಸೇರಿದಂತೆ ಹಲವಾರು ಕಡೆ ಭಯೋತ್ಪಾದಕ ದಾಳಿಗಳು ನಡೆದವು. ಈ ವೇಳೆ ಅಂತಹ ಚಟುವಟಿಕೆಗಳ ವಿರುದ್ಧ ಕ್ರಮ ತೆಗೆದುಕೊಳ್ಳದಿರುವುದು, ಮುಂಬೈ ಮೇಲೆ 2008 ರಲ್ಲಿ ನಡೆದ 26/11 ದಾಳಿಯಲ್ಲಿ 130 ಅಮಾಯಕರ ಸಾವುಂಟಾದಾಗ ಘಟನೆ ಪೂರ್ವದಲ್ಲಿ ಇಂಟಲಿಜೆನ್ಸ್ ವೈಫಲ್ಯ ಆಗಿದೆ ಎಂದು ಅವರು ಕಾಂಗ್ರೆಸ್ ಅವಧಿಯಲ್ಲಾದ ಮಹತ್ವ ಘಟನೆ, ದಾಳಿ ನೆನಪಿಸಿದರು.ಘಟನೆ ನಂತರ ಉಗ್ರರ ಮೇಲೆ ಯಾವುದೇ ಕ್ರಮ ತೆಗೆದುಕೊಳ್ಳುವುದಿಲ್ಲ ಎಂಭ ನಿರ್ಧಾರ ತೆಗೆದುಕೊಂಡಿದ್ದನ್ನು ಇದೇ ಕಾಂಗ್ರೆಸ್ ಮರೆತಿದೆ. ಕನಿಷ್ಠ ಅವರ ಪ್ರಧಾನಮಂತ್ರಿ ಇಂದಿರಾ ಗಾಂಧಿ ಯುದ್ಧ ಮಾಡುವಾಗ ಅಂದಿನ ಸೇನೆಯ ಮುಖ್ಯಸ್ಥ ಮಾಣಿಕ್ ಷಾ ಅವರ ಮಾತು ಹೇಗೆ ಕೇಳಿದರೊ ಆ ಸಂದರ್ಭದಲ್ಲಿ ಎಲ್ಲ ವಿರೋದ ಪಕ್ಷಗಳು ಸರ್ಕಾರದ ಪರವಾಗಿ ನಿಂತಿದ್ದವು. ಇದೆಲ್ಲ ನೆನಪಿಸಿಕೊಳ್ಳದೇ ಅತ್ಯಂತ ಬೇಜವಾಬ್ದಾರಿ ವಿರೋಧ ಪಕ್ಷವಾಗಿ ನಡೆದುಕೊಳ್ಳುತ್ತಿರುವುದು ಕಾಂಗ್ರೆಸ್ ಪಕ್ಷ. ಹೀಗಾಗಿ ಕಾಂಗ್ರೆಸ್ ಪಕ್ಷದ ರಾಷ್ಟ್ರಪ್ರೇಮ ಅಧಃಪತನವಾಗಿರುವುದು ಸ್ಪಷ್ಟ ವಾಗಿದೆ.ಭಾರತ ಮತ್ತು ಪಾಕಿಸ್ತಾನ ಯುದ್ಧ ನಡೆಯುವಹ ಸ್ಥಿತಿ ನಿರ್ಮಾಣವಾಗಿದೆ. ಉಗ್ರರು ದಾಳಿ ಮಾಡಿ ಭಾರತದವರನ್ನು ಹತ್ಯೆ ಗೈದಿದ್ದಾರೆ. ಭಾರತ ಯುದ್ಧಕ್ಕೆ ಸನಿಹವಿದೆ. ಇಂಥ ಸಂದರ್ಭದಲ್ಲಿ ರಾಜಕಾರಣ ಮಾಡುತ್ತಿರುವ ಕಾಂಗ್ರೆಸ್ ಬರುವ ದಿನಗಳಲ್ಲಿ ಜನರಿಗೆ ಉತ್ತರಿಸಬೇಕಾಗುತ್ತದೆ ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಎಲ್ಲ ಆಯಾಮಗಳನ್ನು ಮನಗಂಡು ಯುದ್ಧಕ್ಕೆ ಬೇಕಾಗಿರುವ ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಈ ಸರಿಯಾದ ಸಮಯದಲ್ಲಿ ಸರಿಯಾದ ನಿರ್ಣಯ ತೆಗೆದುಕೊಳ್ಳಲು ಈಗಾಗಲೇ ಮೂರು ಸೇನಾಪಡೆಗಳಿಗೆ ಅಧಿಕಾರ ಕೊಟ್ಟಿರುವುದು ನೋಡಿದ್ದೇವೆ. ಇಡೀ ರಾಷ್ಟ್ರ ಒಂದಾಗಿ ಪ್ರಧಾನಿ ನರೇಂದ್ರ ಮೋದಿಯವರ ಜೊತೆ ನಿಲ್ಲುವುದು ಆದ್ಯ ಕರ್ತವ್ಯವಾಗಿದೆ. ಹೀಗಿದ್ದಾಗ ಕಾಂಗ್ರೆಸ್ ಕನಿಷ್ಠ ಜವಾಬ್ದಾರಿಯನ್ನಾದರೂ ಅರ್ಥಮಾಡಿಕೊಳ್ಳಲಿ. ಅವರ ಪ್ರತಿಯೊಂದು ಹೇಳಿಕೆಗಳಿಂದ ಪಾಕಿಸ್ತಾನಕ್ಕೆ ಪುಷ್ಠಿ ಕೊಡುತ್ತಿರುವುದು ಕಾಂಗ್ರೆಸ್ ಪಕ್ಷ ಅರ್ಥ ಮಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಶ್ಮೀರ ಪಹಲ್ಗಾಮ್‌ನಲ್ಲಿ ದಾಳಿ ನಡೆದ ಸಂದರ್ಭದಲ್ಲಿ 26 ಮಂದಿ ಪ್ರವಾಸಿಗರನ್ನು ಕೊಲ್ಲಲಾಗಿದೆ. ತದನಂತರದ ಬೆಳವಣಿ ವೇಳೆ ಪ್ರಧಾನಿ ಸರ್ವಪಕ್ಷಗಳ ಸಭೆಯಲ್ಲಿ ವಿರೋಧ ಪಕ್ಷಗಳು ಬೆಂಬಲಿಸಿದವರು. ಆದರೆ ಕರ್ನಾಟಕ ಸೇರಿದಂತೆ ಕೆಲವೆಡೆ ಕಾಂಗ್ರೆಸ್ ನಾಯಕರು, ಕೇಂದ್ರ ಸರ್ಕಾರದ ವೈಫಲ್ಯ, ಗುಪ್ತಚರ ವೈಫಲ್ಯ ಎಂದು ಅಣುಕಿಸಿದ್ದರು. ಅಲ್ಲದೇ ತಮ್ಮ ಅವಧಿಯಲ್ಲಿ ನಡೆದಿದ್ದ ಘಟನೆಗಳಲ್ಲಿ ತಾವು ಕೈಗೊಂಡ ಕ್ರಮ, ಅಂದಿನ ಬೆಳವಣಿಗೆ ಮರೆತಿದ್ದಾರೆ. ಇಂತಹ ಸಂದರ್ಭದಲ್ಲೂ ಇಂಡೋ ಪಾಕ್ ಗಡಿಯಲ್ಲಿ ಯುದ್ಧದ ಕಾರ್ಮೋಡ ಕವಿದಿದೆ. ಈ ವೇಳೆ ತುಷ್ಟೀಕರಣ ರಾಜಕೀಯ ಮಾಡುವುದು, ಪಾಕ್ ಪರವಾದಂತಹ ರೀತಿಯಲ್ಲಿ ಮಾತನಾಡುವುದು ತಪ್ಪು ಎಂದು ಬಿಜೆಪಿ ನಾಯಕರು ತಿರುಗೇಟು ನೀಡಿದ್ದಾರೆ.



## ಶಿಕ್ಷಣವೇ ದೊಡ್ಡ ಆಸ್ತಿ: ನಾರಾಯಣ ಪಿ.ಎಂ ಅಭಿಮತ




**ಮುಂಬಯಿ, ಮೇ.5–** ಇತರ ಎಲ್ಲಾ ಆಸ್ತಿ ಸಂಪತ್ತಿಗಿಂತ ಶಿಕ್ಷಣವೇ ಅತೀ ದೊಡ್ಡ ಆಸ್ತಿಯಾಗಿದೆ. ಶಿಕ್ಷಣದ ಅತೀ ದೊಡ್ಡ ಹಬ್ ಆಗಿ ಬೆಳೆದಿರುವ ಮೂಡುಬಿದಿರೆಯಲ್ಲಿ ಶಿಕ್ಷಣದ ಸಕಲ ವ್ಯವಸ್ಥೆಗಳಿವೆ. ಶೀಘ್ರದಲ್ಲಿ ಇಲ್ಲಿ ಪೂರ್ಣಪ್ರಮಾಣದ ವೈದ್ಯಕೀಯ ಕಾಲೇಜು ಕೂಡಾ ತೆರೆದುಕೊಳ್ಳಲಿದ್ದು ವಿದ್ಯಾರ್ಥಿಗಳು ಈ ಎಲ್ಲಾ ಅವಕಾಶಗಳನ್ನು ಬಳಸಿಕೊಳ್ಳಬೇಕು ಎಂದು ಮೂಡುಬಿದಿರೆ ಸಾರ್ವಜನಿಕ ಶ್ರೀ ಗಣೇಶೋತ್ಸವ ಟ್ರಸ್ಟ್ ಅಧ್ಯಕ್ಷ ನಿಶ್ಮಿತಾ ಗ್ರೂಪ್ಸ್ ಮಾಲೀಕ ನಾರಾಯಣ ಪಿ. ಎಂ. ನುಡಿದರು.

ಬ್ರಹ್ಮಶ್ರೀ ನಾರಾಯಣ ಗುರುಸ್ವಾಮಿ ಸೇವಾ ಸಂಘ (ರಿ.) ಇರುವೈಲು ಪುಚ್ಚಮೊಗರು ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಸ್ವಾಮಿ ಸೇವಾ ಮಹಿಳಾ ಘಟಕ ಇರುವೈಲು ಪುಚ್ಚಮೊಗರು ಇದರ ಆಶ್ರಯದಲ್ಲಿ ಇರುವೈಲು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಸಭಾಭವನದಲ್ಲಿ ಮೇ. 4ರಂದು ಜರಗಿದ ಪುಸ್ತಕಾ ವಿತರಣಾ ಕಾರ್ಯಕ್ರಮ ಹಾಗೂ ವಿವಿಧ ವಿದ್ಯಾರ್ಥಿ ವೇತನದ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಈ ಸಂದರ್ಭ ಗುಜರಾತ್ ಸಿಲ್ವಾಸದ ಉದ್ಯಮಿ ವೆಂಕಟೇಶ್ ಪೂಜಾರಿ ಅವರು ಕೊಡುಗೆಯಾಗಿ ನೀಡಿರುವ ಪುಸ್ತಕಗಳನ್ನು 500 ವಿದ್ಯಾರ್ಥಿಗಳಿಗೆ ವಿತರಿಸಲಾಯಿತು.

ಸಭಾಧ್ಯಕ್ಷತೆ ವಹಿಸಿದ್ದ ಬ್ರಹ್ಮಶ್ರೀ ನಾರಾಯಣ ಗುರುಸ್ವಾಮಿ ಸೇವಾ ಸಂಘ ಇರುವೈಲು ಪುಚ್ಚಮೊಗರು ಇದರ ಅಧ್ಯಕ್ಷ ಕುಮಾರ್ ಪೂಜಾರಿ ಇರುವೈಲು ಮಾತನಾಡಿ ಒಳ್ಳೆಯ ನುಡಿ, ಗುಣ ನಡತೆ ಮತ್ತು ಆಚಾರ ವಿಚಾರಗಳೇ ಮನುಷ್ಯನಲ್ಲಿರಬೇಕಾದ ಅತೀ ದೊಡ್ಡ ಶ್ರೀಮಂತಿಕೆಯಾಗಿದ್ದು ಸವಲತ್ತುಗಳ ಕೊರತೆಯಿಂದ ಮಕ್ಕಳು ಶಿಕ್ಷಣದಲ್ಲಿ ಹಿಂದೆ ಉಳಿಯಬಾರದು ಎಂಬ ಉದ್ದೇಶದಿಂದ ಪ್ರತಿವರ್ಷ ಸಂಘದ ವತಿಯಿಂದ ಇಂತಹ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗುತ್ತಿದ್ದು ಕಾರ್ಯಕ್ರಮದ ಯಶಸ್ಸಿಗೆ ಕೈ ಜೋಡಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಪುಸ್ತಕ ವಿತರಣಾ ಕಾರ್ಯಕ್ರಮದ ಪ್ರಾಯೋಜಕ: ಗುಜರಾತ್ ಸಿಲ್ವಾಸದ ಉದ್ಯಮಿ ವೆಂಕಟೇಶ್ ಪೂಜಾರಿ, ಇರುವೈಲಿನ ಉದ್ಯಮಿ ಸತೀಶ್ಚಂದ್ರ ಸಾಲ್ಯಾನ್ ಪಾಣಿಲ, ಚಂದ್ರಶೇಖರ್ ಎಡಪದವು, ಶ್ರೀ ಕ್ಷೇತ್ರ ಇರುವೈಲು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷೆ ಸುಜಾತ ಜಯರಾಂ ಶೆಟ್ಟಿ, ಬ್ರಹ್ಮಶ್ರೀ ನಾ.ಗು.ಸ್ವಾ.ಸೇ. ಮಹಿಳಾ ಘಟಕದ ಅಧ್ಯಕ್ಷೆ ದೀಪಾ ದಿನೇಶ್, ಕಾರ್ಯದರ್ಶಿ ಪ್ರಮೀಳಾ ರಾಜೇಶ್, ಇರುವೈಲು ಗ್ರಾ.ಪಂ. ಅಧ್ಯಕ್ಷೆ ಲಲಿತಾ, ಇರುವೈಲು ದ.ಕ.ಜಿ.ಪ. ಹಿ.ಪ್ರಾ. ಶಾಲೆಯ ಮುಖ್ಯೋಪಾಧ್ಯಾಯಿನಿ ಜೆಸಿಂತಾ, ಹೊಸಬೆಟ್ಟು ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿ ಶ್ರೀಮತಿ ಇ. ಉಪಸ್ಥಿತರಿದ್ದರು.

ನಾರಾಯಣ ಪಿ.ಎಂ., ಚಂದ್ರಶೇಖರ ಎಡಪದವು, ಪುಸ್ತಕದಾನಿ ವೆಂಕಟೇಶ್ ಪೂಜಾರಿ, ಸುಜಾತಾ ಜೆ. ಶೆಟ್ಟಿ, ಈ ಬಾರಿಯ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಹೊಸಬೆಟ್ಟು ಪ್ರೌಢಶಾಲೆಯಲ್ಲಿ ಅತ್ಯಧಿಕ ಅಂಕ ಪಡೆದ ವಿದ್ಯಾರ್ಥಿನಿ ಸತೀಶ್ ಪೂಜಾರಿ ಹರಿಣಾಕ್ಷಿ ದಂಪತಿಗಳ ಪುತ್ರಿ ಸಮೀಕ್ಷಾ ಅವರನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು. ಹೊಸಬೆಟ್ಟು ಸರಕಾರಿ ಪ್ರೌಢಶಾಲೆಯ ಅಭಿವೃದ್ಧಿ ನಿರಂತರ ಕೊಡುಗೆ ನೀಡುತ್ತಿರುವ ಇರುವೈಲು ಕುಮಾರ್ ಪೂಜಾರಿ ಮತ್ತು ಗುಜರಾತ್ ಸಿಲ್ವಾಸದ ಉದ್ಯಮಿ ವೆಂಕಟೇಶ್ ಪೂಜಾರಿ ಅವರನ್ನು ಸನ್ಮಾನಿಸಿದರು.

ದಿನೇಶ್ ಪೂಜಾರಿ ಕಟ್ಟಣಿಗೆ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು. ರವಿಪೂಜಾರಿ ತ್ಯಾಂಪೊಟ್ಟು ಪ್ರಾರ್ಥಿಸಿದರು. ಸ್ವಾತಿ ಗಣೇಶ್ ಕುತ್ಯಾಡಿ, ಪುಸ್ತಕ ವಿತರಣೆ ಕಾರ್ಯಕ್ರಮ ನಡೆಸಿ ವಂದಿಸಿದರು. ರಾಜೇಶ್ ಕಾಳೂರು, ಮುತ್ತಪ್ಪ ಸಾಲ್ಯಾನ್, ಪ್ರದೀಪ್ ಶೆಟ್ಟಿ, ಸೋಮಶೇಖರ್, ಪ್ರವೀಣ್ ಪೂಜಾರಿ, ಪ್ರಮೀಳಾ ರಾಜೇಶ್ ತಾರಾ ಜನಾರ್ದನ್, ರೇಣುಕಾ ಪ್ರಶಾಂತ್, ಹರಿಣಾಕ್ಷಿ ಸತೀಶ್ ಮತ್ತು ಸೇವಂತಿ ಅತಿಥಿಗಳನ್ನು ಗೌರವಿಸಿದರು.

## ನಾಗರಿಕರಿಗೆ ಸುಗಮ ಸಂಚಾರಕ್ಕೆ ಪಾದಚಾರಿ ಮಾರ್ಗ ನಿರ್ಮಿಸಲು ಆಯುಕ್ತ ಮಹೇಶ್ವರ್ ರಾವ್ ಸೂಚನೆ

**ಬೆಂಗಳೂರು, ಮೇ.6–** ನಗರದಲ್ಲಿ ನಾಗರಿಕರಿಗೆ ಸುರಕ್ಷಿತ ಮತ್ತು ನಡೆಯಲು ಯೋಗ್ಯವಾದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ಬರುವ ಕೆಂಪೇಗೌಡ ಬಸ್ ನಿಲ್ದಾಣದ ಬಳಿಯ ಗುಬ್ಬಿ ತೋಟದಪ್ಪ ರಸ್ತೆ, ಧನ್ವಂತರಿ ರಸ್ತೆ, ಟ್ಯಾಂಕ್ ಬಂಡ್ ರಸ್ತೆ ಹಾಗೂ ಬಸ್ ಘಟಕ ಪರಿವೀಕ್ಷಣೆ ನಡೆಸಿದ ವೇಳೆ, ಬೆಂಗಳೂರಿನಲ್ಲಿ ಪಾದಚಾರಿಗಳಿಗೆ ಮೊದಲ ಸ್ಥಾನ ನೀಡಿ, ಅವರಿಗೆ ಸುಗಮವಾಗಿ ಸಂಚರಿಸುವಂತಹ ಪಾದಚಾರಿ ಮಾರ್ಗಗಳನ್ನು ನಿರ್ಮಿಸಬೇಕು. ಜೊತೆಗೆ ಪಾದಚಾರಿ ಮಾರ್ಗಗಳನ್ನು ಕಾಲ-ಕಾಲಕ್ಕೆ ಸರಿಯಾಗಿ ನಿರ್ವಹಣೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.ಶಾಂತಲಾ ಸಿಲ್ಕ್ ಜಂಕ್ಷನ್ ಬಳಿ ಬಸ್ ನಿಲ್ದಾಣಕ್ಕೆ ಹೊಂದಿಕೊಂಡಂತಿರುವ ಪಾದಚಾರಿ ಮಾರ್ಗ ಪರಿಶೀಲಿಸಿದರು. ಈ ವೇಳೆ ಬಸ್ ನಿಲ್ದಾಣ ಒಳಭಾಗದಲ್ಲಿ ಹೆಚ್ಚುವರಿ ಜಾಗ ಇರುವುದನ್ನು ಗಮನಿಸಿ ಪಾದಚಾರಿ ಮಾರ್ಗವನ್ನು ಅಗಲೀಕರಣ ಮಾಡುವ ಕುರಿತು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದರು.ಮೆಜೆಸ್ಟಿಕ್ ಬಸ್ ನಿಲ್ದಾಣದ ಸುತ್ತಲೂ ಸಾಕಷ್ಟು ಶೌಚಾಲಯಗಳಿವೆ. ಆದರೂ ಕೂಡ ಬಹುತೇಕ ಕಡೆ ಪಾದಚಾರಿ ಮಾರ್ಗಗಳಲ್ಲಿಯೇ ಮೂತ್ರ ವಿಸರ್ಜನೆ ಮಾಡಿದ್ದು, ಅದರಿಂದ ದುರ್ವಾಸನೆ ಬರುತ್ತಿದೆ. ಈ ಸಂಬಂಧ ಎಲ್ಲಾ ಕಡೆ ಸ್ವಚ್ಛತೆ ಕಾಪಾಡುವುದರ ಜೊತೆಗೆ ಪಾದಚಾರಿ ಮಾರ್ಗಗಳಲ್ಲಿ ಮೂತ್ರ ವಿಸರ್ಜನೆ ಮಾಡುವುದನ್ನು ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.



ಸಂಗೊಳ್ಳಿ ರಾಯಣ್ಣ ಪ್ರತಿಮೆಯಿಂದ ಧನ್ವಂತರಿ ರಸ್ತೆ ಕಡೆ ಹೋಗುವ ಪಾದಚಾರಿ ಮಾರ್ಗದಲ್ಲಿ ಬೃಹತ್ ರಿಂಗ್ ಪೈಪ್ ಇರುವುದನ್ನು ಕಂಡು, ಅದನ್ನು ಈ ಕೂಡಲೆ ತೆರವುಗೊಳಿಸಲು ಕ್ರಮವಹಿಸ ಬೇಕು. ಒಣಗಿರುವ ಮರದ ದಿಮ್ಮಿ ಹಾಗೂ ಕೊಂಬೆಗಳಿರುವುದನ್ನು ಕಂಡು ಅರಣ್ಯ ವಿಭಾಗದ ಅಧಿಕಾರಿಗಳ ಗಮನಕ್ಕೆ ತಂದು ತೆರವು ಕಾರ್ಯವನ್ನು ಕೈಗೊಳ್ಳಲು ಸೂಚಿಸಿದರು. ರೈಲ್ವೆ ನಿಲ್ದಾಣದ ರಸ್ತೆ ಜಲಮಂಡಳಿ ವಾಲ್ ತೆರದ ಸ್ಥಿತಿಯಲ್ಲಿದ್ದು, ಸ್ಲ್ಯಾಬ್ ಅಳವಡಿಸದೆ ಬ್ಯಾರಿಕೇಡ್ ಅಡ್ಡಲಾಗಿ ಹಾಕಲಾಗಿದೆ. ಸ್ಲ್ಯಾಬ್ ಅಳವಡಿಸಲು ಸೂಚಿಸಿದರು. ಮ್ಯಾನ್ಪೋ ಬೆಲ್ ಕಟ್ಟಡದ ಮುಂಭಾಗ ಪಾದಚಾರಿಗೆ ಅಡ್ಡಲಾಗಿ ಬ್ಯಾರಿಕೇಡ್ ಅಳವಡಿಸಿದ್ದು, ಅದನ್ನು ತೆರವು ಗೊಳಿಸಲು ಸೂಚಿಸಿದರು.

ಪಾದಚಾರಿ ಮಾರ್ಗಗಳಲ್ಲಿ ಬಹುತೇಕ ಕಡೆ ಕರ್ಬ್ಸ್ ಹಾಳಾಗಿದ್ದು, ಅವುಗಳನ್ನು ಕೂಡಲೇ ದುರಸ್ತಿಪಡಿಸಬೇಕು. ಇನ್ನು ಕೆಲವೆಡೆಯ ಪಾದಚಾರಿ ಮಾರ್ಗಗಳಲ್ಲಿ ಸ್ಲ್ಯಾಬ್ಸ್ ಹಾಳಾಗಿದ್ದು, ಅವುಗಳನ್ನು ಬದಲಿಸಬೇಕು. ಬೊಲಾರ್ಡ್ಸ್ ಅಗತ್ಯವಿರುವ ಕಡೆ ಕೂಡಲೇ ಅಳವಡಿಸಬೇಕು. ಒಳಚರಂಡಿಗೆ ಅಳವಡಿಸಿರುವ ಡಕ್ಟ್‌ಗಳ ಮೂಲಕ ಕೊಳಚೆ ನೀರು ಹೊರಬರುತ್ತಿರುವುದನ್ನು ಗಮನಿಸಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಕೂಡಲೇ ಸರಿಪಡಿಸಲು ಸೂಚಿಸಿದರು.

ಮೆಜೆಸ್ಟಿಕ್ ಸುತ್ತ-ಮುತ್ತಲಿನ ಪ್ರದೇಶದ ಪಾದಚಾರಿ ಮಾರ್ಗಗಳಲ್ಲಿ ವ್ಯಾಪಾರ ಮಾಡುತ್ತಿರುವ ಬೀದಿ ವ್ಯಾಪಾರಿಗಳು ಪಾದಚಾರಿಗಳಿಗೆ ಯಾವುದೇ ಸಮಸ್ಯೆಯಾಗದಂತೆ ವ್ಯಾಪಾರ ಮಾಡಬೇಕು ಹಾಗೂ ಸ್ವಚ್ಛತೆ ಕಾಪಾಡ ಬೇಕು. ಬೀದಿ ಬದಿ ವ್ಯಾಪಾರ ಮಾಡಲು ಗುರುತಿನ ಚೀಟಿ ನೀಡಿದಂತಹ ವ್ಯಾಪಾರಿಗಳನ್ನು ಬಿಟ್ಟು ಉಳಿದವರಿಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಮೆಜೆಸ್ಟಿಕ್ ಒಳಗಿನಿಂದ ಬರುವ ಮಾರ್ಗದಲ್ಲಿ ರಸ್ತೆ ಗುಂಡಿಗಳನ್ನು ಕಂಡು ಅದನ್ನು ಕೂಡಲೆ ಮುಚ್ಚಲು ತಿಳಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಮೇ 07, 2025, ಬುಧವಾರ

## ಒಳಪುಟಗಳಲ್ಲಿ

ಒಂದೇ ಬಾರಿಗೆ ಪಾಕ್‌ಗೆ ಹರಿದ 28,000 ಕ್ಯೂಸೆಕ್ ನೀರು; ಹಠಾತ್ ಪ್ರವಾಹ ಭೀತಿ - ಪು.4

ವೈದ್ಯ ಕ್ಷೇತ್ರದ ಪದವೀಧರರು ಸಮಾಜದ ಸ್ವಾಸ್ಥ್ಯ ಕಾಪಾಡುವ ಆರೋಗ್ಯದಾತರು: ಶರಣ ಪ್ರಕಾಶ ಪಾಟೀಲ್- ಪು.5

ಸಂವಿಧಾನದ ಉಳಿವಿಗಾಗಿ ಬೀದಿಗಿಳಿಯಲಿದೆ ಕಾಂಗ್ರೆಸ್: ಡಾ. ಶರಣಪ್ರಕಾಶ್- ಪು.6

# ಆಸ್ತಿ ವಿವರ ಪ್ರಕಟಿಸಿದ ಸುಪ್ರೀಂಕೋರ್ಟ್ ನ್ಯಾಯಾಧೀಶರು

### 33 ನ್ಯಾಯಾಧೀಶರಲ್ಲಿ 21 ಜನರಿಂದ ಆಸ್ತಿ ಬಹಿರಂಗ



**ನವದೆಹಲಿ,ಮೇ 6:** ಸುಪ್ರೀಂಕೋರ್ಟ್‌ನ 33 ಹಾಲಿ ನ್ಯಾಯಾಧೀಶರಲ್ಲಿ 21 ನ್ಯಾಯಾಧೀಶರು ತಮ್ಮ ಆಸ್ತಿ ವಿವರಗಳನ್ನು ಸಾರ್ವಜನಿಕರಿಗೆ ಬಹಿರಂಗಪಡಿಸಿದ್ದಾರೆ. ಆಸ್ತಿ ವಿವರಗಳನ್ನು ಸುಪ್ರೀಂಕೋರ್ಟ್ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ನ್ಯಾಯಾಂಗದೊಳಗಿನ ಇತ್ತೀಚಿನ ಭ್ರಷ್ಟಾಚಾರದ ಆರೋಪಗಳು ವಿಶೇಷವಾಗಿ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ವಿವಾದದ ನಂತರ, ಏ.1ರಂದು ಸುಪ್ರೀಂಕೋರ್ಟ್‌ನ ಪೂರ್ಣ ನ್ಯಾಯಾಲಯವು ನ್ಯಾಯಾಧೀಶರ ಆಸ್ತಿಗಳ ಮಾಹಿತಿಯನ್ನು ಉನ್ನತ ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ವಲಯದಲ್ಲಿ ಇರಿಸಬೇಕೆಂದು ನಿರ್ಧರಿಸಿತು, ಅದರಂತೆ ವಿವರಗಳನ್ನು ಪ್ರಕಟಿಸಲಾಗಿದೆ.

ಆದಾಗ್ಯೂ 12 ನ್ಯಾಯಾಧೀಶರ ಮಾಹಿತಿಯನ್ನು ಇನ್ನೂ ಸಾರ್ವಜನಿಕಗೊಳಿಸಲಾಗಿಲ್ಲ, ಶೀಘ್ರದಲ್ಲಿ ಅವರು ಮಾಹಿತಿ ನೀಡುವ ಸಾಧ್ಯತೆಗಳಿವೆ. ಮುಖ್ಯ ನ್ಯಾ.ಸಂಜೀವ್ ಖನ್ನಾ ಅವರ ಆಸ್ತಿಯಲ್ಲಿ 55 ಲಕ್ಷ ರೂಪಾಯಿಗಳ ಸ್ಥಿರ ಠೇವಣಿ ಮತ್ತು 1 ಕೋಟಿ ರೂಪಾಯಿಗಳ ಸಾರ್ವಜನಿಕ ಭವಿಷ್ಯನಿಧಿ ಸೇರಿದೆ. ಅವರು ರಿಯಲ್ ಎಸ್ಟೇಟ್ ಮತ್ತು ಇತರ ಹೂಡಿಕೆಗಳು ಸೇರಿದಂತೆ ಕೆಲವು ಉಳಿತಾಯ ಮತ್ತು ಆಸ್ತಿಗಳನ್ನು ಸಹ ಹೊಂದಿದ್ದಾರೆ. ಅವರಿಗೆ ದೆಹಲಿಯಲ್ಲಿ ಎರಡು ಫ್ಲಾಟ್‌ಗಳಿವೆ. ತಮ್ಮ ಮಗಳೊಂದಿಗೆ ಗುರುಗ್ರಾಮದಲ್ಲಿ ಫ್ಲಾಟ್ ಸಹ ಖರೀದಿಸಿದ್ದಾರೆ. ಅವರ ತವರು ಜಿಲ್ಲೆ ಹಿಮಾಚಲ ಪ್ರದೇಶದಲ್ಲಿ ಅವರಿಗೆ ಪೂರ್ವಜರಿಂದ ಬಂದ ಕೆಲವು ಆಸ್ತಿಗಳಿವೆ. ನ್ಯಾಯಮೂರ್ತಿ ಕೆ.ವಿ. ವಿಶ್ವನಾಥನ್ ಅವರ ಆಸ್ತಿಯ ಮೌಲ್ಯ ಸುಮಾರು 120 ಕೋಟಿ ರೂಪಾಯಿಗಳಷ್ಟಿದೆ. ಇದರಲ್ಲಿ ಷೇರುಗಳು, ಮ್ಯೂಚುಯಲ್ ಫಂಡ್‌ಗಳು, ರಿಯಲ್ ಎಸ್ಟೇಟ್ ಮತ್ತು ಇತರ ಹಣಕಾಸು ಆಸ್ತಿಗಳು ಸೇರಿವೆ. ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯ್ ಅವರ ಆಸ್ತಿಯಲ್ಲಿ ರಿಯಲ್ ಎಸ್ಟೇಟ್, ಬ್ಯಾಂಕ್ ಠೇವಣಿಗಳು ಮತ್ತು ಇತರ ಹೂಡಿಕೆಗಳು ಸೇರಿವೆ. ನಿರ್ದಿಷ್ಟ ಮೌಲ್ಯವನ್ನು ಸಾರ್ವಜನಿಕವಾಗಿ ಉಲ್ಲೇಖಿಸಲಾಗಿಲ್ಲ, ಆದರೆ ಇವರ ಆಸ್ತಿಯು ಮಹಾರಾಷ್ಟ್ರದಲ್ಲಿ ಕೇಂದ್ರೀಕೃತವಾಗಿದೆ.

ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ಆಸ್ತಿಯಲ್ಲಿ ಜಮೀನು, ವಸತಿ ಆಸ್ತಿಗಳು ಮತ್ತು ಹಣಕಾಸು ಹೂಡಿಕೆಗಳು ಸೇರಿವೆ. ಆಸ್ತಿಯ ಒಟ್ಟು ಮೌಲ್ಯದ ಕುರಿತು ನಿಖರವಾದ ಮಾಹಿತಿಯಿಲ್ಲ, ಆದರೆ ಪಂಜಾಬ್ ಮತ್ತು ಹರಿಯಾಣದಲ್ಲಿ ಆಸ್ತಿಗಳಿವೆ. ಇಬ್ಬರು ಮಹಿಳಾ ನ್ಯಾಯಮೂರ್ತಿಗಳ ಪೈಕಿ ಒಬ್ಬರಾದ ನ್ಯಾ. ಬೇಲಾ ಎಂ ತ್ರಿವೇದಿ ಅವರು ತಮ್ಮ ಆಸ್ತಿಯ ವಿವರವನ್ನು ಘೋಷಿಸಿದ್ದಾರೆ.

ಇದರಲ್ಲಿ ಗುಜರಾತ್‌ನಲ್ಲಿ ರಿಯಲ್ ಎಸ್ಟೇಟ್ ಮತ್ತು ಇತರ ಹಣಕಾಸು ಆಸ್ತಿಗಳು ಸೇರಿವೆ. ನಿರ್ದಿಷ್ಟ ಮೌಲ್ಯ ಉಲ್ಲೇಖವಿಲ್ಲ. ನ್ಯಾಯಮೂರ್ತಿ ಅಭಯ್ ಎಸ್.ಓಕಾ, ವಿಕ್ರಮ್ ನಾಥ್, ಜೆ.ಕೆ. ಮಹೇಶ್ವರಿ, ಎಂ.ಎಂ.ಸುಂದರೇಶ್, ಪಮಿಡಿಘಂಟಮ್ ನರಸಿಂಹ, ಕೆ.ವಿ.ವಿಶ್ವನಾಥನ್, ಉಜ್ಜಲ್ ಭುಯಾನ್, ಎಸ್.ವೆಂಕಟನಾರಾಯಣ ಭಟ್ಟಿ, ಸತೀಶ್‌ಚಂದ್ರ ಶರ್ಮಾ, ಆಗಸ್ಟಿನ್ ಜಾರ್ಜ್ ಮಸೀಹ್, ಸಂದೀಪ್ ಮೆಹತಾ, ಪ್ರಸನ್ನ ಬಾಲಚಂದ್ರ ವರಾಳೆ, ಆರ್. ಮಹಾದೇವನ್, ಮನಮೋಹನ್, ಕೆ.ವಿ. ಚಂದ್ರನ್, ಜೊಯ್ಮಾಲ್ಯ ಬಾಗ್ಚಿ ಕೂಡಾ ಆಸ್ತಿ ಘೋಷಿಸಿದ್ದಾರೆ. ಈ ನ್ಯಾಯಮೂರ್ತಿಗಳ ಆಸ್ತಿಗಳಲ್ಲಿ ರಿಯಲ್ ಎಸ್ಟೇಟ್, ಬ್ಯಾಂಕ್ ಠೇವಣಿಗಳು, ಷೇರುಗಳು, ಮ್ಯೂಚುಯಲ್ ಫಂಡ್‌ಗಳು ಮತ್ತು ಇತರ ಹಣಕಾಸು ಹೂಡಿಕೆ ಸೇರಿವೆ. ಆದರೆ, ಒಟ್ಟಾರೆ ಮೌಲ್ಯದ ಕುರಿತು ನಿಖರ ಮಾಹಿತಿಯನ್ನು ಸಾರ್ವಜನಿಕವಾಗಿ ಉಲ್ಲೇಖಿಸಿಲ್ಲ.

## ಪಹಲ್ಗಾಮ್ ದಾಳಿ ಬಗ್ಗೆ ಮೋದಿಗೆ ಮೊದಲೇ ಗೊತ್ತಿತ್ತು; ಖರ್ಗೆ ಆರೋಪ



**ನವದೆಹಲಿ,ಮೇ 6:** ಜಮ್ಮು-ಕಾಶ್ಮೀರದ ಪಹಲ್ಗಾಮ್ ಉಗ್ರರ ದಾಳಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿಗೆ ಮೊದಲೇ ಮಾಹಿತಿ ಇತ್ತು. ಅದಕ್ಕಾಗಿಯೇ ಅವರು ಕಾಶ್ಮೀರ ಭೇಟಿ ರದ್ದು ಮಾಡಿದ್ದರು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗಂಭೀರ ಆರೋಪ ಮಾಡಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಗುಪ್ತಚರ ವರದಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮೊದಲೇ ಬಂದಿತ್ತು. ವರದಿ ಬಂದ ನಂತರ ಕೇಂದ್ರಾಡಳಿತ ಪ್ರದೇಶಕ್ಕೆ ಮೋದಿ ತಮ್ಮ ಭೇಟಿಯನ್ನು ರದ್ದುಗೊಳಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಪ್ರಧಾನಿ ಮೋದಿ ಅವರಿಗೆ ಇದು ತಿಳಿದಿದ್ದರೂ ಅವರು ಏನೂ ಮಾಡಲಿಲ್ಲ. ದಾಳಿಗೆ ಮೂರು ದಿನಗಳ ಮೊದಲು ಪ್ರಧಾನಿ ಮೋದಿಗೆ ಗುಪ್ತಚರ ವರದಿಯನ್ನು ಕಳುಹಿಸಲಾಗಿತ್ತು.

## ಜಾತಿಗಣತಿ: ಸಿಎಂ ಸಿದ್ದರಾಮಯ್ಯ ವಿರುದ್ಧ ದೇವೇಗೌಡರ ವಾಗ್ದಾಳಿ

### ಜಾತಿ ಸಮೀಕ್ಷೆಯ ಮೂಲಕ ಬೆಣ್ಣೆ ತಿಂದು, ಉಳಿದವರಿಗೆ ನೀರು ಮಜ್ಜಿಗೆ ಕೊಡಲು ಹೊರಟಿದ್ದಾರೆ



**ನವದೆಹಲಿ, ಮೇ 6;** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರ ಮುಂದಿನ ಜನಗಣತಿ ಜೊತೆಯಲ್ಲಿಯೇ ಜಾತಿ ಗಣತಿಯನ್ನು ಮಾಡುತ್ತಿರುವುದು ಸ್ವಾಗತಾರ್ಹ ಎಂದು ಮಾಜಿ ಪ್ರಧಾನಿ ದೇವೇಗೌಡರು ಹೇಳಿದರು.

ಕೇಂದ್ರದ ನಿಲುವಿಗೆ ನಮ್ಮ ಸಂಪೂರ್ಣ ಬೆಂಬಲವಿದೆ. ಕರ್ನಾಟಕದ ಜಾತಿಗಣತಿಗೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿಯೇ ಸಹಮತ ಇಲ್ಲ. ಈ ಬಗ್ಗೆ ಸಿದ್ದರಾಮಯ್ಯ ಅವರಿಗೆ ನಾನು ಪತ್ರ ಬರೆದಿದ್ದೆ. ನನಗೆ ಅವರು ಈವರೆಗೆ ಉತ್ತರ ಕೊಟ್ಟಿಲ್ಲ ಎಂದು ಅವರು ಹೇಳಿದರು. ಸಿದ್ದರಾಮಯ್ಯ ಅವರು ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುತ್ತಾರೆ. ಹಾಗಾದರೆ ಸಿಎಂ ಕಚೇರಿಯಲ್ಲಿ ಎಷ್ಟು ಹಿಂದುಳಿದವರು ಇದ್ದಾರೆ ಸಿಎಂ ಕಚೇರಿಯಲ್ಲಿ ಅವರದ್ದೆ ಸಮುದಾಯದ ಉದ್ಯೋಗಿಗಳು ಎಷ್ಟಿದ್ದಾರೆ ಎನ್ನುವುದನ್ನು ಹೇಳಬೇಕು. ಅವರು ಹೇಳುತ್ತಾರೆಯೇ ಅಂತಹ ಸಿದ್ದರಾಮಯ್ಯನವರು ಮೋದಿ ಅವರಿಗೆ ಪಾಠ ಮಾಡುತ್ತಾರೆ ಎಂದು ಅವರು ಟೀಕಾಪ್ರಹಾರ ನಡೆಸಿದರು. ಜಾತಿ ಸಮೀಕ್ಷೆಯ ಮೂಲಕ ಬೆಣ್ಣೆ ತಿಂದು, ಉಳಿದವರಿಗೆ ನೀರು ಮಜ್ಜಿಗೆ ಕೊಡಲು ಸಿದ್ದರಾಮಯ್ಯ ಹೊರಟಿದ್ದಾರೆ. ಇದು ಸರಿಯಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದು ಅವರು ಹೇಳಿದರು.

## ಭಾರತ - ಪಾಕಿಸ್ತಾನ ಮಿಲಿಟರಿ ಉದ್ವಿಗ್ನತೆ ತಪ್ಪಿಸುವಂತೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಗುಟೆರೆಸ್ ಒತ್ತಾಯ



ವಿಶ್ವಸಂಸ್ಥೆ, ಮೇ 6 : ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಬಂಧಗಳು "ಕುದಿಯುವ ಹಂತವನ್ನು ತಲುಪುವುದನ್ನು" ನೋಡುವುದು ನೋವುಂಟುಮಾಡುತ್ತದೆ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಹೇಳಿದ್ದಾರೆ ಮತ್ತು ಎರಡೂ ದೇಶಗಳು ಸುಲಭವಾಗಿ ನಿಯಂತ್ರಣ ತಪ್ಪಬಹುದಾದ ಮಿಲಿಟರಿ ಮುಖಾಮುಖಿಯನ್ನು ತಪ್ಪಿಸುವಂತೆ ಒತ್ತಾಯಿಸಿದ್ದಾರೆ. ಮಾಧ್ಯಮಗಳಿಗೆ ನೀಡಿದ ಭಾಷಣದಲ್ಲಿ, ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿದರು ಮತ್ತು ಅದಕ್ಕೆ ಕಾರಣರಾದವರನ್ನು "ವಿಶ್ವಾಸಾರ್ಹ ಮತ್ತು ಕಾನೂನುಬದ್ಧ ವಿಧಾನಗಳ ಮೂಲಕ" ನ್ಯಾಯಕ್ಕೆ ತರಬೇಕು ಎಂದು ಹೇಳಿದರು. ಉದ್ವಿಗ್ನತೆಯನ್ನು ಕಡಿಮೆ ಮಾಡುವ ಪ್ರಯತ್ನಗಳಲ್ಲಿ ಸಹಾಯ ಮಾಡಲು ವಿಶ್ವಸಂಸ್ಥೆಯ ಉತ್ತಮ ಕಚೇರಿಗಳನ್ನು ಗುಟೆರೆಸ್ ನೀಡಿದರು ಮತ್ತು "ಮಿಲಿಟರಿ ಪರಿಹಾರವು ಪರಿಹಾರವಲ್ಲ" ಎಂದು ಪುನರುಚ್ಚರಿಸಿದರು. "ಉಲಿಮಿಟೆಡ್ ನೇಷನ್ಸ್ ಉದ್ವಿಗ್ನತೆ, ರಾಜತಾಂತ್ರಿಕತೆ ಮತ್ತು ಶಾಂತಿಗೆ ನವೀಕೃತ ಬದ್ಧತೆಯನ್ನು ಉತ್ತೇಜಿಸುವ ಯಾವುದೇ ಉಪಕ್ರಮವನ್ನು ಬೆಂಬಲಿಸಲು ಸಿದ್ಧವಾಗಿದೆ" ಎಂದು ಪುನರುಚ್ಚರಿಸಿದರು. ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಕುರಿತು ಮಾಧ್ಯಮಗಳಿಗೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮಾಡಿದ ಭಾಷಣವು ಎರಡೂ ರಾಷ್ಟ್ರಗಳೊಂದಿಗೆ ಮಾತನಾಡಿದ ಕೆಲವು ದಿನಗಳ ನಂತರ ಬಂದಿದೆ, ಉದ್ವಿಗ್ನತೆಯನ್ನು ಕಡಿಮೆ ಮಾಡುವ ಪ್ರಯತ್ನಗಳನ್ನು ಬೆಂಬಲಿಸಲು ತಮ್ಮ ಉತ್ತಮ ಕಚೇರಿಗಳನ್ನು ನೀಡುವುದಾಗಿ ಹೇಳಿದರು.

"ಈ ದಾಳಿಯ ಅಪರಾಧಿಗಳು, ಯೋಜನೆ ರೂಪಿಸಿದವರು ಮತ್ತು ಬೆಂಬಲಿಗರನ್ನು ನ್ಯಾಯದ ಕಟಕಟೆಗೆ ತರುವುದು ಭಾರತ ದೃಢ ನಿರ್ಧಾರ" ಎಂದು ಗುಟೆರೆಸ್ ಜೊತೆಗಿನ ಮಾತುಕತೆಯಲ್ಲಿ ವಿದೇಶಾಂಗ ಸಚಿವ ಎಸ್ ಜೈಶಂಕರ್ ಒತ್ತಿ ಹೇಳಿದರು. ಪ್ರಧಾನಿ ಮೋದಿ ಪ್ರತಿಜ್ಞೆ ಮಾಡಿರುವಂತೆ ದಾಳಿಕೋರರು ಮತ್ತು ಅವರ ಬೆಂಬಲಿಗರನ್ನು ಭೂಮಿಯ ತುದಿಯವರೆಗೆ ಹಿಂಬಾಲಿಸುವುದು ಖಚಿತ. ಏ.22ರ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಉಭಯ ದೇಶಗಳ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಚರ್ಚಿಸಲು ಪಾಕಿಸ್ತಾನ ಕರೆದಿದ್ದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅನೌಪಚಾರಿಕ ಅಧಿವೇಶನದ ನಂತರ ಸೋಮವಾರ ಸಂಜೆ ಗುಟೆರೆಸ್ ಅವರ ಹೇಳಿಕೆ ಬಂದಿದೆ.

## ಮೀಸಲಾತಿ ಮೇಲಿನ ಶೇ.50 ಮಿತಿ ತೆಗೆದುಹಾಕಿ: ಪ್ರಧಾನಿಗೆ ಖರ್ಗೆ ಆಗ್ರಹ



**ನವದೆಹಲಿ,ಮೇ 6:** ಮುಂಬರುವ ಜನಗಣತಿಯಲ್ಲಿ ಜಾತಿ ಎಣಿಕೆ ಕುರಿತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಪ್ರಧಾನಿ ನರೇಂದ್ರ ಮೋದಿಗೆ ಮೂರು ಸಲಹೆಗಳನ್ನು ನೀಡಿದ್ದಾರೆ, ಅದರಲ್ಲಿ ಒಂದು ಮೀಸಲಾತಿ ಮೇಲಿನ ಶೇ.50 ಮಿತಿಯನ್ನು ತೆಗೆದುಹಾಕುವುದು. ಪ್ರಧಾನಿ ಮೋದಿಗೆ ಬರೆದ ಪತ್ರದಲ್ಲಿ, ಖರ್ಗೆ ತಮ್ಮ ಸಾಮಾಜಿಕ ಮಾಧ್ಯಮ ಹ್ಯಾಂಡಲ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದರು, "ನೀವು ಈಗ ಯಾವುದೇ ವಿವರಗಳನ್ನು ಒದಗಿಸದೆ, ಮುಂದಿನ ಜನಗಣತಿಯಲ್ಲಿ (ವಾಸ್ತವವಾಗಿ 2021 ರಲ್ಲಿ ನಡೆಯಬೇಕಿತ್ತು) ಜಾತಿಯನ್ನು ಪ್ರತ್ಯೇಕ ವರ್ಗವಾಗಿ ಸೇರಿಸಲಾಗುವುದು ಎಂದು ಘೋಷಿಸಿದ್ದೀರಿ. ನಿಮ್ಮ ಪರಿಗಣನೆಗೆ ನನಗೆ ಮೂರು ಸಲಹೆಗಳಿವೆ" ಎಂದು ಅವರು ಹೇಳಿದರು.

ಜನಗಣತಿ ಪ್ರಶ್ನಾವಳಿಯ ವಿನ್ಯಾಸವು ನಿರ್ಣಾಯಕವಾಗಿದೆ ಎಂದು ಖರ್ಗೆ ಹೇಳಿದರು ಮತ್ತು "ಕೇಂದ್ರ ಗೃಹ ಸಚಿವಾಲಯವು ತೆಲಂಗಾಣ ಮಾದರಿಯನ್ನು ಬಳಸಿಕೊಳ್ಳುವಂತೆ ಕೇಳಿಕೊಂಡರು - ಪ್ರಶ್ನಾವಳಿಯನ್ನು ಅಂತಿಮಗೊಳಿಸಲು ಅಳವಡಿಸಿಕೊಂಡ ವಿಧಾನ ಮತ್ತು ಕೇಳಲಾದ ಅಂತಿಮ ಪ್ರಶ್ನೆಗಳ ಸೆಟ್" ಎರಡನ್ನೂ. ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಒಬಿಸಿಗಳಿಗೆ ಮೀಸಲಾತಿ ಮೇಲಿನ ಶೇ.50 ಮಿತಿಯನ್ನು ಸಾಂವಿಧಾನಿಕ ತಿದ್ದುಪಡಿಗಳ ಮೂಲಕ ತೆಗೆದುಹಾಕುವಂತೆಯೂ ಅವರು ಸೂಚಿಸಿದರು, ಇದನ್ನು "ನಿರಂಕುಶವಾಗಿ ವಿಧಿಸಲಾಗಿದೆ" ಎಂದು ಅವರು ಹೇಳಿದರು.

"ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿಯೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಒಬಿಸಿಗಳಿಗೆ ಮೀಸಲಾತಿ ಒದಗಿಸುವ ಆರ್ಟಿಕಲ್ 15(5) ಅನ್ನು ಜಾರಿಗೆ ತರುವುದು ಖರ್ಗೆಯವರ ಮೂರನೇ ಸಲಹೆಯಾಗಿದೆ. ಜಾತಿ ಜನಗಣತಿಯಂತಹ ಯಾವುದೇ ಕಾರ್ಯವನ್ನು ನಮ್ಮ ಸಮಾಜದ ಹಿಂದುಳಿದ, ತುಳಿತಕ್ಕೊಳಗಾದ ಮತ್ತು ಅಂಚಿನಲ್ಲಿರುವ ವರ್ಗಗಳಿಗೆ ಅವರ ಹಕ್ಕುಗಳನ್ನು ನೀಡುವ ಯಾವುದೇ ಕಾರ್ಯವನ್ನು ನಡೆಸುವುದನ್ನು ಯಾವುದೇ ರೀತಿಯಲ್ಲಿ ವಿಭಜಕವೆಂದು ಪರಿಗಣಿಸಲಾಗುವುದಿಲ್ಲ ಮತ್ತು ಪರಿಗಣಿಸಬಾರದು. ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಹೇಡಿತನದ ಭಯೋತ್ಪಾದಕ ದಾಳಿಯ ನಂತರ ನಾವು ಮಾಡಿದಂತೆ, ನಮ್ಮ ಮಹಾನ್ ರಾಷ್ಟ್ರ ಮತ್ತು ನಮ್ಮ ವಿಶಾಲ ಹೃದಯದ ಜನರು ಯಾವಾಗಲೂ ಅಗತ್ಯವಿದ್ದಾಗ ಒಂದಾಗಿದ್ದಾರೆ" ಎಂದು ಖರ್ಗೆ ಹೇಳಿದರು.

"ನಮ್ಮ ಸಂವಿಧಾನದ ಪೀಠಿಕೆಯಲ್ಲಿ ಪ್ರತಿಜ್ಞೆ ಮಾಡಿದಂತೆ ಸಾಮಾಜಿಕ ಮತ್ತು ಆರ್ಥಿಕ ನ್ಯಾಯ ಮತ್ತು ಸ್ಥಾನಮಾನ ಮತ್ತು ಅವಕಾಶದ ಸಮಾನತೆಯನ್ನು ಖಚಿತಪಡಿಸಿಕೊಳ್ಳಲು ಮೇಲೆ ಸೂಚಿಸಲಾದ ಸಮಗ್ರ ರೀತಿಯಲ್ಲಿ ಜಾತಿ ಜನಗಣತಿಯನ್ನು ನಡೆಸುವುದು ಸಂಪೂರ್ಣವಾಗಿ ಅಗತ್ಯವಾಗಿದೆ ಎಂದು ಕಾಂಗ್ರೆಸ್ ನಂಬುತ್ತದೆ" ಎಂದು ಅವರು ಹೇಳಿದರು. ತಮ್ಮ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಅವರು ಆಶಿಸಿದರು ಮತ್ತು ಜಾತಿ ಜನಗಣತಿಯ ವಿಷಯದ ಕುರಿತು ಶೀಘ್ರದಲ್ಲೇ ಎಲ್ಲಾ ರಾಜಕೀಯ ಪಕ್ಷಗಳೊಂದಿಗೆ ಸಂವಾದ ನಡೆಸುವಂತೆ ಪ್ರಧಾನಿಯನ್ನು ಒತ್ತಾಯಿಸಿದರು.

## ಶಾಸಕ ಜನಾರ್ದನ ರೆಡ್ಡಿಗೆ 7 ವರ್ಷ ಜೈಲು ಹೈದ್ರಾಬಾದ್ ಸಿಬಿಐ ಕೋರ್ಟ್‌ನಿಂದ ಶಿಕ್ಷೆ ಪ್ರಕಟ



**ಬೆಂಗಳೂರು, ಮೇ 6;** ಮಾಜಿ ಸಚಿವ ಹಾಗೂ ಗಂಗಾವತಿ ಕ್ಷೇತ್ರ ಶಾಸಕ ಗಾಳಿ ಜನಾರ್ದನ ರೆಡ್ಡಿ, ಇತರ ನಾಲ್ಕು ಮಂದಿ ಆರೋಪಿಗಳನ್ನು ಅಕ್ರಮ ಗಣಿಗರಿಗೆ ಆರೋಪದಲಿ ಸಿಬಿಐ ವಿಶೇಷ ನ್ಯಾಯಾಲಯ ದೋಷಿಗಳು ಎಂದು ಹೇಳಿದ್ದು , ಏಳು ವರ್ಷಗಳು ಕಾರಾಗೃಹ ಶಿಕ್ಷೆ ಪ್ರಕಟಿಸಿದೆ . ರಾಜ್ಯ ರಾಷ್ಟ್ರ ಹಾಗೂ ಮಟ್ಟದಲ್ಲಿ ಬಳ್ಳಾರಿ ಅಕ್ರಮ ಗಣಿಗಾರಿಕೆ ಭಾರೀ ಸದ್ದು ಮಾಡಿತ್ತು. 3.5 ವರ್ಷ ಜೈಲು ಶಿಕ್ಷೆ ಅನುಭವಿಸಿದ್ದ ಜನಾರ್ದನ ರೆಡ್ಡಿ ಮತ್ತೆ ಜೈಲುಪಾಲಾಗಿದ್ದಾರೆ.

ಆಂಧ್ರ ಪ್ರದೇಶದ ಓಬಳಾಪುರಂ ಮೈನಿಂಗ್ ಸಂಸ್ಥೆ ಅಕ್ರಮ ಗಣಿಗಾರಿಕೆ ನಡೆಸಿ 29 ಲಕ್ಷ ಟನ್ ಅದಿರನ್ನು ಅಕ್ರಮವಾಗಿ ಮಾರಾಟ ಮಾಡಿಕೊಂಡ, ಸರ್ಕಾರಕ್ಕೆ ತೆರಿಗೆ ವಂಚನೆ ಮಾಡಿದ ಆರೋಪವನ್ನು ಆರೋಪಿಗಳು ಎದುರಿಸುತ್ತಾರೆ. ಕರ್ನಾಟಕ ಮತ್ತು ಆಂಧ್ರ ಪ್ರದೇಶ ಗಡಿ ಗುರುತು ನಾಶಪಡಿಸಿದ್ದರು.

ಸುಮಾರು 16 ವರ್ಷ ಬಳಿಕ ಅಕ್ರಮ ಗಣಿಗರಿಗೆ ಪ್ರಕರಣದಲ್ಲಿ ಸಿಬಿಐ ನ್ಯಾಯಾಲಯ ತನ್ನ ತೀರ್ಪು ಪ್ರಕಟಿಸಿದೆ . ಈ ಮೂಲಕ ರಾಜ್ಯದಲ್ಲಷ್ಟೇ ಅಲ್ಲದೆ ರಾಷ್ಟ್ರ ಮಟ್ಟಲ್ಲೂ ಭಾರಿ ಸದ್ದು ಮಾಡಿದ್ದ ಅಕ್ರಮ ಗಣಿಗಾರಿಕೆ ತಾತ್ವಿಕ ಹಂತಕ್ಕೆ ತಲುಪಿ . 2008ರ ನಂತರ ಬಳ್ಳಾರಿ ,ತುಮಕೂರು ,ಚಿತ್ರದುರ್ಗ ಹಾಗೂ ಆಂಧ್ರ ಪ್ರದೇಶ ಗಡಿ ಭಾಗಗಳಲ್ಲಿ ನಡೆದ ಅಕ್ರಮ ಗಣಿಗಾರಿಕೆಗಳು ಭಾರಿ ಸದ್ದು ಮಾಡಿತ್ತು .ಸಾಮಾಜಿಕ ಪರಿವರ್ತನಾ ಸಂಸ್ಥೆ ಮುಖ್ಯಸ್ಥ ಎಸ್ .ಆರ್ .ಹಿರೇಮಠ ಅಗತ್ಯಗೆ ಸಾರ್ವಜನಿಕ ಹಿತಶಕ್ತಿ ಅರ್ಜಿ ಸಲ್ಲಿಸಿದ್ದರು .ವಿಚಾರಣೆ ನಡೆಸಿತು ನ್ಯಾಯಾಲಯ ಸಿಬಿಐ ತನಿಖೆ ವಿಧಿಸಿತ್ತು . ತನಿಖೆ ಸಾಧಿಸು ಸಿಬಿಐ ನ್ಯಾಯಾಲಯದ ದೋಷಾರೋಪಣ ಪಟ್ಟಿ ಸಲ್ಲಿಸಿದೆ .ಅದರ ಅನುಸಾರ ವಾದ -ಪ್ರತಿವಾದ ಆಲಿಸಿ ಇಂದು ಸಿಬಿಐ ವಿಶೇಷ ನ್ಯಾಯಾಲಯ ಶಿಕ್ಷೆ ಪ್ರಕಟಿಸಿದೆ. ಮೊದಲ ಆರೋಪಿ ಬಿ ವಿ .ಶ್ರೀನಿವಾಸ ರೆಡ್ಡಿ ,ಎರಡನೇ ಆರೋಪಿ ಗಾಳಿ ಜನಾರ್ದನ ರೆಡ್ಡಿ ,ಆಂಧ್ರ ಪ್ರದೇಶದ ಮಾಜಿ ಸಚಿವ ಸಬಿತಾ ಇಂದ್ರ ರೆಡ್ಡಿ, ನಿವೃತ್ತ ಐಎಸ್ ಅಧಿಕಾರಿ ಕೃಪಾನಂದಂ ಹಾಗೂ ಓಬಳಾಪುರಂನ ವಿ .ಡಿ .ರಾಜ್ ಅವರನ್ನೊಳಗೊಂಡ ದೋಷಿಗಳು ಎಂದು ಪ್ರಕಟಿಸಿ ಏಳು ವರ್ಷ ಶಿಕ್ಷೆಯನ್ನು ಘೋಷಿಸಿದೆ.

ಶಿಕ್ಷೆ ಪ್ರಕಟಗೊಳ್ಳುವುದರಿಂದ ಭಾವೋದ್ವೇಗಕ್ಕೆ ಒಳಗಾದ ಜನಾರ್ದನ ರೆಡ್ಡಿ ,ತಾವು ಜನಸೇವೆಯಲ್ಲಿ ತೊಡಗಿಸಿಕೊಂಡಿದ್ದು ,ಸಾಕಷ್ಟು ಸಾಮಾಜಿಕ ಸೇವೆ ನಡೆಸುತ್ತಿದ್ದೇನೆ . ಮೂರುವರೆ ವರ್ಷ ಜೈಲಿನಲ್ಲಿದ್ದೆ .ದಯವಿಟ್ಟು ಶಿಕ್ಷೆ ಕಡಿಮೆ ಮಾಡಿ ಎಂದು ಮನವಿ ಮಾಡಿಕೊಂಡಿದ್ದಾರೆ .

ಅದಕ್ಕೆ ಪ್ರತಿಕ್ರಿಯೆ ನೀಡಿದ ವಿಶೇಷ ನ್ಯಾಯಾಲಯದ ನ್ಯಾಯಮೂರ್ತಿಯವರು ,ಶಿಕ್ಷೆ ಯಾಕೆ ಕಡಿಮೆ ಮಾಡಬೇಕು .ನಿಮಗೆ 10ವರ್ಷ ಹೆಚ್ಚು ಶಿಕ್ಷೆ ಅರ್ಹರು .ಜೀವಾವಧಿಯಾದರೂ ಕಡಿಮೆಯೇ ಎಂದು ಖಾರವಾಗಿ ಹೇಳಿದ್ದಾರೆ .ಈ ಹೇಳಿಕೆ ಕೇಳಿ ಜನಾರ್ದನ ರೆಡ್ಡಿ ಜಂಘಾಬಲ ಹುಡುಗಿ ಹೋಗಿದೆ . ತೀರ್ಪು ಪ್ರಕಟಗೊಳ್ಳುವ ನಷ್ಟು ಜನಾರ್ದನ ರೆಡ್ಡಿ ಇಂದು ಹೈದರಾಬಾದ್ ಗೆ ತೆರಳಿ ಸಿಬಿಐ ವಿಶೇಷ ನ್ಯಾಯಾಲಯದ ಎದ್ದು ಉಪಸ್ಥಿತರಿದ್ದರು .ಶಿಕ್ಷೆ ಪ್ರಕಟಗೊಳ್ಳುವುದರಿಂದ ಪೊಲೀಸರು ಜನಾರ್ದನ ರೆಡ್ಡಿ ಹಾಗೂ ಇತರ ಆರೋಪಿಗಳನ್ನು ವಶಕ್ಕೆ ಸೇರಿದ್ದಾರೆ . ನಾಳೆ ಜನಾರ್ದನ ರೆಡ್ಡಿ ಪರವಾಗಿ ಹೈದರಾಬಾದ್ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಆರೋಪಿಗಳ ಪರ ವಕೀಲರು ತಯಾರಿ ನಡೆಸಿದ್ದಾರೆ.

> ಕಾನೂನಿನ ಕಣ್ಣು ತಪ್ಪಿಸಿ ಅಕ್ರಮ ಗಣಿಗಾರಿಕೆ ನಡೆಸಿದ್ದರು. ಬಳ್ಳಾರಿ ಜನರಿಗೆ ಸಾಕಷ್ಟು ಅನ್ಯಾಯ ಮಾಡಿದೆ. ಈಗ ಶಿಕ್ಷೆಯಾಗಿರುವುದು ಇದೀಗ ಸಂತಸ ತಂದಿದೆ. ಪ್ರಕರಣದಲ್ಲಿ ತೀರ್ಪು ಬರಬೇಕು. ಆದರೆ 16 ವರ್ಷಗಳ ನಂತರ ತೀರ್ಪು ಬಂದಿದೆ. ವ್ಯವಸ್ಥೆಯಲ್ಲಿ ಬದಲಾವಣೆ ಯಾಗಬೇಕು. ತ್ವರಿತ ನ್ಯಾಯ ದೊರೆಯಬೇಕು.
>
> **ನ್ಯಾ.ಸಂತೋಷ್ ಹೆಗಡೆ**
> ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ

> ಎಂತಹ ಕಠಿಣ ಪರಿಸ್ಥಿತಿ ಇದ್ದರೂ ಎದೆಗುಂದದೆ ಹೋರಾಟ ನಡೆಸಿದೆವು. ಎಲ್ಲಾ ರೀತಿಯಲ್ಲೂ ದಾಖಲೆಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ಸಲ್ಲಿಸಿದೆ. ನಮ್ಮ ಅವಿರತ ಹೋರಾಟಕ್ಕೆ ಜಯ ಸಂದಿದೆ.
>
> **ಎಸ್.ಆರ್. ಹಿರೇಮಠ**
> ಸಾಮಾಜಿಕ ಕಾರ್ಯಕರ್ತ

# ಕೆಪಿಎಸ್‌ಸಿ ಕರ್ಮಕಾಂಡ: ಸರ್ಕಾರ ಸಮಗ್ರ ತನಿಖೆ ನಡೆಸಲಿ

- ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿ, ಪರೀಕ್ಷಾರ್ಥಿಗಳಿಗೆ ನ್ಯಾಯ ಒದಗಿಸಲಿ
- ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹ
- ಕೆಪಿಎಸ್‌ಸಿ ಮೇಲೆ ತೋರಿ ದರ್ಪ; ಸಿಎಂಗೆ ಟಾಂಗ್



**ನವದೆಹಲಿ, ಮೇ 6:** ಕರ್ನಾಟಕದಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಜತೆ ಚೆಲ್ಲಾಟವಾಡುತ್ತಿರುವ ಕೆಪಿಎಸ್‌ಸಿ ಕರ್ಮಕಾಂಡ ಬಗ್ಗೆ ರಾಜ್ಯ ಸರ್ಕಾರ ಕೂಡಲೇ ಸಮಗ್ರ ತನಿಖೆಗೆ ಆದೇಶಿಸಬೇಕು ಮತ್ತು ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಬೇಕೆಂದು ಕೇಂದ್ರ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ.

ಕೆಪಿಎಸ್‌ಸಿ ಸಂಸ್ಥೆಯ ಪರೀಕ್ಷೆ ಪ್ರಹಸನಗಳು ಒಂದೆರೆಡಲ್ಲ, ಬೆಳಗ್ಗೆ ಪರೀಕ್ಷೆ ಇದ್ದರೆ ಸಂಜೆವರೆಗೂ ಅರ್ಜಿ ಸ್ವೀಕಾರ, ಮಧ್ಯರಾತ್ರಿವರೆಗೂ ಹಾಲ್ಟಿಕೆಟ್ ವಿತರಣೆ, ಪ್ರಶ್ನೆಪತ್ರಿಕೆಯಲ್ಲಿ ತಪ್ಪು ತಪ್ಪು ಪ್ರಶ್ನೆಗಳ ಮುದ್ರಣ, ಪ್ರಶ್ನೆಪತ್ರಿಕೆ ಸೋರಿಕೆ ಸಾಲದ್ದಕ್ಕೆ ಈಗ "ಕಾರ್ ಪಂಕ್ಚರ್" ಎಂಬ ಹೊಸದೊಂದು ನಾಟಕ. ಇದಲ್ಲದರ ಹೂರಣ ಬಯಲಾಗಲು ಸರ್ಕಾರ ಸಮಗ್ರ ತನಿಖೆ ನಡೆಸಲೇಬೇಕು ಎಂದು ಸಚಿವರು ಆಗ್ರಹಿಸಿದ್ದಾರೆ.

**ತರಾತುರಿಯಲ್ಲಿ ಪರೀಕ್ಷೆ ಯಾರ ಸುಖಕ್ಕೆ:** 384 ಪ್ರೊಬೇಷನರಿಸ್ ಹುದ್ದೆಗಳಿಗೆ ರಾತ್ರೋರಾತ್ರಿ ಹಾಲ್‌ಟಿಕೆಟ್ ವಿತರಿಸಿ ಬೆಳಗ್ಗೆ ಪರೀಕ್ಷೆ ನಡೆಸುವ ಜರೂರತ್ ಏನಿತ್ತು ಇದು ಯಾರ ಸುಖಕ್ಕಾಗಿ ಎಂದು ಪ್ರಶ್ನಿಸಿರುವ ಸಚಿವ ಜೋಶಿ, ಕೆಪಿಎಸ್‌ಸಿ ಸಾಲು ಸಾಲು ಲೋಪವೆಸಗಿದ ಈ ದುರಂತ ಪರೀಕ್ಷೆ ಅಭ್ಯರ್ಥಿಗಳ ಮನೋಸ್ಥೈರ್ಯವನ್ನೇ ಕುಗ್ಗಿಸಿದೆ ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ.

**ಅಡಕತ್ತರಿಯಲ್ಲಿ ವಿದ್ಯಾರ್ಥಿಗಳ ಭವಿಷ್ಯ:** ಲಕ್ಷಾಂತರ ಅಭ್ಯರ್ಥಿಗಳು ನಾಗರೀಕ ಸೇವೆಯ ಕನಸಿನಲ್ಲಿ ವರ್ಷಗಟ್ಟಲೇ ಪರಿಶ್ರಮ ವಹಿಸಿ ಅಭ್ಯಾಸ ಮಾಡಿ ಕೊನೆಯ ಹಂತ ಎನ್ನುವಂತೆ ಅತ್ಯಂತ ಶ್ರದ್ಧೆಯಿಂದ ಪರೀಕ್ಷೆ ಬರೆಯುತ್ತಾರೆ. ಅವರ ಪರಿಶ್ರಮ, ಅಭ್ಯಾಸದ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಿಂಚಿತ್ತಾದರೂ ಅರಿವಿದೆಯೇ ಎಂದು ಪ್ರಶ್ನಿಸಿದ ಸಚಿವರು, ಕೆಪಿಎಸ್‌ಸಿಯ ಈ ಪ್ರಹಸನ ಕುರಿತು ಸರ್ಕಾರ ತನಿಖೆ ನಡೆಸಬೇಕು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದು ಆಗ್ರಹಿಸಿದ್ದಾರೆ.

**ಅವಘಡಕ್ಕೆ ಸರ್ಕಾರವೇ ನೇರ ಕಾರಣ:** ರಾಜ್ಯ ಸರ್ಕಾರದ ದುರಾಡಳಿತ ಮತ್ತು ಭ್ರಷ್ಟಾಚಾರದಿಂದಾಗಿ ಕೆಪಿಎಸ್ಸಿ ಪರೀಕ್ಷಾ ತಯಾರಿ ನಡೆಸಿದ ವಿದ್ಯಾರ್ಥಿಗಳ ಭವಿಷ್ಯವನ್ನು ಅಡಕತ್ತರಿಗೆ ಸಿಲುಕಿದಂತಾಗಿದೆ. ಈಗಾಗಲೇ ಬೆಲೆ ಏರಿಕೆಯಿಂದ ಜನಜೀವನ ದುಸ್ತರ ಮಾಡಿರುವ ಈ ಕಾಂಗ್ರೆಸ್ ಸರ್ಕಾರ ಸಾಲದ್ದಕ್ಕೆ ವಿದ್ಯಾರ್ಥಿಗಳ ಭವಿಷ್ಯದೊಂದಿಗೂ ಚೆಲ್ಲಾಟವಾಡುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಕಿಡಿಕಾರಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಂದಿನಿಂದಲೂ ಆಡಳಿತ ವ್ಯವಸ್ಥೆ, ಕಾರ್ಯತತ್ಪರತೆ ದಿನೇದಿನೇ ಯಾವ ರೀತಿ ಕುಸಿಯುತ್ತಿದೆ ಎಂಬುದಕ್ಕೆ ಕೆಪಿಎಸ್ಸಿ ಪರೀಕ್ಷೆಯಲ್ಲಿ ಬಯಲಾದ ಈ ಲೋಪದೋಷಗಳೇ ನಿದರ್ಶನ. ಈ ಪರಿಸ್ಥಿತಿಗೆ ಸರ್ಕಾರವೇ ಸಂಪೂರ್ಣ ಹೊಣೆ ಹೊತ್ತು ಕೂಡಲೇ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

**ಸಿಎಂ ಕೆಪಿಎಸ್‌ಸಿ ವಿರುದ್ಧ ದರ್ಪ ಪ್ರದರ್ಶಿಸಲಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಆಡಳಿತಾವಧಿಯಲ್ಲಿ ನಿಷ್ಠಾವಂತ ಮತ್ತು ಖಡಕ್ ಅಧಿಕಾರಿಗಳ ವಿರುದ್ಧ ದರ್ಪ ತೋರುವುದನ್ನು ಬಿಟ್ಟು ದೇಶದಲ್ಲೇ ಒಂದು ಕಪ್ಪು ಚುಕ್ಕೆಯಂತೆ ಬೇಜವಾಬ್ದಾರಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಕೆಪಿಎಸ್‌ಸಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಿ ಎಂದು ಸಚಿವ ಪ್ರಲ್ಹಾದ ಜೋಶಿ ಚಾಟಿ ಬೀಸಿದ್ದಾರೆ.

**ಕೆಪಿಎಸ್‌ಸಿ ಕೊಟ್ಟ ಸ್ಪಷ್ಟೀಕರಣ ದುರಂತ:** ಕೆಪಿಎಸ್‌ಸಿ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಪರೀಕ್ಷಾರ್ಥಿಗಳು ಗಂಭೀರ ಆರೋಪ ಮಾಡಿದ ಬೆನ್ನಲ್ಲೇ ಕೆಪಿಎಸ್‌ಸಿ ಬಾಲಿಶ ಸ್ಪಷ್ಟೀಕರಣ ನೀಡಿದ್ದು, ನಿಜಕ್ಕೂ ದುರಂತ. ಪರೀಕ್ಷೆಯಲ್ಲಿ ಯಾವುದೇ ಸಂದೇಹಗಳಿಗೆ ಆಸ್ಪದವಾಗದಂತೆ ನೋಡಿಕೊಳ್ಳುವುದು ಅಗತ್ಯ ಮತ್ತು ಕಡ್ಡಾಯವಾಗಿತ್ತು ಎಂದು ಸಚಿವರು ಹೇಳಿದ್ದಾರೆ.

ಕೆಪಿಎಸ್‌ಸಿ, ಪರೀಕ್ಷಾರ್ಥಿಗಳಿಗೆ ಅದ್ಯಾವ ಸಂದೇಶ ರವಾನಿಸಲು ಈ ರೀತಿಯ ಸ್ಪಷ್ಟೀಕರಣ ನೀಡುತ್ತಿದೆ ಕೆಪಿಎಸ್‌ಅನ್ನು ಗಂಭೀರವಾಗಿ ಪರಿಗಣಿಸಬೇಡಿ ಎಂದೇ, ವಿಶೇಷವಾಗಿ ನಮ್ಮ ಪರೀಕ್ಷಾ ತಯಾರಿಗೆ ನಿಮ್ಮ ಅಮೂಲ್ಯ ಸಮಯವನ್ನು ಕಳೆಯಬೇಡಿ ಎಂದೇ ಅಥವಾ ಕೆಪಿಎಸ್ಸಿ ತನ್ನ ಕೆಲಸವನ್ನು ಗಂಭೀರವಾಗಿ ಮಾಡುತ್ತಿಲ್ಲ ಎಂಬರ್ಥದಲ್ಲಿ ಸಲ್ಲದ ಸ್ಪಷ್ಟೀಕರಣ ನೀಡಿದೆಯೇ ಎಂದು ಸಚಿವ ಪ್ರಲ್ಹಾದ ಜೋಶಿ ತರಾಟೆಗೆ ತೆಗೆದುಕೊಂಡಿದ್ದಾರೆ.



ಗೃಹ ಸಚಿವಾಲಯದ ನಿರ್ದೇಶನದಂತೆ ಬುಧವಾರ ಶ್ರೀನಗರದಲ್ಲಿ ನಡೆಯಲಿರುವ ದಾಲ್‌ಲೇಕ್‌ನಲ್ಲಿ ನಾಗರಿಕ ರಕ್ಷಣಾ ಅಣಕು ಕವಾಯತಿಗಾಗಿ ಎಸ್‌ಡಿಆರ್‌ಎಫ್ ಸಿಬ್ಬಂದಿ ಸಿದ್ಧತೆ ಕೈಗೊಂಡರು.

# ಒಂದೇ ಬಾರಿಗೆ ಪಾಕ್‌ಗೆ ಹರಿದ 28,000 ಕ್ಯುಸೆಕ್ ನೀರು; ಹಠಾತ್ ಪ್ರವಾಹ ಭೀತಿ

ಶ್ರೀನಗರ: ಭಾರತ 24 ಗಂಟೆಗಳ ಕಾಲ ಬಗ್ಲಿಹಾರ್ ಹಾಗೂ ಸಲಾಲ್ ಡ್ಯಾಂ ನೀರನ್ನು ತಡೆದು, ಒಂದೇ ಸಲಕ್ಕೆ ಬಿಡುಗಡೆ ಮಾಡಿದ್ದರಿಂದ ಪಾಕಿಸ್ತಾನದಲ್ಲಿ ಹಠಾತ್ ಪ್ರವಾಹ ಭೀತಿ ಎದುರಾಗಿದೆ.

ಸಿಯಾಲ್ ಕೋಟೆ ಸೇರಿದಂತೆ ಅನೇಕ ಭಾಗಗಳಲ್ಲಿ ಚೆನಾಬ್ ನದಿ ತುಂಬಿ ಹರಿಯುತ್ತಿದೆ. ಸುಮಾರು 24 ಗಂಟೆಗಳ ಕಾಲ ನೀರನ್ನು ತಡೆಹಿಡಿದು ಬಿಡುಗಡೆ ಮಾಡಿದ್ದರಿಂದ ನದಿಯ ಕೆಳಭಾಗದಲ್ಲಿ ಹಠಾತ್ ಪ್ರವಾಹಕ್ಕೆ ಕಾರಣವಾಗಿದೆ. ಇದರ ಬೆನ್ನಲ್ಲೇ ಪಾಕಿಸ್ತಾನವು ಸಿಯಾಲ್ಕೋಟ್, ಗುಜರಾತ್ ಮತ್ತು ಹೆಡ್ ಖಾದಿರಾಬಾದ್ ಪ್ರದೇಶಕ್ಕೆ ಪ್ರವಾಹ ಎಚ್ಚರಿಕೆ ನೀಡಿದೆ.

ಭಾರತದ ವಾಟರ್ ವೆಪನ್ ಬಳಕೆಯಿಂದ ಪಾಕಿಸ್ತಾನಕ್ಕೆ ಒಂದು ಸಲ ಗಂಟಲು ಒಣಗಿ ಬಾಯಾರಿದ ಪರಿಸ್ಥಿತಿ, ಮಗದೊಂದು ಸಲ ಪ್ರವಾಹದ ಭೀತಿ ಎದುರಾಗುತ್ತಿದೆ. ಈ ರೀತಿಯ ಭಾರತದ ನೀರಾಟಕ್ಕೆ ಪಾಕ್ ಕಂಗಾಲಾಗಿದೆ. ಭಾರತ ನೀರನ್ನು ತಡೆದಿದ್ದರಿಂದ ಒಂದೇ



ದಿನ ಚೆನಾಬ್ ನದಿಯ ನೀರಿನ ಮಟ್ಟ 31,900 ಕ್ಯುಸೆಕ್ ಇಳಿಕೆಯಾಗಿತ್ತು. ಚೆನಾಬ್ ನದಿಗೆ ಅಡ್ಡಲಾಗಿ ರಾಮಬನದಲ್ಲಿ ಬಾಗ್ಲಿಹಾರ್ ಮತ್ತು ರಿಯಾಸಿಯಲ್ಲಿ ಸಲಾಲ್ ಜಲವಿದ್ಯುತ್ ಅಣೆಕಟ್ಟುಗಳನ್ನು ನಿರ್ಮಾಣ ಮಾಡಲಾಗಿದೆ. ಸೋಮವಾರ ಈ ಎರಡು ಅಣೆಕಟ್ಟಿನಿಂದ ನೀರು ಹರಿಸುವುದನ್ನು ನಿಲ್ಲಿಸಲಾಗಿತ್ತು.

ನೀರು ಹರಿಸುವುದನ್ನು ನಿಲ್ಲಿಸಿದ ಪರಿಣಾಮ ಪಾಕಿಸ್ತಾನದ ಮರಾಲಾ ಬಳಿ ಭಾನುವಾರ 35,000 ಕ್ಯುಸೆಕ್ ನೀರು ಹರಿಯುತ್ತಿದ್ದರೆ, ಸೋಮವಾರ ಇದು 3,100 ಕ್ಯುಸೆಕ್‌ಗೆ ಇಳಿಕೆಯಾಗಿದೆ ಎಂದು ಪಾಕಿಸ್ತಾನದ ಡಾನ್ ವರದಿ ಮಾಡಿತ್ತು. ಮರಾಲಾ ಬ್ಯಾರೇಜ್ ಸಲಾಲ್ ಅಣೆಕಟ್ಟಿನಿಂದ 76 ಕಿ.ಮೀ ದೂರದಲ್ಲಿದೆ. ಒಟ್ಟು 1.2 ದಶಲಕ್ಷ ಎಕರೆ ಅಡಿಗಳಷ್ಟು ನೀರು ಸಂಗ್ರಹಣಾ ಸಾಮರ್ಥ್ಯವನ್ನು ಹೊಂದಿದೆ. ಸಲಾಲ್ ಅಣೆಕಟ್ಟಯ ಭರ್ತಿಯಾದ ನಂತರ ಒಂದೇ ಬಾರಿಗೆ ಚೆನಾಬ್ ನದಿಗೆ ನೀರು ಹರಿಸಿದರೆ ಪಾಕ್ ಭಾಗದಲ್ಲಿ ಪ್ರವಾಹ ಎದುರಾಗಬಹುದು ಎಂದು ಅಧಿಕಾರಿಯೊಬ್ಬರು ಎಚ್ಚರಿಸಿದ್ದರು.

ಒಂದು ವೇಳೆ ಭಾರತ ಸರಿಯಾಗಿ ನೀರನ್ನು ಹರಿಸದೇ ಇದ್ದರೆ ಖಾರಿಫ್ ಬೆಳೆಗಳಿಗೆ ಭಾರೀ ಸಮಸ್ಯೆಯಾಗಲಿದೆ. ಈಗಾಗಲೇ 21% ನೀರಿನ ಕೊರತೆಯನ್ನು ಎದುರಿಸುತ್ತಿದೆ. ಚೆನಾಬ್ ನದಿಯ ಒಳಹರಿವು ಹಠಾತ್ ಇಳಿಕೆಯಾದರೆ ಖಾರಿಫ್ ಋತುವಿನ ಆರಂಭದಲ್ಲಿ ಕೊರತೆ ಎದುರಾಗಲಿದೆ ಎಂದು ವರದಿಯಾಗಿತ್ತು.

ಪಹಲ್ಗಾಮ್ ಭೀಕರ ನರಮೇಧಕ್ಕೆ ಪ್ರತಿಯಾಗಿ ಭಾರತ ಸಿಂಧೂ ನದಿಯ ಒಪ್ಪಂದವನ್ನು ಮೊದಲ ಬಾರಿಗೆ ಅಮಾನತಿನಲ್ಲಿಟ್ಟು ಪಾಕಿಸ್ತಾನದ ಬುಡಕ್ಕೆ 'ಜಲಬಾಂಬ್ ಹಾಕಿದೆ. ಒಪ್ಪಂದವನ್ನು ಭಾರತ ಅಮಾನತಿನಲ್ಲಿಟ್ಟಿದೆ.

# ಹರಿಯಾಣಕ್ಕೆ ಒಂದು ಹನಿ ನೀರು ಬಿಡಲ್ಲ: ಬರಿಂದರ್ ಕುಮಾರ್ ಗೋಯಲ್

**ಅಮೃತಸರ, ಮೇ.6–** ಪಂಜಾಬ್‌ನ ಆಮ್ ಆದ್ಮಿ ಪಕ್ಷದ ಸರ್ಕಾರ ಸೋಮವಾರ ವಿಧಾನಸಭೆಯಲ್ಲಿ ನೆರೆಯ ಹರಿಯಾಣಕ್ಕೆ ತನ್ನ ಕಡೆಯಿಂದ 'ಒಂದು ಹನಿ ನೀರನ್ನು ಸಹ' ಬಿಡುವುದಿಲ್ಲ ಎಂದು ನಿರ್ಣಯ ಕೈಗೊಂಡಿದೆ ಎಂದು ದಿ ಹಿಂದೂ ವರದಿ ಮಾಡಿದೆ. ನೀರು ಹಂಚಿಕೆಗೆ ಸಂಬಂಧಿಸಿದಂತೆ ಎರಡು ರಾಜ್ಯಗಳ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಇದು ಪಂಜಾಬ್ ಈ ತೀರ್ಮಾನ ಮಾಡಿದೆ. ಹರಿಯಾಣಕ್ಕೆ ಒಂದು ಹನಿ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ ಮತ್ತು ಭಾಕ್ರಾ ಬಿಯಾಸ್ ನಿರ್ವಹಣಾ ಮಂಡಳಿಯ ಮೂಲಕ ಬಿಜೆಪಿ ಪಕ್ಷವೂ ಪಂಜಾಬ್ನ ಹಕ್ಕುಗಳನ್ನು 'ಕಿತ್ತುಕೊಳ್ಳಲು' ಪ್ರಯತ್ನಿಸುತ್ತಿದೆ ಎಂದು ವಿಧಾನಸಭೆಯ ವಿಶೇಷ ಅಧಿವೇಶನದಲ್ಲಿ ರಾಜ್ಯ ಜಲಸಂಪನ್ಮೂಲ ಸಚಿವ ಬರಿಂದರ್ ಕುಮಾರ್ ಗೋಯಲ್ ಮಂಡಿಸಿದ ನಿರ್ಣಯದ ವೇಳೆ ಆರೋಪಿಸಿದ್ದಾರೆ.

ಹರಿಯಾಣದಲ್ಲಿ ಬಿಜೆಪಿ ಆಡಳಿತ ಪಕ್ಷವಾಗಿದೆ. ಭಾಕ್ರಾ ನಂಗಲ್ ಮತ್ತು ಭಾಕ್ರಾ ಬಿಯಾಸ್ ಯೋಜನೆಗಳ ಆಡಳಿತ ಮತ್ತು ನಿರ್ವಹಣೆಯನ್ನು ಅದರ ಮಂಡಳಿಯು ಮಾಡುತ್ತದೆ. ಇದು ಪಂಜಾಬ್, ಹರಿಯಾಣ, ರಾಜಸ್ಥಾನ, ಹಿಮಾಚಲ ಪ್ರದೇಶ, ದೆಹಲಿ ಮತ್ತು ಚಂಡೀಗಢಕ್ಕೆ ನೀರು ಮತ್ತು ವಿದ್ಯುತ್ ಸರಬರಾಜನ್ನು ನಿಯಂತ್ರಿಸುತ್ತದೆ. ಭಾಕ್ರಾ ನಂಗಲ್ ಯೋಜನೆಯು ಸತ್ಲೆಜ್ ನದಿಯ ಮೇಲೆ ಎರಡು ಅಣೆಕಟ್ಟುಗಳನ್ನು ಒಳಗೊಂಡಿದೆ. ಹಿಮಾಚಲ ಪ್ರದೇಶದ ಭಾಕ್ರಾ ಅಣೆಕಟ್ಟು ಮತ್ತು ಪಂಜಾಬ್‌ನ ನಂಗಲ್ ಅಣೆಕಟ್ಟು ಇದರಲ್ಲಿ ಸೇರಿವೆ. ಬಿಯಾಸ್ ಯೋಜನೆಯು ಬಿಯಾಸ್–ಸತ್ಲೆಜ್ ಲಿಂಕ್ ಕಾಲುವೆ ಮತ್ತು ಬಿಯಾಸ್ ಅಣೆಕಟ್ಟುಗಳನ್ನು ಒಳಗೊಂಡಿರುವ ಬಹುಪಯೋಗಿ ನದಿ ಕಣಿವೆ ಯೋಜನೆಯಾಗಿದೆ.

ಭಾಕ್ರಾ ನಂಗಲ್‌ನಿಂದ ನೀರು ಬಿಡುಗಡೆ ಮಾಡುವಂತೆ ಹರಿಯಾಣ ಸಲ್ಲಿಸಿದ ಮನವಿಯ ಮೇಲೆ ಪ್ರಸ್ತುತ ಗದ್ದಲ ಭುಗಿಲೆದ್ದಿದ್ದು, ಇದನ್ನು ಪಂಜಾಬ್ ವಿರೋಧಿಸಿದೆ. ಭಾಕ್ರಾ ಬಿಯಾಸ್ ನಿರ್ವಹಣಾ ಮಂಡಳಿಯು ನೀರಿನ ವಿತರಣೆಯ ಕುರಿತು ತೆಗೆದುಕೊಂಡ ನಿರ್ಧಾರಗಳನ್ನು ಪಂಜಾಬ್ ಸರ್ಕಾರ ಇನ್ನು ಮುಂದೆ ಸ್ವೀಕರಿಸುವುದಿಲ್ಲ ಎಂದು ನಿರ್ಣಯದಲ್ಲಿ ಹೇಳಲಾಗಿದೆ ಎಂದು ದಿ ಹಿಂದೂ ವರದಿ ಮಾಡಿದೆ. ಪಂಜಾಬ್ನ ನೀರನ್ನು ಮಂಡಳಿಯು ವರ್ಷಗಳಿಂದ ಇತರ ರಾಜ್ಯಗಳಿಗೆ ತಿರುಗಿಸುತ್ತಿತ್ತು ಎಂದು ಮುಖ್ಯಮಂತ್ರಿ ಭಗವಂತ್ ಮಾನ್ ವಿಧಾನಸಭೆಯಲ್ಲಿ ಹೇಳಿಕೊಂಡಿದ್ದಾರೆ. ಈಗ ಬಿಜೆಪಿ ಸರ್ಕಾರವು ತನ್ನ ರಾಜಕೀಯ ಹಿತಾಸಕ್ತಿಗಳಿಗಾಗಿ ಈ ಮಂಡಳಿಯನ್ನು ಬಳಸಲು ಪ್ರಾರಂಭಿಸಿದೆ ಎಂದು ಅವರು ಹೇಳಿದ್ದಾರೆ. ಪಂಜಾಬ್ನೊಂದಿಗೆ ಸಮಾಲೋಚಿಸದೆ, ಮಧ್ಯರಾತ್ರಿಯಲ್ಲಿ ಸಭೆಗಳನ್ನು ಕರೆಯಲಾಗುತ್ತಿದೆ ಮತ್ತು ಇತರ ರಾಜ್ಯಗಳ ಒತ್ತಡದ ಮೇರೆಗೆ ಪಂಜಾಬ್ನ ನ್ಯಾಯಯುತ ಪಾಲನ್ನು ಕಸಿದುಕೊಳ್ಳಲಾಗುತ್ತಿದೆ.'ಎಂದು ಅವರು ಹೇಳಿದ್ದಾರೆ. ಈ ನಡೆಯನ್ನು ಅಸಂವಿಧಾನಿಕ' ಮತ್ತು ಕಾನೂನುಬಾಹಿರ'ಎಂದು ಕರೆದ ಮುಖ್ಯಮಂತ್ರಿ, ಪಂಜಾಬ್ನ ನೀರನ್ನು ಹರಿಯಾಣಕ್ಕೆ ಬಲವಂತವಾಗಿ ತಿರುಗಿಸಲು ಭಾಕ್ರಾ ಬಿಯಾಸ್ ನಿರ್ವಹಣಾ ಮಂಡಳಿ ಸಭೆಗಳನ್ನು ಕರೆಯಲಾಗುತ್ತಿದೆ ಎಂದು ಹೇಳಿದ್ದಾರೆ. ಮಾರ್ಚ್ 31 ರ ವೇಳೆಗೆ ಹರಿಯಾಣ ತನ್ನ ವಾರ್ಷಿಕ ಹಂಚಿಕೆಯ ನೀರನ್ನು ಈಗಾಗಲೇ ಬಳಸಿಕೊಂಡಿದೆ ಎಂದು ಅವರು ಹೇಳಿದ್ದಾರೆ.

ಸತ್ಲೇಜ್ ಮತ್ತು ಬಿಯಾಸ್ ನದಿಗಳ ನೀರು ಸಂಪೂರ್ಣವಾಗಿ ಪಂಜಾಬ್ಗೆ ಸೇರಿತ್ತು ಎಂದು ಸಿಎಂ ಹೇಳಿದ್ದು, ಈಗ ನಾವು ಈ ನೀರನ್ನು ಸಂಪೂರ್ಣವಾಗಿ ನಮಗಾಗಿ ಬಳಸುತ್ತೇವೆ ಎಂದು ಅವರು ಹೇಳಿದ್ದಾರೆ. ಅಣೆಕಟ್ಟು ಸುರಕ್ಷತಾ ಕಾಯ್ದೆಯನ್ನು ಪಂಜಾಬ್ ಮತ್ತು ಅದರ ಹಕ್ಕುಗಳ ಮೇಲಿನ ಗಂಭೀರ ದಾಳಿ ಎಂದು ಇದೇ ವೇಳೆ ಸಿಎಂ ಕರೆದಿದ್ದಾರೆ. ಈ ಕಾಯ್ದೆಯು ಅಣೆಕಟ್ಟುಗಳ ಕಣ್ಗಾವಲು, ಪರಿಶೀಲನೆ, ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಒಂದು ಚೌಕಟ್ಟನ್ನು ಒದಗಿಸುತ್ತದೆ. ಈ ಸದನವು 2021 ರ ಅಣೆಕಟ್ಟು ಸುರಕ್ಷತಾ ಕಾಯ್ದೆಯನ್ನು



ಪಂಜಾಬ್ನ ಹಕ್ಕುಗಳ ಮೇಲಿನ ದಾಳಿ ಎಂದು ಪರಿಗಣಿಸುತ್ತದೆ ಎಂದು ನಿರ್ಣಯವು ಹೇಳಿದೆ. ಅಣೆಕಟ್ಟು ಸಂಪೂರ್ಣವಾಗಿ ರಾಜ್ಯದ ಗಡಿಯೊಳಗೆ ಇದ್ದರೂ ಸಹ, ರಾಜ್ಯಗಳ ನದಿಗಳು ಮತ್ತು ಅಣೆಕಟ್ಟುಗಳನ್ನು ನೇರವಾಗಿ ನಿಯಂತ್ರಿಸಲು ಕೇಂದ್ರ ಸರ್ಕಾರಕ್ಕೆ ಈ ಕಾನೂನು ಸಂಪೂರ್ಣ ಅಧಿಕಾರ ನೀಡುತ್ತದೆ. ಈ ಕಾಯ್ದೆಯು ದೇಶದ ಫೆಡರಲ್ ರಚನೆಗೆ ವಿರುದ್ಧವಾಗಿದ್ದು, ಪಂಜಾಬ್ನಂತಹ ರಾಜ್ಯಗಳ ನೀರಿನ ಮೇಲಿನ ಸಾರ್ವಭೌಮ ಹಕ್ಕನ್ನು ದುರ್ಬಲಗೊಳಿಸಿದೆ.

ಆದ್ದರಿಂದ, ಈ ಸದನವು ಕೇಂದ್ರ ಸರ್ಕಾರದಿಂದ ಅಣೆಕಟ್ಟು ಸುರಕ್ಷತಾ ಕಾಯ್ದೆಯನ್ನು ತಕ್ಷಣವೇ ರದ್ದುಗೊಳಿಸಬೇಕೆಂದು ಒತ್ತಾಯಿಸುತ್ತದೆ. ಪಂಜಾಬ್ ಸರ್ಕಾರವು ಈ ಕಾಯ್ದೆಯನ್ನು ಸಂಪೂರ್ಣವಾಗಿ ತಿರಸ್ಕರಿಸುತ್ತದೆ ಎಂದು ನಿರ್ಣಯವು ಹೇಳಿದೆ.

# ಜಗಜಿತ್ ಸಿಂಗ್ ದಲ್ಲೆವಾಲ್ ಸೇರಿದಂತೆ ರೈತ ನಾಯಕರಿಗೆ ಪಂಜಾಬ್ ಸರ್ಕಾರದಿಂದ ಗೃಹಬಂಧನ

**ನವದೆಹಲಿ, ಮೇ.6–** ಸಂಯುಕ್ತ ಕಿಸಾನ್ ಮೋರ್ಚಾ (ಖಿಏಖ ರಾಜಕೀಯೇತರ) ಘೋಷಿಸಿದ್ದ ಶಂಭು ಪೊಲೀಸ್ ಠಾಣೆಯ ಹೊರಗೆ ಮಂಗಳವಾರ ಯೋಜಿಸಿದ ಪ್ರತಿಭಟನೆಯ ಮುನ್ನಾದಿನ ಪಂಜಾಬ್ ಪೊಲೀಸರು, ಜಗಜಿತ್ ಸಿಂಗ್ ದಲ್ಲೆವಾಲ್ ಸೇರಿದಂತೆ ಹಿರಿಯ ರೈತ ಮುಖಂಡರು ಮತ್ತು ಹೋರಾಟಗಾರರನ್ನು ಗೃಹಬಂಧನದಲ್ಲಿ ಇರಿಸಿದ್ದಾರೆ ಎಂದು ತಿಳಿದುಬಂದಿದೆ. ಮಾರ್ಚ್ 19 ರಂದು ಶಂಭು ಮತ್ತು ಖಾನೌರಿ ಗಡಿಗಳಲ್ಲಿ ನಡೆದ ಪೊಲೀಸ್ ಕಾರ್ಯಾಚರಣೆಯಲ್ಲಿ ರೈತರು ಗಾಯಗೊಂಡಿದ್ದಾರೆ ಎಂದು ಆರೋಪಿಸಿ ಈ ಪ್ರತಿಭಟನೆ ನಡೆಯುತ್ತಿದೆ.

ಸೋಮವಾರ ಮುಂಜಾನೆ ಪೊಲೀಸ್ ತಂಡವೊಂದು ಫರೀದ್ಕೋಟ್‌ನಲ್ಲಿರುವ ದಲ್ಲೆವಾಲ್ ಅವರ ಗ್ರಾಮವನ್ನು ತಲುಪಿದೆ ಎಂದು ಮೂಲಗಳು ತಿಳಿಸಿವೆ. ಕನಿಷ್ಠ ಮೂರರಿಂದ ನಾಲ್ಕು ದಿನಗಳ ಕಾಲ ಮನೆಯೊಳಗೆ ಇರಲು ಅವರು ಕೇಳಿಕೊಂಡಿದ್ದಾರೆ. ಇದರ ನಂತರ, ಪೊಲೀಸ್ ಕ್ರಮವನ್ನು ಟೀಕಿಸಿ ತನ್ನ ಬಂಧನದ ಬಗ್ಗೆ ಅವರು ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೊವನ್ನು ಅಪ್ಲೋಡ್ ಮಾಡಿದ್ದಾರೆ.

ಖನೌರಿ ಮತ್ತು ಶಂಭುವಿನಿಂದ ಪೊಲೀಸರು ರೈತರನ್ನು ಬಲವಂತವಾಗಿ ಹೊರಹಾಕಿದಾಗ, ಅವರು ಪೊಲೀಸರಿಂದ ತೊಂದರೆಗೆ ಒಳಗಾಗಿದ್ದಾರೆ ಮತ್ತು ಟ್ರ್ಯಾಕ್ಟರ್‌ಗಳು ಸೇರಿದಂತೆ ಅವರ ಹಲವಾರು ವಸ್ತುಗಳು ಕಾಣೆಯಾಗಿವೆ ಎಂದು ದಲ್ಲೆವಾಲ್ ಆರೋಪಿಸಿದ್ದಾರೆ. ಇದರ ನಂತರ ಸರ್ಕಾರ ಪರಿಹಾರವನ್ನು ಭರವಸೆ ನೀಡಿತು. ಕಾಣೆಯಾದ



ವಸ್ತುಗಳನ್ನು ಅಂತಿಮವಾಗಿ ಎಎಪಿ ನಾಯಕರು ಮತ್ತು ಪೊಲೀಸ್ ಸಿಬ್ಬಂದಿಯ ಆಪ್ತ ಸಹಚರರ ಬಳಿ ಪತ್ತೆಹಚ್ಚಲಾಗಿದೆ ಎಂದು ಅವರು ಹೇಳಿದ್ದಾರೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಪೊಲೀಸರು ರೈತರ ಕಾಣೆಯಾದ ವಸ್ತುಗಳನ್ನು ಪತ್ತೆಹಚ್ಚಿದವರ ವಿರುದ್ಧವೇ ಪ್ರಕರಣ ದಾಖಲಿಸಲು ಪ್ರಾರಂಭಿಸಿದರು ಎಂದು ಅವರು ಹೇಳಿದ್ದಾರೆ. ಅದಕ್ಕಾಗಿಯೇ ನಾವು ಮೇ 6 ರಂದು ಪೊಲೀಸರ ವರ್ತನೆಯ ವಿರುದ್ಧ ಆಂದೋಲನವನ್ನು ಯೋಜಿಸಿದ್ದೇವೆ ಎಂದು ಅವರು ಹೇಳಿದ್ದಾರೆ.

ಸರ್ಕಾರವು ನಮ್ಮ ಆಂದೋಲನವನ್ನು ಹಳಿತಪ್ಪಿಸಲು ಪ್ರಯತ್ನಿಸಿದೆ ಎಂದು ರೈತ ಮುಖಂಡರು ಹೇಳಿದ್ದಾರೆ. ಭಾರತೀಯ ಕಿಸಾನ್ ಯೂನಿಯನ್ (ದೋಬಾ) ಅಧ್ಯಕ್ಷ ಮಂಜಿತ್ ಸಿಂಗ್ ರೈ ಮತ್ತು ಇತರ ಪದಾಧಿಕಾರಿಗಳಾದ ದವೀಂದರ್ ಸಿಂಗ್ ಸಂಧ್ವಾನ್ ಮತ್ತು ಸತ್ನಮ್‌ಸಿಂಗ್ ಸಾಹ್ನಿ ಅವರನ್ನು ಸಹ ಗೃಹಬಂಧನದಲ್ಲಿ ಇರಿಸಲಾಯಿತು ಎಂದು ವರದಿಯಾಗಿದೆ. ಬಲದೇವ್ ಸಿಂಗ್ ಸಿರ್ಸಾ ಅವರಂತಹ ನಾಯಕರೂ ಸಹ ಗೃಹಬಂಧನದಲ್ಲಿದ್ದಾರೆ ಎಂದು ಅದು ಹೇಳಿದೆ.

ರೈತ ಮುಖಂಡರ ಬಂಧನಗಳ ನಂತರ, ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರು ಪ್ರತಿಕ್ರಿಯಿಸಿ, ರಸ್ತೆಗಳು ಅಥವಾ ರೈಲುಮಾರ್ಗಗಳನ್ನು ನಿರ್ಬಂಧಿಸುವುದು ಅಥವಾ ಸಾರ್ವಜನಿಕರಿಗೆ ಅನಾನುಕೂಲತೆಯನ್ನು ಉಂಟುಮಾಡುವುದು ಮತ್ತು ದೈನಂದಿನ ಜೀವನವನ್ನು ಅಸ್ತವ್ಯಸ್ತಗೊಳಿಸುವುದನ್ನು ಒಳಗೊಂಡಂತೆ ಯಾವುದೇ ಘೋಷಣೆಗಳು, ಪ್ರತಿಭಟನೆಗಳು ಅಥವಾ ಮುಷ್ಕರಗಳನ್ನು ಸಾರ್ವಜನಿಕರ ವಿರುದ್ಧದ ಕೃತ್ಯಗಳೆಂದು ಪರಿಗಣಿಸಲಾ ಗುತ್ತದೆ ಎಂದು ಹೇಳಿದ್ದಾರೆ. ಎಲ್ಲಾ ಸಂಘಟನೆಗಳು, ಒಕ್ಕೂಟಗಳು ಮತ್ತು ಗುಂಪುಗಳು ಇದನ್ನು ಪರಗಣಿಸುವಂತೆ ಸೂಚಿಸಲಾಗಿದೆ. ವಿರೋಧ ವ್ಯಕ್ತಪಡಿಸಲು ಇತರ ಮಾರ್ಗಗಳಿವೆ, ಆದರೆ ಜನರಿಗೆ ತೊಂದರೆ ಮಾಡುವುದು ಸರಿಯಲ್ಲ. ಜನರಿಗೆ ತೊಂದರೆ ಮಾಡಿದರೆ ಕಠಿಣ ಕಾನೂನು ಕ್ರಮಕ್ಕೆ ಸಿದ್ಧರಾಗಿರಿ. ಪಂಜಾಬ್‌ನ ಶ್ರಮಶೀಲ ಜನರ ಹಿತದೃಷ್ಟಿಯಿಂದ ಇದನ್ನು ಹೊರಡಿಸಲಾಗಿದೆ ಎಂದು ಅವರು ಹೇಳಿದ್ದಾರೆ.



ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯ ಷಮ್ಷೇರ್‌ಗಂಜ್‌ನಲ್ಲಿ ಮಂಗಳವಾರ ನಡೆದ ಮುರ್ಷಿದಾಬಾದ್ ಹಿಂಸಾಚಾರ ಸಂತ್ರಸ್ತರಿಗೆ ಪರಿಹಾರ ವಿತರಣೆಗಾಗಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಭೇಟಿನೀಡಿದ್ದರು.

# ಮಧ್ಯಪ್ರದೇಶದಲ್ಲಿ ಲವ್ ಜಿಹಾದ್ ತನಿಖೆಗೆ ಎಸ್‌ಐಟಿ ರಚನೆ

**ಭೂಪಾಲ್, ಮೇ.6–** ಮಧ್ಯಪ್ರದೇಶದಲ್ಲಿ 'ಲವ್ ಜಿಹಾದ್' ಪ್ರಕರಣಗಳ ತನಿಖೆಗಾಗಿ ಪೊಲೀಸರು ವಿಶೇಷ ತನಿಖಾ ತಂಡವನ್ನು ರಚಿಸಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ. 'ಅಂತಹ ಯಾವುದೇ ಪ್ರಕರಣವನ್ನು ಸಹಿಸಲಾಗುವುದಿಲ್ಲ ಮತ್ತು ಕಠಿಣ ಕ್ರಮ ಕೈಗೊಳ್ಳಲಾಗುವುದು' ಎಂದು ರಾಜ್ಯ ಸಚಿವ ವಿಶ್ವಾಸ್ ಸಾರಂಗ್ ಹೇಳಿದ್ದಾರೆ.

'ಲವ್ ಜಿಹಾದ್' ಎಂಬುದು ಬಿಜೆಪಿ ಮತ್ತು ಆರೆಸ್ಸೆಸ್ ಪ್ರೇರಿತ ಕಾಲ್ಪನಿಕ ಕಟ್ಟುಕತೆಯಾಗಿದೆ. ಮುಸ್ಲಿಂ ಪುರುಷರು ಹಿಂದೂ ಮಹಿಳೆಯರನ್ನು ಪ್ರೇಮಿಸಿ ಮೋಸಗೊಳಿಸಿ ಅಂತಿಮವಾಗಿ ಅವರನ್ನು ಇಸ್ಲಾಂಗೆ ಮತಾಂತರಿಸುವ ಸಂಘಟಿತ ಸಂಚು ಮಾಡುತ್ತಿದ್ದಾರೆ ಎಂದು ಇದರಲ್ಲಿ ಆರೋಪಿಸಲಾಗುತ್ತದೆ. ಅದಾಗ್ಯೂ, ಇಂತಹ ಯಾವುದೇ ಪ್ರಕರಣ ಈ ವರೆಗೆ ದಾಖಲಾಗಿಲ್ಲ ಎಂದು ಕೇಂದ್ರ ಸರ್ಕಾರವೇ ಹೇಳಿದೆ. ಭಾರತೀಯ ಕಾನೂನಿನಲ್ಲಿ ಅಂತಹ ಪದವನ್ನು ವ್ಯಾಖ್ಯಾನಿಸಲು ಯಾವುದೇ ಅವಕಾಶವಿಲ್ಲ ಎಂದು ಕೇಂದ್ರ ಗೃಹ ಸಚಿವಾಲಯ ಸಂಸತ್ತಿಗೆ ತಿಳಿಸಿದೆ.

ಭೋಪಾಲ್‌ನಲ್ಲಿ ನಡೆದ ಪ್ರಕರಣದಲ್ಲಿ ಮೂವರು ವಿದ್ಯಾರ್ಥಿನಿಯರು ಏಪ್ರಿಲ್‌ನಲ್ಲಿ ತಮ್ಮ ಮೇಲೆ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯದ ವೀಡಿಯೊಗಳನ್ನು ತೋರಿಸಿ ಬೆದರಿಕೆ ಹಾಕಲಾಗಿದೆ ಎಂದು ಆರೋಪಿಸಿದ ಹಿನ್ನೆಲೆಯಲ್ಲಿ ವಿಶೇಷ ತನಿಖಾ ತಂಡವನ್ನು ಸ್ಥಾಪಿಸಲು ರಾಜ್ಯ ಸರ್ಕಾರ ನಿರ್ಧಾರ



ತೆಗೆದುಕೊಂಡಿದೆ. ಪೊಲೀಸರ ಪ್ರಕಾರ, ಈ ವಿಷಯದಲ್ಲಿ ಆರೋಪಿಗಳು ತಮ್ಮ ಧಾರ್ಮಿಕ ಗುರುತನ್ನು ಮರೆಮಾಡಿ ನಂತರ ತಮ್ಮ ಮೇಲೆ ಅತ್ಯಾಚಾರ ಮಾಡಿದ್ದಾರೆ ಎಂದು ದೂರುದಾರರು ಹೇಳಿದ್ದಾರೆ. ಈ ಪ್ರಕರಣದ ನಂತರ ಭೋಪಾಲ್‌ನಲ್ಲಿ ಬಿಜೆಪಿ ಪರ ದುಷ್ಕರ್ಮಿಗಳ ಗುಂಪು ಪ್ರತಿಭಟನೆಗೆ ನಡೆಸಿದ್ದು, ಅವರು ಈ ಅಪರಾಧವನ್ನು 'ಲವ್ ಜಿಹಾದ್' ಎಂದು ಆರೋಪಿಸಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ. ಪ್ರಕರಣದ ಸಂದರ್ಭದಲ್ಲಿ, ಮಧ್ಯಪ್ರದೇಶ ಪೊಲೀಸ್ ಪ್ರಧಾನ ಕಚೇರಿಯು, ಸಾಮಾಜಿಕವಾಗಿ ದುರ್ಬಲ ಹಿನ್ನೆಲೆಯ ಹುಡುಗಿಯರು ಮತ್ತು ಮಹಿಳೆಯರನ್ನು ?ಪ್ರೀತಿಯ ಬಲೆಗೆ ಬೀಳಿಸುವುದು, ವಂಚನೆ, ಬೆದರಿಕೆಗಳು ಅಥವಾ ಇತರ ಪ್ರಚೋದನೆಗಳಂತಹ ತಂತ್ರಗಳ ಮೂಲಕ ವ್ಯವಸ್ಥಿತವಾಗಿ ಗುರಿಯಾಗಿಸಿ ಕೊಂಡಿದ್ದಾರೆ. ಇದು ಅವರ ಮಾನಸಿಕ, ದೈಹಿಕ ಮತ್ತು ಸಾಮಾಜಿಕ ಶೋಷಣೆಗೆ ಕಾರಣವಾಗುತ್ತದೆ' ಎಂದು ಗುಪ್ತಚರ ಮಾಹಿತಿಗಳನ್ನು ಹೊಂದಿದೆ ಎಂದು ಹೇಳಿದೆ.

ಸಂತ್ರಸ್ತ ಹುಡುಗಿಯರು ಮತ್ತು ಮಹಿಳೆಯರನ್ನು ಭಯ, ಒತ್ತಡ ಅಥವಾ ವಂಚನೆಯ ಮೂಲಕ ತಮ್ಮನ್ನು ಮತಾಂತರಿಸಲಾಗುತ್ತಿದೆ ಎಂದು ಪೊಲೀಸರು ಹೇಳಿಕೊಂಡಿದ್ದಾರೆ. 'ಇಂತಹ ಘಟನೆಗಳು ಸಮಾಜದಲ್ಲಿ ಅಪರಾಧ ಮಾತ್ರವಲ್ಲ, ಮಹಿಳೆಯರ ಘನತೆ, ಸ್ವಾತಂತ್ರ್ಯ ಮತ್ತು ಸಾಮಾಜಿಕ ಸಾಮರಸ್ಯಕ್ಕೆ ಗಂಭೀರ ಸವಾಲನ್ನು ಒಡ್ಡುತ್ತವೆ' ಎಂದು ಪೊಲೀಸರು ಹೇಳಿದ್ದಾರೆ.

ಬಲವಂತದ ಮತಾಂತರದ ಆಪಾದಿತ ಘಟನೆಗಳನ್ನು ಗುರುತಿಸುವ ಮತ್ತು ತನಿಖೆ ಮಾಡುವ, ಭಾಗಿಯಾಗಿರಬಹುದಾದ ವ್ಯಕ್ತಿಗಳು ಮತ್ತು ಗುಂಪುಗಳನ್ನು ಪತ್ತೆಹಚ್ಚುವ ಮತ್ತು ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಕಾರ್ಯವನ್ನು ವಿಶೇಷ ತನಿಖಾ ತಂಡಕ್ಕೆ ವಹಿಸಲಾಗಿದೆ. ಬಲವಂತದ ಧಾರ್ಮಿಕ ಮತಾಂತರದಲ್ಲಿ ಭಾಗಿಯಾಗಿದ್ದಾರೆಂದು ಹೇಳಲಾದ ಅಂತರರಾಜ್ಯ ಅಥವಾ ಅಂತರರಾಷ್ಟ್ರೀಯ ಜಾಲಗಳನ್ನು ಸಹ ತಂಡವು ತನಿಖೆ ಮಾಡುತ್ತದೆ ಮತ್ತು ತಡೆಗಟ್ಟುವ ಕ್ರಮಗಳನ್ನು ಶಿಫಾರಸು ಮಾಡುತ್ತದೆ.

ಭೋಪಾಲ್ (ಗ್ರಾಮೀಣ) ಪೊಲೀಸ್ ಮಹಾನಿರ್ದೇಶಕರು ವಿಶೇಷ ತನಿಖಾ ತಂಡದ ನೇತೃತ್ವ ವಹಿಸಲಿದ್ದಾರೆ ಎಂದು ದಿ ಇಂಡಿಯನ್ ಎಕ್ಸ್ಪ್ರೆಸ್ ವರದಿ ಮಾಡಿದೆ. ಈ ತಂಡದಲ್ಲಿ ಹೆಚ್ಚುವರಿ ಪೊಲೀಸ್ ಆಯುಕ್ತರು (ಅಪರಾಧ ಮತ್ತು ಪ್ರಧಾನ ಕಚೇರಿ), ಮಹಿಳಾ ಸುರಕ್ಷತಾ ಶಾಖೆಯ ಸಹಾಯಕ ಪೊಲೀಸ್ ಮಹಾನಿರ್ದೇಶಕರು ಮತ್ತು ರಾಜ್ಯ ಸೈಬರ್ ಸೆಲ್ ಪೊಲೀಸ್ ವರಿಷ್ಠಾಧಿಕಾರಿಗಳು ಸಹ ಇರುತ್ತಾರೆ.

# ಅಭ್ಯರ್ಥಿಯ ಬದಲು ಎಂಬಿಬಿಎಸ್ ವೈದ್ಯ ಪರೀಕ್ಷೆ ಹಾಜರು: ವಂಚನೆ ಆರೋಪದಡಿ ಬಂಧನ

**ಪಟನಾ, ಮೇ.6–** ನೀಟ್ ಯುಜಿ ಪರೀಕ್ಷೆಯ ಸಂದರ್ಭದಲ್ಲಿ ಅಭ್ಯರ್ಥಿಯಂತೆ ನಟಿಸಿ ಪರೀಕ್ಷೆ ಬರೆಯಲು ಬಂದಿದ್ದ ಎಂಬಿಬಿಎಸ್ ವೈದ್ಯ ಸೇರಿದಂತೆ ವಂಚನೆ ಆರೋಪದ ಮೇಲೆ ಬಿಹಾರದ ಸಮಸ್ತಿಪುರ ಪೊಲೀಸರು ಇಬ್ಬರು ವ್ಯಕ್ತಿಗಳನ್ನು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಆರೋಪಿಗಳ ಬಳಿಯಿಂದ ಮೂರು ಮೊಬೈಲ್ ಫೋನ್‌ಗಳು, ಒಂದು ಕಾರು ಮತ್ತು 50,000 ರೂ. ನಗದು ವಶಪಡಿಸಿಕೊಳ್ಳಲಾಗಿದೆ.

ಬಂಧಿತರು ನೀಟ್–ಯುಜಿ 2024 ಪರೀಕ್ಷಾ ಪತ್ರಿಕೆ ಸೋರಿಕೆಯ ಕಿಂಗ್ಪಿನ್ ಸಂಜೀವ್ ಮುಖಿಯಾ ಅವರೊಂದಿಗೆ ಸಂಪರ್ಕ ಹೊಂದಿದ್ದಾರೆಯೇ ಎಂದು ತನಿಖಾ ಅಧಿಕಾರಿಗಳು ಖಚಿತಪಡಿಸಿಕೊಳ್ಳುತ್ತಿದ್ದಾರೆ, ಪ್ರಸ್ತುತ ಪಾಟ್ನಾ ಬಳಿಯ ಬೇವೂರ್ ಕೇಂದ್ರ ಜೈಲಿನಲ್ಲಿ ಅವರು ಇರಿಸಲಾಗಿದೆ. ಮೋಹನ್ಪುರದ ಪರೀಕ್ಷಾ ಕೇಂದ್ರದ ಹೊರಗೆ ನಿಲ್ಲಿಸಿದ್ದ ಕಾರಿನಲ್ಲಿ ಕುಳಿತಿದ್ದ ಇಬ್ಬರು ವ್ಯಕ್ತಿಗಳನ್ನು ಪೊಲೀಸ್ ತಂಡ ಬಂಧಿಸಿದೆ ಎಂದು ಸಮಸ್ತಿಪುರದ ಎಎಸ್ಪಿ ಸಂಜಯ್ ಕುಮಾರ್ ಪಾಂಡೆ ತಿಳಿಸಿದ್ದಾರೆ. ಅವರ ಮೊಬೈಲ್ ಫೋನ್ಗಳಲ್ಲಿ ವಿವಿಧ ಅಭ್ಯರ್ಥಿಗಳ ಪ್ರವೇಶ ಪತ್ರಗಳು ಇರುವುದನ್ನು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ವಿಚಾರಣೆ ಸಮಯದಲ್ಲಿ, ಸಮಸ್ತಿಪುರ ಮತ್ತು ಇತರ ಸ್ಥಳಗಳಲ್ಲಿನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ದುರ್ಬಲ ಅಭ್ಯರ್ಥಿಗಳ ಬದಲಿಗೆ ತಾವು ಪರೀಕ್ಷೆ ಬರೆಯಲು ಬಂದಿರುವುದಾಗಿ ಇಬ್ಬರೂ ಒಪ್ಪಿಕೊಂಡಿದ್ದಾರೆ ಎಂದು ವರದಿ ಉಲ್ಲೇಖಿಸಿದೆ. ಬಂಧಿತರಲ್ಲಿ ಒಬ್ಬ ಬೇಗುಸರಾಯ್ ವಿಭಾಗೀಯ ಜೈಲಿನಲ್ಲಿ ನಿಯೋಜಿತರಾ ಗಿರುವ ಸರ್ಕಾರಿ ವೈದ್ಯ ಡಾ. ರಂಜೀತ್ ಕುಮಾರ್ ಎಂದು ಗುರುತಿಸಲಾಗಿದ್ದು, ಮತ್ತೊಬ್ಬ ಅವರ ಸಹಚರ ದರ್ಭಂಗಾ ಮೂಲದ ರಾಂಬಾಬು ಮಲಿಕ್ ಎಂದು ಗುರುತಿಸಲಾಗಿದೆ. ?ನೀಟ್–ಯುಜಿ 2025 ಪತ್ರಿಕೆ ಸೋರಿಕೆಯ ಕಿಂಗ್ಪಿನ್ ಸಂಜೀವ್ ಮುಖಿಯಾ ಅವರೊಂದಿಗಿನ ಅವರ ಸಂಪರ್ಕವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಎಎಸ್ಪಿ ಪಾಂಡೆ ಹೇಳಿದ್ದಾರೆ.

2024ರ ನೀಟ್ ಹಗರಣದ ಪ್ರಮುಖ ವ್ಯಕ್ತಿ ಎಂದು ಪೊಲೀಸರು ಗುರುತಿಸಿರುವ ಸಂಜೀವ್ ಮುಖಿಯಾ ಅವರನ್ನು ಆರ್ಥಿಕ ಅಪರಾಧ ಘಟಕ ತಂಡವು ಏಪ್ರಿಲ್ 25, 2025 ರಂದು ಪಟನಾದಲ್ಲಿ ಬಂಧಿಸಿತು. ಪಟನಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಿಂದ ಎಂಬಿಬಿಎಸ್ ಪದವೀಧರರಾಗಿರುವ ಅವರ ಮಗ ಡಾ. ಶಿವ ಕುಮಾರ್ ಅವರನ್ನು ಇದೇ ಪ್ರಕರಣದಲ್ಲಿ ಮೊದಲೇ ಬಂಧಿಸಲಾಗಿತ್ತು. ಅಭಾರತದಾದ್ಯಂತ ವೈದ್ಯಕೀಯ ಸಂಸ್ಥೆಗಳಲ್ಲಿ ಎಂಬಿಬಿಎಸ್ ಮತ್ತು ಬಿಡಿಎಸ್ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆಸಲಾದ ಪ್ರತಿಷ್ಠಿತ ಪರೀಕ್ಷೆಯಾದ ನೀಟ್ ಯುಜಿ ಸೋಮವಾರ ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ನಡೆಯಿತು.

# ಲಡ್ಕಿ ಬೆಹನ್ ಯೋಜನೆ ಸಾಧ್ಯವಿಲ್ಲ: ತಪ್ಪೊಪ್ಪಿಕೊಂಡ ಮಹಾರಾಷ್ಟ್ರ ಸರ್ಕಾರ

**ಮುಂಬೈ, ಮೇ.6–** ಮಹಾರಾಷ್ಟ್ರದ ಬಿಜೆಪಿ ನೇತೃತ್ವದ ಆಡಳಿತಾರೂಢ ಮೈತ್ರಿಕೂಟವು ಕಳೆದ ವರ್ಷದ ವಿಧಾನಸಭಾ ಚುನಾವಣೆಗೆ ಮುನ್ನ ಭರವಸೆ ನೀಡಿದಂತೆ, ಲಡ್ಕಿ ಬೆಹನ್ ಯೋಜನೆಯಡಿ ಮಹಿಳೆಯರಿಗೆ ಮಾಸಿಕ ಆರ್ಥಿಕ ಸಹಾಯವನ್ನು 2,100 ರೂ.ಗಳಿಗೆ ಹೆಚ್ಚಿಸಲು ಸಾಧ್ಯವಿಲ್ಲ ಎಂದು ರಾಜ್ಯದ ಸಚಿವ ಸಂಜಯ್ ಶಿರ್ಸಾತ್ ಹೇಳಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ.

ಆದಾಗ್ಯೂ, ಪ್ರಸ್ತುತ ತಿಂಗಳಿಗೆ 1,500 ರೂ.ಗಳ ಮೊತ್ತವನ್ನು ವಿತರಿಸಲಾಗುವುದು ಎಂದು ಅವರು ಹೇಳಿದ್ದಾರೆ. ಯೋಜನೆಗೆ ಸಂಬಂಧಿಸಿದ ಚುನಾವಣಾ ಭರವಸೆಯನ್ನು ಸರ್ಕಾರವು ಈಡೇರಿಸಲು ಸಾಧ್ಯವಾಗುವುದಿಲ್ಲ ಎಂದು ಸಚಿವರು ಸಾರ್ವಜನಿಕವಾಗಿ ಒಪ್ಪಿಕೊಂಡಿರುವುದು ಇದೇ ಮೊದಲು.

ಮಾಸಿಕ 1,500 ರೂ.ಗಳನ್ನು 2,100 ರೂ.ಗಳಿಗೆ ಹೆಚ್ಚಿಸಲಾಗುವುದಿಲ್ಲ ಎಂಬುದು ವಾಸ್ತವ ಎಂದು ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನಾ ಗುಂಪಿನ ಸದಸ್ಯ ಶಿರ್ಸಾತ್ ಹೇಳಿರುವುದಾಗಿ ಪಿಟಿಐ ವರದಿ ಮಾಡಿದೆ. ಈ ಯೋಜನೆಯನ್ನು ನಿಲ್ಲಿಸಲಾಗುತ್ತದೆ ಅಥವಾ ಮೊತ್ತವನ್ನು ಕಡಿತಗೊಳಿಸಲಾಗುತ್ತದೆ



ಎಂದು ಹೇಳುತ್ತಾ ಸಮಸ್ಯೆ ಸೃಷ್ಟಿಸಲಾಗುತ್ತದೆ. ಅದರೆ, ಲಡ್ಕಿ ಬಹಿನ್ ಯೋಜನೆಯಡಿಯಲ್ಲಿನ ಬದ್ಧತೆಯನ್ನು ಈಡೇರಿಸಲಾಗುತ್ತದೆ. ಎಂದು ಅವರು ಹೇಳಿದ್ದಾರೆ.

ತಮ್ಮ ಸಚಿವಾಲಯವು ಸುಮಾರು 3,000 ಕೋಟಿ ರೂಪಾಯಿಗಳ ಬಾಕಿ ಉಳಿಸಿಕೊಂಡಿದೆ ಎಂದು ಸಚಿವ ಶಿರ್ಸತ್ ಹೇಳಿದ್ದಾರೆ ಎಂದು ವರದಿ ಮಾಡಿದೆ. ನನ್ನ ಇಲಾಖೆಯ ಅಗತ್ಯಗಳನ್ನು ಸಹಾನುಭೂತಿಯಿಂದ ಪರಿಗಣಿಸಲು ಮತ್ತು ನಿಯಮಗಳ ಪ್ರಕಾರ ಸರಿಯಾದ ಹಣವನ್ನು ಬಿಡುಗಡೆ ಮಾಡುವುದನ್ನು ಖಚಿತ 'ಪಡಿಸಿಕೊಳ್ಳಲು ನಾನು ಸುಮಾರು ಒಂದು ತಿಂಗಳ ಹಿಂದೆ ಮುಖ್ಯಮಂತ್ರಿ [ದೇವೇಂದ್ರ ಫಡ್ನವಿಸ್ ಅವರನ್ನು ವಿನಂತಿಸಿದ್ದೆ ಎಂದು ಅವರು ಹೇಳಿರುವುದಾಗಿ ವರದಿಯಾಗಿದೆ.

ನಾನು ಇದನ್ನು ಲಿಖಿತವಾಗಿ ತಿಳಿಸಿದ್ದೇನೆ ಮತ್ತು ರಾಜ್ಯ ಹಣಕಾಸು ಸಚಿವ ಅಜಿತ್ ಪವಾರ್ ಅವರೊಂದಿಗೆ ಮಾತನಾಡಿದ್ದೇನೆ ಎಂದು ಅವರು ಹೇಳಿದ್ದಾರೆ. ಮೇ 3 ರಂದು, ಅಜಿತ್ ಪವಾರ್ ನೇತೃತ್ವದ ಹಣಕಾಸು ಇಲಾಖೆಯು ಅವರಿಗೆ ತಿಳಿಸದೆ ತಮ್ಮ ಸಚಿವಾಲಯದಿಂದ ಹಣವನ್ನು ಅಕ್ರಮವಾಗಿ ತಿರುಗಿಸಿದೆ ಎಂದು ಶಿರ್ಸತ್ ಆರೋಪಿಸಿದ್ದರು. ಅವರು ಬಜೆಟ್ ಸಮಯದಲ್ಲಿ ನನಗೆ ತಿಳಿಸದೆ ನನ್ನ ಇಲಾಖೆಯಿಂದ 7,000 ಕೋಟಿ ರೂಪಾಯಿಗಳನ್ನು ವರ್ಗಾಯಿಸಿದ್ದಾರೆ ಎಂದು ಅವರು ಹೇಳಿದ್ದರು.

ಸರ್ಕಾರವು ಸಾಮಾಜಿಕ ನ್ಯಾಯ ಇಲಾಖೆ ಕಾರ್ಯನಿರ್ವಹಿಸಲು ಬಯಸದಿದ್ದರೆ ಅಥವಾ ಅವರು ಹಣವನ್ನು ಖರ್ಚು ಮಾಡಲು ಬಯಸದಿದ್ದರೆ, ಅವರು ಈ ಇಲಾಖೆಯನ್ನು ಮುಚ್ಚಬೇಕು. ಎಂದು ಅವರು ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದರು. ಹೀಗೆ ಹಣವನ್ನು ತಿರುಗಿಸುವುದು ಮುಂದುವರಿದರೆ, ಹಲವಾರು ಯೋಜನೆಗಳು ಸ್ಥಗಿತಗೊಳ್ಳಬಹುದು ಎಂದು ಶಿರ್ಸತ್ ಹೇಳಿದ್ದಾರೆ.

ಲಡ್ಕಿ ಬಹಿನ್ ಯೋಜನೆಯನ್ನು ತಾನು ವಿರೋಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟವು ಚುನಾವಣೆಯಲ್ಲಿ ಅಧಿಕಾರವನ್ನು ಉಳಿಸಿಕೊಳ್ಳಲು ಇದು ಸಹಾಯ ಮಾಡಿದೆ ಎಂದು ಹೇಳಿದ್ದಾರೆ. ಲಡ್ಕಿ ಬಹಿನ್ ಯೋಜನೆಯಡಿಯಲ್ಲಿ, ವಾರ್ಷಿಕ ಕುಟುಂಬ ಆದಾಯ 2.5 ಲಕ್ಷ ರೂ.ಗಿಂತ ಕಡಿಮೆ ಇರುವ 21 ರಿಂದ 65 ವರ್ಷದೊಳಗಿನ ಮಹಿಳೆಯರು ನೇರ ಬ್ಯಾಂಕ್ ವರ್ಗಾವಣೆಯ ರೂಪದಲ್ಲಿ ತಿಂಗಳಿಗೆ 1,500 ರೂ.ಗಳನ್ನು ಪಡೆಯುತ್ತಾರೆ.

ನವೆಂಬರ್‌ನಲ್ಲಿ ನಡೆದ 288 ಸದಸ್ಯರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ ಮಹಾಯುತಿ ಮೈತ್ರಿಕೂಟ 230 ಸ್ಥಾನಗಳನ್ನು ಗೆಲ್ಲುವಲ್ಲಿ ಈ ನಗದು ವರ್ಗಾವಣೆ ಯೋಜನೆ ನಿರ್ಣಾಯಕ ಪಾತ್ರ ವಹಿಸಿದೆ ಎಂದು ಹೇಳಲಾಗುತ್ತದೆ. ಮೈತ್ರಿಯಲ್ಲಿ ಬಿಜೆಪಿ, ಶಿಂಧೆ ನೇತೃತ್ವದ ಶಿವಸೇನೆ ಮತ್ತು ಅಜಿತ್ ಪವಾರ್ ನೇತೃತ್ವದ ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷದ ಬಣ ಇವೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿವಿ ಘಟಿಕೋತ್ಸವದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರ ಭಾಷಣ

# ವೈದ್ಯ ಕ್ಷೇತ್ರದ ಪದವೀಧರರು ಸಮಾಜದ ಸ್ವಾಸ್ಥ್ಯ ಕಾಪಾಡುವ ಆರೋಗ್ಯದೂತರು: ಶರಣ ಪ್ರಕಾಶ ಪಾಟೀಲ್

**ಬೆಂಗಳೂರು, ಮೇ.6–** ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಪದವಿ ಪಡೆಯುವ ಪ್ರತಿಯೊಬ್ಬರಿಗೂ ಸೇವೆಯೇ ಮುಖ್ಯ ಧ್ಯೇಯವಾಗಿರಬೇಕು. ರೋಗಿಗಳನ್ನು ಅತ್ಯಂತ ಶ್ರದ್ಧೆಯಿಂದ ಹಾಗೂ ಹೆಚ್ಚು ಕಾಳಜಿ ವಹಿಸಿ ಆರೈಕೆ ಮಾಡಬೇಕು. ನಿಮ್ಮ ಸೇವೆಯಿಂದ ಸ್ವಸ್ಥ ಸಮಾಜ ನಿರ್ಮಾಣವಾಗಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ ಪ್ರಕಾಶ ಪಾಟೀಲ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ 27 ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಸಚಿವರು ಭಾಷಣ ಮಾಡಿದರು. ಘಟಿಕೋತ್ಸವದ ಈ ಸಮಾರಂಭ ಕೇವಲ ಶೈಕ್ಷಣಿಕ ಯಶಸ್ವಿನ ಆಚರಣೆಯಲ್ಲ, ಇದು ಆರೋಗ್ಯ ರಕ್ಷಣಾ ವೃತ್ತಿಯ ಮೌಲ್ಯಗಳನ್ನು ಎತ್ತಿ ಹಿಡಿಯುವ ಸುಸಂದರ್ಭ, ನೀವೆಲ್ಲರೂ ಸಮಾಜದ ಸ್ವಾಸ್ಥ್ಯ ಕಾಪಾಡುವ ಆರೋಗ್ಯದೂತರು ಎಂದು ತಿಳಿಸಿದರು.



ನಿಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಸಮಾನ ಆರೋಗ್ಯ ರಕ್ಷಣೆಯ ದೃಷ್ಟಿಕೋನದ ಕಡೆಗೆ ನಿಟ್ಟಿರಬೇಕು. ಪ್ರತಿಯೊಬ್ಬ ವ್ಯಕ್ತಿ, ಆದಾಯ, ಸ್ಥಳ, ಲಿಂಗ ಅಥವಾ ಸಾಮಾಜಿಕ ಸ್ಥಾನಮಾನವನ್ನು ಲೆಕ್ಕಿಸದೆ, ಅವರಿಗೆ ಅಗತ್ಯವಿರುವ ಮತ್ತು ಅರ್ಹವಾದ ಆರೈಕೆ ನೀಡಲು ಸಜ್ಜಾಗಿರಬೇಕು ಎಂದು ಡಾ. ಶರಣ ಪ್ರಕಾಶ ಪಾಟೀಲ ಸಲಹೆ ನೀಡಿದರು. ನೀವು ಭರವಸೆಯಿಂದ ತುಂಬಿದ್ದರೂ, ಅಸಮಾನತೆ ತುಂಬಿರುವ ಜಗತ್ತು ಪ್ರವೇಶಿಸುತ್ತೀರಿ. ಆರೋಗ್ಯ ವೃತ್ತಿಪರರಾಗಿ, ನಿಮ್ಮ ಪಾತ್ರವು ಕ್ಲಿನಿಕಲ್ ಅಭ್ಯಾಸವನ್ನೂ ಮೀರಿರುತ್ತದೆ. ನೀವು ಈಗ ಆರೋಗ್ಯ, ಘನತೆ ಮತ್ತು ನ್ಯಾಯದ ಪಾಲಕರು ಎಂದು ಸಚಿವರು ಹೇಳಿದರು. ಭಾರತದಲ್ಲಿ ವೈವಿಧ್ಯಮಯ ಜನಸಂಖ್ಯೆ ಇದೆ. ಗುಣಮಟ್ಟದ ಆರೋಗ್ಯ ರಕ್ಷಣೆಯನ್ನು ನೀಡಲು ಸವಾಲುಗಳು ಇದ್ದೇ ಇರುತ್ತದೆ. ಗ್ರಾಮೀಣ ಪ್ರದೇಶಗಳು, ಸೇವೆ ಸಲ್ಲಿಸದ ಸಮುದಾಯಗಳು ಮತ್ತು ಸಂಪರ್ಕ ಕಡಿಮೆ ಇರುವ ಪ್ರದೇಶದಲ್ಲಿರುವ ಜನರಿಗೂ ಸಹಾನುಭೂತಿಯ ಆರೈಕೆಯನ್ನು ನೀಡಲು ನೀವು ಸಜ್ಜಾಗಿರಬೇಕು ಎಂದು ತಿಳಿಸಿದರು.

**ರೋಗಿಗಳ ಜತೆ ಸಹಾನುಭೂತಿಯಿಂದ ವರ್ತಿಸಿ:** ನಿಮ್ಮ ಜವಾಬ್ದಾರಿ ಈಗ ಆರಂಭವಾಗುತ್ತದೆ. ನೀವು ನಿಮ್ಮ ವೃತ್ತಿಜೀವನವನ್ನು ಪ್ರಾರಂಭಿಸುವಾಗ, ಪ್ರತಿಯೊಬ್ಬ ರೋಗಿಯನ್ನು ಒಂದು ನಿರ್ದಿಷ್ಟ ವ್ಯಕ್ತಿಯಾಗಿ ಅಥವಾ ಸಂಖ್ಯೆಯಂತೆ ನೋಡದೆ, ಒಬ್ಬ ವ್ಯಕ್ತಿಯಾಗಿ ನೋಡಬೇಕು. ಸಹಾನುಭೂತಿ, ಗೌರವ ಮತ್ತು ತಿಳಿವಳಿಕೆಯಿಂದ ವ್ಯವಹರಿಸಬೇಕು. ಸೂಕ್ಷ್ಮ ಮನಸ್ಥಿತಿ, ನೈತಿಕತೆಯು ಪರಿಣಾಮಕಾರಿ ವೈದ್ಯಕೀಯ ಆರೈಕೆಯ ಮೂಲಾಧಾರವಾಗಿದೆ. ಇಂದಿನ ತ್ವರಿತ ತಾಂತ್ರಿಕ ಪ್ರಗತಿಗಳು ಮತ್ತು ವಿಶೇಷ ಔಷಧದ ಯುಗದಲ್ಲಿ, ನಾವು ಯಾವುದನ್ನೂ ಮರೆಯ ಬಾರದು. ದಯೆ, ಆಲಿಸುವಿಕೆ ಮತ್ತು ಸಾಂಸ್ಕೃತಿಕ ಸೂಕ್ಷ್ಮತೆಯ ಜೊತೆಗೆ ವೃತ್ತಿಪರತೆ ನಿಮ್ಮಲ್ಲಿರಬೇಕು ಎಂದು ಸಚಿವರು ಸಲಹೆ ನೀಡಿದರು. ವಿವಿಧ ವಿಭಾಗಗಳ ಡೀನ್‌ಗಳಾದ ಪ್ರೊ. ಹೊಂಬೇಗೌಡ ಶರತ್‌ಚಂದ್ರ, ಡಾ. ಗಿರೀಶ್‌ರಾವ್ ಮತ್ತು ಡಾ.ಜಿ.ಟಿ. ಸುಭಾಸ್ ಅವರಿಗೆ ಗೌರವ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಜಿ, ಅಜೀಂ ಪ್ರೇಮ್ ಜೀ ಫೌಂಡೇಶನ್ ಅಧ್ಯಕ್ಷರಾದ ಅಜೀಂ ಪ್ರೇಮ್ಜಿ, ಉಪಕುಲಪತಿ ಡಾ.ಭಗವಾನ್ ಸೇರಿದಂತೆ ಹಲವು ಗಣ್ಯರು, ತಜ್ಞರು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವದಂತಿಗಳಿಗೆ ಕಿವಿಗೊಡದಿರಲು ಮನವಿ

**ಬೆಂಗಳೂರು,ಮೇ 6:** ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ ಎ ಮತ್ತು ಗ್ರೂಪ್ ಬಿ ವೃಂದದ ನೇಮಕಾತಿಗಾಗಿ ನಡೆದ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗ ಹೇಳಿದೆ. ಕೆಪಿಎಸ್ಸಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂಬ ಸುದ್ದಿ ಹರಿದಾಡುತ್ತಿದೆ. ಇದು ಸುಳ್ಳು ಸುದ್ದಿಯಾಗಿದೆ ಎಂದು ಈ ರೀತಿಯ ವದಂತಿಗಳಿಗೆ ಕಿವಿಗೊಡಬೇಡಿ ಎಂದು ಕೆಪಿಎಸ್ಸಿ ಮನವಿ ಮಾಡಿದೆ.

ನಿನ್ನೆ ನಡೆದ ಮುಖ್ಯ ಪರೀಕ್ಷೆಯ ಸಾಮಾನ್ಯ ಅಧ್ಯಯನ–1 ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಶಂಕೆ ವ್ಯಕ್ತವಾಗಿರುವ ಹಿನ್ನೆಲೆ ಅಭ್ಯರ್ಥಿಗಳು ದೂರು ಸಲ್ಲಿಸಿದ್ದರು. ಬೆಂಗಳೂರಿನ ಕಸ್ತೂರಿ ಬಾ ನಗರದ ಬಿಬಿಎಂಪಿ ಪಿಯು ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂದು ಅಭ್ಯರ್ಥಿಗಳು ಆರೋಪಿಸಿದ್ದರು. ಈ ಕುರಿತು ಸ್ಪಷ್ಟನೆ ನೀಡಿರುವ ಕೆಪಿಎಸ್ಸಿ ಈ ವಿಷಯದ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಲಾಗಿದ್ದು, ಪರೀಕ್ಷಾ ಉಪ ಕೇಂದ್ರದ ಮೇಲ್ವಿಚಾರಕರು ಮತ್ತು ಆಯೋಗದಿಂದ ನಿಯೋಜಿತರಾದ ಸ್ಥಳೀಯ ನಿರೀಕ್ಷಣಾಧಿಕಾರಿಗಳಿಂದ ವಿಸ್ತೃತ ವರದಿ ಪಡೆಯಲಾಗಿದೆ.

ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ಮತ್ತು ಪರೀಕ್ಷಾ ಗೌಪ್ಯತೆಯನ್ನು ಕಾಪಾಡುವ ಮತ್ತು ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸುವ ಹಲವು ಹಂತಗಳ ಸುರಕ್ಷಾ ಕ್ರಮಗಳನ್ನು ಅಳವಡಿಸಲಾಗಿರುತ್ತದೆ ಅದರಂತೆಯೇ ನಿನ್ನೆ ನಡೆದ ಪರೀಕ್ಷೆಯಲ್ಲೂ ಸಹ ಪ್ರಶ್ನೆ ಪತ್ರಿಕೆಯ ಭದ್ರತೆಗಾಗಿ ಎಲ್ಲ ಅಗತ್ಯಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಲಾಗಿದೆ. ಆಯೋಗವು ಪರೀಕ್ಷಾ ಗೌಪ್ಯ, ಸಾಮಗ್ರಿಗಳ ಗೌಪ್ಯತೆ ಸುರಕ್ಷತೆ ಮತ್ತು ಭದ್ರತೆಯನ್ನೂ ಕಾಪಾಡುವಲ್ಲಿ ಜವಾಬ್ದಾರಿಯುತವಾಗಿ, ಪಾರದರ್ಶಕವಾಗಿ ಕಾರ್ಯನಿರ್ವಹಿಸಲು ಯತ್ನಿಸುತ್ತಿದೆ. ಮಾಧ್ಯಮದಲ್ಲಿ ಬಿತ್ತರಗೊಳುತ್ತಿರುವ ವಿಷಯವೂ ಸತ್ಯಕ್ಕೆ ದೂರವಾಗಿದ್ದು, ಇತರ ಅಭ್ಯರ್ಥಿಗಳು ಇದರಿಂದ ಯಾವುದೇ ರೀತಿಯಲ್ಲಿಯೂ ಹತಾಶರಾಗಬೇಡಿ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಕೆಪಿಎಸ್ಸಿ ಪ್ರಕಟಣೆಯಲ್ಲಿ ತಿಳಿಸಿದೆ.

# ಪ್ರಶ್ನೆಪತ್ರಿಕೆ ಸೋರಿಕೆ: ಉನ್ನತ ಮಟ್ಟದ ತನಿಖೆಗೆ ಬಿ.ವೈ.ವಿಜಯೇಂದ್ರ ಆಗ್ರಹ

**ಬೆಂಗಳೂರು,ಮೇ 6:** ಕರ್ನಾಟಕ ಲೋಕಸೇವಾ ಆಯೋಗದ ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಆಗ್ರಹಿಸಿದ್ದಾರೆ.ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಟ್ವೀಟ್ ಮಾಡಿರುವ ಅವರು, ಸೋಮವಾರ ನಡೆದ ಕೆಪಿಎಸ್ಸಿ ಪರೀಕ್ಷೆಯಲ್ಲಿ ಬೆಂಗಳೂರಿನ ಕೇಂದ್ರವೊಂದರಲ್ಲಿ ಮೋಹರ್ ತೆರೆದಿದ್ದ ಪ್ರಶ್ನೆಪತ್ರಿಕೆಯ ಬಂಡಲ್ ಪತ್ತೆಯಾಗಿದ್ದು, ಇದನ್ನು ಪರೀಕ್ಷಾ ಕೊಠಡಿ



ಮೇಲ್ವಿಚಾರಕರೂ ಸಹ ಒಪ್ಪಿದ್ದು, ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವ ಅನುಮಾನ ಹುಟ್ಟುಹಾಕಿದೆ.ಕರ್ನಾಟಕ ಲೋಕಸೇವಾ ಆಯೋಗವು ಪದೇ ಪದೇ ಎಡವಟ್ಟುಗಳು ಗೊಂದಲ ಸೃಷ್ಟಿಸಿ ದೇಶದೆದುರು ಕರ್ನಾಟಕದ ಘನತೆ ಕುಗ್ಗಿಸುವ ಕೆಲಸ ಮಾಡುತ್ತಿದ್ದರೂ ಕಾಂಗ್ರೆಸ್ ಸರ್ಕಾರ ಕಣ್ಣುಮುಚ್ಚಿ ಕುಳಿತಿರುವುದು ದುರಂತದ ದೌರ್ಭಾಗ್ಯವೇ ಸರಿ ಎಂದಿದ್ದಾರೆ. ಈ ಕೂಡಲೇ ಪರೀಕ್ಷಾ ಕೊಠಡಿಗೆ ಪ್ರಶ್ನೆಪತ್ರಿಕೆ ಬರುವ ಮುನ್ನವೇ ಬಂಡಲ್ ತೆರೆದಿರುವ ಕುರಿತು ಉನ್ನತ ಮಟ್ಟದ ತನಿಖೆ ನಡೆಸಿ ಕೆಪಿಎಸ್ಸಿ ಪರೀಕ್ಷಾ ಅಭ್ಯರ್ಥಿಗಳಿಗಾಗುತ್ತಿರುವ ಬಹು ದೊಡ್ಡ ಅನ್ಯಾಯ, ದ್ರೋಹಗಳನ್ನು ಸರಿಪಡಿಸದಿದ್ದರೆ ಲಕ್ಷಾಂತರ ವಿದ್ಯಾರ್ಥಿಗಳ ಆಕ್ರೋಶಕ್ಕೆ ಕಾಂಗ್ರೆಸ್ ಬೆಲೆ ತೆರಬೇಕಾದೀತು ಎಂದು ಎಚ್ಚರಿಸಿದ್ದಾರೆ.ಪಾರದರ್ಶಕವಾಗಿ ಪರೀಕ್ಷೆ ನಡೆಸಬೇಕಿದ್ದ ಕೆಪಿಎಸ್ಸಿ ಯು ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಲೋಪದೋಷಗಳು ಹಾಗೂ ಅವ್ಯವಸ್ಥೆಯ ಭ್ರಷ್ಟ ಕೂಪವಾಗಿ ಮಾರ್ಪಟ್ಟಿರುವುದು ಬಯಲಾಗಿದೆ. ಕೆಪಿಎಸ್ಸಿ ಪೂರ್ವಭಾವಿ ಪರೀಕ್ಷೆ, ಮರುಪರೀಕ್ಷೆ, ಮುಖ್ಯಪರೀಕ್ಷೆ ಈ ಮೂರೂ ಪರೀಕ್ಷೆಗಳಲ್ಲೂ ಆಗಿರುವ ಭಾಷಾಂತರ ಲೋಪದಿಂದ ಈಗಾಗಲೇ ಲಕ್ಷಾಂತರ ಕನ್ನಡ ಮಾಧ್ಯಮ ವಿದ್ಯಾರ್ಥಿಗಳು ಅನ್ಯಾಯಕ್ಕೆ ಒಳಗಾಗಿದ್ದಾರೆ. ಇದೀಗ ಮತ್ತೊಂದು ಪ್ರಮಾದವೆಸಗಿ ಉದ್ಯೋಗಾಕಾಂಕ್ಷಿಗಳು ಭವಿಷ್ಯದ ಜತೆ ಚೆಲ್ಲಾಟವಾಡಿ ಸಾರ್ವಜನಿಕ ವಲಯದಲ್ಲೂ ಆಕ್ರೋಶಕ್ಕೆ ಗುರಿಯಾಗಿದೆ ಎಂದು ಟ್ವೀಟ್ ಮಾಡಿದ್ದಾರೆ.

# ಮಾನವೀಯತೆ, ಅನುಕಂಪದ ಆಧಾರದಲ್ಲಿ ಎಲ್‌ಟಿವಿ/ ವೀಸಾ ವಿಸ್ತರಣೆ ಕೋರಿ ರಾಜ್ಯ ಹೈಕೋರ್ಟ್‌ಗೆ ಅರ್ಜಿ

**ಬೆಂಗಳೂರು, ಮೇ. 6–** ಪಹಲ್ಗಾಮ್ ಭಯೋತ್ಪಾದಕ ಕೃತ್ಯದ ನಂತರ ಭಾರತದಲ್ಲಿರುವ ಪಾಕಿಸ್ತಾನಿ ಪ್ರಜೆಗಳು ದೇಶ ತೊರೆಯಬೇಕೆಂಬ ಕೇಂದ್ರ ಸರ್ಕಾರದ ನಿರ್ದೇಶನದಿಂದ ಸಂಕಷ್ಟಕ್ಕೆ ಸಿಲುಕಿರುವ ಭಾರತೀಯ ತಾಯಿ ಮತ್ತು ಪಾಕಿಸ್ತಾನದ ತಂದೆಗೆ ಜನಿಸಿದ ಮೂರು ಮಕ್ಕಳು ತಮಗೆ ಮಾನವೀಯತೆ ಮತ್ತು ಅನುಕಂಪದ ಆಧಾರದಲ್ಲಿ ಎಲ್‌ಟಿವಿ/ವೀಸಾ ವಿಸ್ತರಣೆ ಕೋರಿ ರಾಜ್ಯ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಪಾಕಿಸ್ತಾನದ ಬಲೂಚಿಸ್ತಾನದ 8 ವರ್ಷದ ಕುಮಾರಿ ಬಿ ಬಿ ಯಾಮಿನಾ, 4 ವರ್ಷದ ಮಾಸ್ಟರ್ ಮುಹಮ್ಮದ್ ಮುದಾಸ್ಸಿರ್ ಮತ್ತು 3 ವರ್ಷದ ಮಾಸ್ಟರ್ ಮೊಹಮ್ಮದ್ ಯೂಸಫ್ ಅವರು ತಮ್ಮ ವಿರುದ್ಧ ಮೇ 15ರವರೆಗೆ ಬಲವಂತದ ಕ್ರಮಕೈಗೊಳ್ಳದಂತೆ ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ಜಿ ಉಮಾ ಅವರ ರಜಾಕಾಲದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಪ್ರತಿವಾದಿಗಳಾದ ಕೇಂದ್ರ ಮತ್ತು ರಾಜ್ಯ ಸರ್ಕಾರ ಹಾಗೂ ಮೈಸೂರು ಪೊಲೀಸ್ ಆಯುಕ್ತರು ಹಾಗೂ ವಿದೇಶಿಗರ ನೋಂದಣಿ ಅಧಿಕಾರಿಗೆ ನೋಟಿಸ್ ಜಾರಿ ಮಾಡಿದ ಹೈಕೋರ್ಟ್ ಪ್ರಕರಣದ ವಿಚಾರಣೆಯನ್ನು ಮೇ 8ಕ್ಕೆ ಮುಂದೂಡಿದೆ.

ಅರ್ಜಿದಾರ ಮಕ್ಕಳ ತಾಯಿ ಭಾರತದವರಾಗಿದ್ದು ಷರಿಯತ್ ಕಾನೂನಿನ ಪ್ರಕಾರ ಪಾಕಿಸ್ತಾನದ ಪ್ರಜೆಯನ್ನು ವಿವಾಹವಾಗಿದ್ದಾರೆ. ಅದಾಗ್ಯೂ, ಪಾಕಿಸ್ತಾನದ ಪೌರತ್ವ ಪಡೆಯದೇ ಭಾರತದ ಪ್ರಜೆಯಾಗಿ ಮುಂದುವರೆದಿದ್ದಾರೆ. ಆದರೆ, ಅರ್ಜಿದಾರರ ಮಕ್ಕಳು ಭಾರತೀಯ ತಾಯಿ ಮತ್ತು ಪಾಕಿಸ್ತಾನದ ತಂದೆಗೆ ಜನಿಸಿರುವುದರಿಂದ ಪಾಕಿಸ್ತಾನಿ ಪ್ರಜೆಗಳಾಗಿದ್ದು, ಸಂಬಂಧಿಕರ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾಗಲು ತಾಯಿಯೊಂದಿಗೆ 2025ರ ಜನವರಿ 4ರಂದು ವೀಸಾ ಪಡೆದು ಭಾರತಕ್ಕೆ ಬಂದಿದ್ದರು. ಬಳಿಕ 2025ರ ಜೂನ್ 18ರವರೆಗೂ ವೀಸಾ ಅವಧಿ ವಿಸ್ತರಿಸಲಾಗಿದೆ.

ಈ ನಡುವೆ, ಪಹಲ್ಗಾಮ್‌ನಲ್ಲಿ ದೇಶೀಯ ಪ್ರವಾಸಿಗರ ಮೇಲೆ ನಡೆದ ಗುಂಡಿನ ದಾಳಿಯ ಬಳಿಕ ಭಾರತದಲ್ಲಿ ವೀಸಾ ಪಡೆದು ನೆಲೆಸಿರುವ ಎಲ್ಲ ಪಾಕಿಸ್ತಾನದ ಪ್ರಜೆಗಳು ವೀಸಾ ಹಿಂದಿರುಗಿಸಬೇಕು. ಏಪ್ರಿಲ್ 30ರ ಅಂತ್ಯದೊಳಗಾಗಿ ಭಾರತ ತೊರೆಯಬೇಕು ಎಂದು ಕೇಂದ್ರ ಸರ್ಕಾರವು ಗಡುವು ವಿಧಿಸಿತು. ಅದರಂತೆ ಅರ್ಜಿದಾರರು 2025ರ ಏಪ್ರಿಲ್ 28ರಂದು ಪಾಕಿಸ್ತಾನಕ್ಕೆ ತೆರಳಲು ಅಟ್ಟಾರಿ ಗಡಿಗೆ ತೆರಳಿದ್ದರು. ಈ ಸಂದರ್ಭದಲ್ಲಿ ಮಕ್ಕಳ ತಂದೆ ಮೊಹಮ್ಮದ್ ಫಾರೂಖ್ ತಮ್ಮ ದೇಶಕ್ಕೆ ಕರೆದೊಯ್ಯಲು ಬಾರದೇ ಅವರ ಹೊಣೆಗಾರಿಕೆ ನಿರಾಕರಿಸಿದ್ದಾರೆ. ತಮ್ಮ ಅಪ್ರಾಪ್ತ ವಯಸ್ಸಿನ ಮಕ್ಕಳನ್ನು ಸ್ವೀಕರಿಸಲು ಯಾರೂ ಮುಂದೆ ಬಾರದ ಕಾರಣ ಭಾರತದ ವಲಸೆ ಅಧಿಕಾರಿಗಳು ಮಕ್ಕಳನ್ನು ಮತ್ತೆ ಮೈಸೂರಿಗೆ ಕಳುಹಿಸಿದ್ದಾರೆ. ಹೀಗಾಗಿ, ತಮ್ಮ ಮೂವರು ಮಕ್ಕಳಿಗೆ ಮಾನವೀಯತೆಯ ಆಧಾರ ಮತ್ತು ಅನುಕಂಪದ ನೆಲೆಯಲ್ಲಿ ಹಾಗೂ ಪತಿಯಿಂದ ಪ್ರತ್ಯೇಕಗೊಂಡಿರುವ ಆಧಾರದಲ್ಲಿ ಎಲ್ಟಿವಿ/ವೀಸಾ ವಿಸ್ತರಣೆ ನೀಡಬೇಕು ಎಂದು ರಮ್ಸಾ ಜಹಾನ್ ಅವರು ಏಪ್ರಿಲ್ 29ರಂದು ಎಫ್‌ಆರ್‌ಒ ಅಧಿಕಾರಿಗೆ ಮನವಿ ಸಲ್ಲಿಸಿದ್ದರು. ಈ ಮನವಿ ಪರಿಗಣಿಸಲು ನಿರ್ದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

# ಲಂಚ ಪಡೆಯುತ್ತಿದ್ದ ಕೆ.ಜಿ.ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್ ಲೋಕಾಯುಕ್ತ ಬಲೆಗೆ

**ಬೆಂಗಳೂರು, ಮೇ. 6–** ಪ್ರಕರಣವೊಂದರ ಇತ್ಯಾರ್ಥಕ್ಕಾಗಿ ಲಂಚ ಪಡೆಯುತ್ತಿದ್ದ ಕೆ.ಜಿ.ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಹಾಗೂ ಸಬ್‌ಇನ್ಸ್‌ಪೆಕ್ಟರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಇನ್ಸ್‌ಪೆಕ್ಟರ್ ಶಿವಾಜಿರಾವ್ ಹಾಗೂ ಪಿಎಸ್‌ಐ ಶಿವಾನಂದ ಅವರು ಒಂದು ಲಕ್ಷ ಲಂಚ ಪಡೆಯುವಾಗ ಲೋಕಾಯುಕ್ತ ಡಿವೈಎಸ್‌ಪಿ ಗಿರೀಶ್ ಅವರ ತಂಡಕ್ಕೆ ಸಿಕ್ಕಿಬಿದ್ದಾರೆ. ಠಾಣೆಯಲ್ಲಿ ದಾಖಲಾಗಿದ್ದ ದೂರಿನ ಸಂಬಂಧಿಸಿದಂತೆ ಆರೋಪಿತ ವ್ಯಕ್ತಿಯೊಬ್ಬರಿಗೆ ಸಹಾಯ ಮಾಡಲು ಇವರು ಒಟ್ಟು 6 ಲಕ್ಷ ರೂ.ಗಳ ಲಂಚ ಕೇಳಿದ್ದು, ಈ ಸಂಬಂಧ ಲೋಕಾಯುಕ್ತಕ್ಕೆ ದೂರು ನೀಡಲಾಗಿದ್ದು. ಗಿರೀಶ್ ಅವರ ನೇತೃತ್ವದಲ್ಲಿ ಇನ್ಸ್‌ಪೆಕ್ಟರ್‌ಗಳಾದ ಆನಂದ್, ಶಿವಕುಮಾರ್ ಅವರ ತಂಡ ಕಾರ್ಯಾಚರಣೆ ಕೈಗೊಂಡು ಆರೋಪಿಗಳು ಒಂದು ಲಕ್ಷ ಲಂಚ ಪಡೆಯುವಾಗ ಸಿಕ್ಕಿಬಿದ್ದಿದ್ದಾರೆ.

# ಬಿಜೆಪಿಯವರು ಸುಹಾಸ್‌ನನ್ನು ರೌಡಿಪಟ್ಟಿಗೆ ಏಕೆ ಸೇರಿಸಿದ್ದರು: ದಿನೇಶ್ ಗುಂಡೂರಾವ್

**ಬೆಂಗಳೂರು, ಮೇ.6–** ಸುಹಾಸ್ ಶೆಟ್ಟಿ ವಿರುದ್ಧ ರೌಡಿಶೀಟರ್ ತೆರೆದಿದ್ದು 2020ರಲ್ಲಿ. ಆಗ ಅಧಿಕಾರದಲ್ಲಿದ್ದದ್ದು ಬಿಜೆಪಿ ಸರ್ಕಾರ. ಗೃಹ ಸಚಿವರಾಗಿದ್ದ ಬಸವರಾಜ ಬೊಮ್ಮಾಯಿ ಇಂದು ಸುಹಾಸ್‌ನನ್ನು ಮಹಾತ್ಮ ಎಂದು ಬಿಂಬಿಸುತ್ತಿರುವ ಬಿಜೆಪಿಯವರು ಆಗ ಯಾಕೆ ಸುಹಾಸ್‌ನನ್ನು ರೌಡಿ ಪಟ್ಟಿಗೆ ಸೇರಿಸಿದ್ದರು ಎಂದು ಸಚಿವ ದಿನೇಶ್ ಗುಂಡೂರಾವ್ ಅವರು ಪ್ರಶ್ನಿಸಿದ್ದಾರೆ. ಈ ಸಂಬಂಧ ತಮ್ಮ ಸಾಮಾಜಿಕ ಜಾಲತಾಣದಲ್ಲಿ ದಾಖಲೆ ಬಿಡುಗಡೆ ಮಾಡಿ, ಹೇಳಿಕೆ ನೀಡಿರುವ ಅವರು, ಸುಹಾಸ್‌ಶೆಟ್ಟಿ ಮೇಲೆ ರೌಡಿಶೀಟರ್ ಓಪನ್ ಮಾಡಿದ್ದೇ ಬಿಜೆಪಿ ಅವಧಿಯಲ್ಲಿ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದ್ದಾರೆ.

ಅಮಾಯಕರ ತಲೆಯಲ್ಲಿ ಮತಾಂಧತೆಯ ಅಮಲು ತುಂಬಿ ಕಂಡವರ ಮಕ್ಕಳನ್ನು ಬಾವಿಗೆ ತಳ್ಳುತ್ತಿರುವ ಬಿಜೆಪಿ ನಾಯಕರ ಗಮನಕ್ಕೆ. ಇದು ಇತ್ತೀಚೆಗೆ ಹತ್ಯೆಯಾದ ಸುಹಾಶ್ ಶೆಟ್ಟಿ ವಿರುದ್ಧ ರೌಡಿ ಶೀಟರ್ ತೆರೆಯಲು ಪೊಲೀಸ್ ಇಲಾಖೆ ನೀಡಿದ್ದ ಆದೇಶದ ಪ್ರತಿ.ಸುಹಾಸ್ ಶೆಟ್ಟಿ ವಿರುದ್ಧ ರೌಡಿಶೀಟರ್ ಓಪನ್ ಆಗಿದ್ದು 2020 ರಲ್ಲಿ. ಆಗ ಅಧಿಕಾರದಲ್ಲಿದ್ದದ್ದು ಬಿಜೆಪಿ ಸರ್ಕಾರ. ಗೃಹ ಸಚಿವರಾಗಿದ್ದ ಪುಣ್ಯಾತ್ಮ ಬಸವರಾಜ ಬೊಮ್ಮಾಯಿ ಇಂದು ಸುಹಾಸ್‌ನನ್ನು



ಮಹಾತ್ಮ ಎಂದು ಬಿಂಬಿಸುತ್ತಿರುವ ಬಿಜೆಪಿಯವರು ಆಗ ಯಾಕೆ ಸುಹಾಸ್‌ನನ್ನು ರೌಡಿ ಪಟ್ಟಿಗೆ ಸೇರಿಸಿದ್ದರು. ಕರಾವಳಿಯನ್ನು ಕೋಮು ಪ್ರಯೋಗ ಶಾಲೆಯನ್ನಾಗಿ ಮಾಡಿಕೊಂಡಿರುವ ಬಿಜೆಪಿಯವರೇ ಕ್ರಿಮಿನಲ್‌ಗಳ ನಿಜವಾದ ಸೃಷ್ಟಿಕರ್ತರು. ಇವರು ಅಧಿಕಾರದಲ್ಲಿದ್ದಾಗ ಕ್ರಿಮಿನಲ್‌ಗಳನ್ನು ಸೃಷ್ಟಿಸುತ್ತಾರೆ. ಅವರ ಮೇಲೆ ರೌಡಿಶೀಟರ್ ತೆರೆಯುತ್ತಾರೆ.

ಹಣ ಬಿದ್ದ ಕೂಡಲೆ ಅದೇ ಕ್ರಿಮಿನಲ್‌ಗಳನ್ನು ಮಹಾತ್ಮರಂತೆ ಬಿಂಬಿಸಿ ಹುತಾತ್ಮರನ್ನಾಗಿ ಮಾಡುತ್ತಾರೆ.ಸುಹಾಸ್ ಹತ್ಯೆ ನಂತರ ಕೂಗುಮಾರಿಗಳಂತೆ ಅರಚುತ್ತಿರುವ ಬಿಜೆಪಿ ನಾಯಕರ ಯಾರ ಮಕ್ಕಳಾದರೂ ಧರ್ಮದ ಅಮಲಿನಲ್ಲಿ ಬೀದಿ ಕಾಳಗ ಮಾಡುತ್ತಿದ್ದಾರೆಯೆ.? ಅಥವಾ ಧರ್ಮಕ್ಕಾಗಿ ಬಡಿ ದಾಡುತ್ತಿದ್ದಾರೆಯೆ.

> **ಕರಾವಳಿಯನ್ನು ಕೋಮು ಪ್ರಯೋಗ ಶಾಲೆಯನ್ನಾಗಿ ಮಾಡಿಕೊಂಡಿರುವ ಬಿಜೆಪಿಯವರೇ ಕ್ರಿಮಿನಲ್ಗಳ ನಿಜವಾದ ಸೃಷ್ಟಿಕರ್ತರು. ಇವರು ಅಧಿಕಾರದಲ್ಲಿದ್ದಾಗ ಕ್ರಿಮಿನಲ್‌ಗಳನ್ನು ಸೃಷ್ಟಿಸುತ್ತಾರೆ. ಅವರ ಮೇಲೆ ರೌಡಿ ಶೀಟರ್ ತೆರೆಯುತ್ತಾರೆ. ಹಣ ಬಿದ್ದ ಕೂಡಲೆ ಅದೇ ಕ್ರಿಮಿನಲ್‌ಗಳನ್ನು ಮಹಾತ್ಮರಂತೆ ಬಿಂಬಿಸಿ ಹುತಾತ್ಮರನ್ನಾಗಿ ಮಾಡುತ್ತಾರೆ.**

'ಬಿಜೆಪಿ ನಾಯಕರ ಧರ್ಮಾಂಧತೆಗೆ ಬೀದಿ ಹೆಣವಾಗುತ್ತಿರುವುದು ಬಡವರ ಮಕ್ಕಳು. ಇದು ಸತ್ಯವಲ್ಲವೆ' ಬಿಜೆಪಿಯವರ ಕೆಟ್ಟ ರಾಜಕೀಯಕ್ಕೆ ಕರಾವಳಿಯಲ್ಲಿ ಎಷ್ಟೋ ಜನರ ಬಲಿಯಾಗಿದೆ. ಎಷ್ಟೋ ಮನೆಗಳ ದೀಪ ಆರಿ ಹೋಗಿದೆ. ಇಷ್ಟಾದರೂ ಇವರ ರಕ್ತದಾಹ ನಿಂತಿಲ್ಲ. ಕರಾವಳಿಯಲ್ಲಿ ಇನ್ನಷ್ಟು ಹೆಣ ಬೀಳಬೇಕು ಎನ್ನುವ ಉದ್ದೇಶದಿಂದ ದುಷ್ಟ ರಾಜಕಾರಣ ಮಾಡುತ್ತಿದ್ದಾರೆ. ದಕ್ಷಿಣ ಕನ್ನಡದ ಜನ ಪ್ರಜ್ಞಾವಂತಿಕೆಯ ಜೊತೆಗೆ ಸೂಕ್ಷ್ಮತೆಯನ್ನು ಅರಿತು ಕೊಂಡವರು. ಇನ್ನಾದರೂ ಕರಾವಳಿಯ ಜನ ಬಿಜೆಪಿಯ ಹುನ್ನಾರ ಅರಿಯಬೇಕಿದೆ. ಇಲ್ಲದಿದ್ದರೆ ಬಿಜೆಪಿ ಯವರ ಕೆಟ್ಟ ರಾಜಕಾರಣಕ್ಕೆ ಜಿಲ್ಲೆಯ ನೆಮ್ಮದಿಯೇ ಹಾಳಾಗಲಿದೆ ಎಂದು ಕಿಡಿಕಾರಿದ್ದಾರೆ.

ಪೊಲೀಸರು ತಮ್ಮ ದಾಖಲೆಗಾಗಿ ರೌಡಿಶೀಟರ್ ಮಾಡಿದ್ದಾರೆ

# ದಿನೇಶ್ ಗುಂಡೂರಾವ್ ಹೇಳಿಕೆಗೆ ತಿರುಗೇಟು ನೀಡಿದ ಸಿ.ಟಿ.ರವಿ

**ಬೆಂಗಳೂರು, ಮೇ 6–** ಮಂಗಳೂರಿನಲ್ಲಿ ಕೊಲೆಯಾದ ಸುಹಾಸ್ ಶೆಟ್ಟಿ ರೌಡಿಶೀಟ್ ತೆರೆದಿದ್ದೇ ಬಿಜೆಪಿ ಅವಧಿಯಲ್ಲಿ ಎಂಬ ಸಚಿವ ದಿನೇಶ್‌ಗುಂಡೂರಾವ್ ಹೇಳಿಕೆಗೆ ಕಿಡಿಕಾರಿರುವ ಮಾಜಿ ಸಚಿವ ಸಿ.ಟಿ.ರವಿ ಅವರು, ಎಷ್ಟೋ ಸಲ ಆರೋಪಿಗಳಿಗೆ ರೌಡಿ ಶೀಟರ್ ತೆರೆದಿರುವುದು ಗೊತ್ತಿರುವುದಿಲ್ಲ. ಪೊಲೀಸರು ಅವರ ದಾಖಲೆಗಾಗಿ ರೌಡಿಶೀಟರ್ ಮಾಡಿರುತ್ತಾರೆ ಎಂದು ತಿರುಗೇಟು ನೀಡಿದ್ದಾರೆ.

ಬಿಜೆಪಿ ಅವಧಿಯಲ್ಲಿ ಸುಹಾಸ್ ಶೆಟ್ಟಿ ಹೆಸರಿನಲ್ಲಿ ರೌಡಿ ಶೀಟರ್ ತೆರೆಯಾಗಿತ್ತು ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಅದು ಯಾವ ಸಚಿವರು, ಶಾಸಕರಿಗೂ ಗೊತ್ತೇ ಇರುವುದಿಲ್ಲ. ಎಷ್ಟೋ ಸಲ ಆರೋಪಿಗಳಿಗೂ ಗೊತ್ತಿರುವುದಿಲ್ಲ ಎಂದರು. ಯಾರು ಯಾರು ಯಾವ ಯಾವ ಕಾರಣಕ್ಕೆ ರೌಡಿಶೀಟರ್‌ಗಳನ್ನು ತೆರೆದಿದ್ದಾರೆ ಎಂಬುದನ್ನು ಹೇಳಬೇಕಾ ಎಂದು ವಾಗ್ದಾಳಿ ನಡೆಸಿದ ಅವರು, ಸಚಿವ ಪರಮೇಶ್ವರ್ ಅವರು ಸುಹಾಸ್ ಶೆಟ್ಟಿ ರೌಡಿಶೀಟರ್. ಹಾಗಾಗಿ ಅವರ ಮನೆಗೆ ಹೋಗಿಲ್ಲ ಎಂದಿದ್ದರು. ದನಗಳ್ಳ ಕಬೀರ್ ಸತ್ತಾಗ ಆತನ ಮನೆಗೆ ಕಾಂಗ್ರೆಸ್ ಶಾಸಕರು ಹೋಗಿ 10 ಲಕ್ಷ ಪರಿಹಾರ ಕೊಟ್ಟರು. ಮಂಡ್ಯದಲ್ಲಿ ಇದ್ರೀಷ್ ಪಾಷ ಎಂಬ ಮತ್ತೊಬ್ಬ ದನಗಳ್ಳ ಹೃದಯಾಘಾತದಿಂದ ಸತ್ತ. ಆತನ ಸಾವಿನ ಹೊಣೆ ಪುನೀತ್ ಕೆರೆಹಳ್ಳಿ ಮೇಲೆ ಹಾಕಿ ಇದ್ರೀಷ್ ಕುಟುಂಬಕ್ಕೆ 25 ಲಕ್ಷ ಪರಿಹಾರ ಕೊಟ್ಟರು. ಪಿಎಫ್‌ಐ, ಎಸ್ಡಿಪಿಐ ಕಾರ್ಯಕರ್ತರ ಕೇಸುಗಳನ್ನು ವಾಪಸ್ ಪಡೆದರಲ್ಲ, ಅವರೇನು ದೇಶಭಕ್ತರಾಗಿದ್ದರಾ ಎಂದು ಕಿಡಿಕಾರಿದರು. ಸಚಿವ ಜಮೀರ್ ಅಹಮದ್ ಅವರು ಪಾಕಿಸ್ತಾನ ವಿರುದ್ಧ ಯುದ್ಧವಾದರೆ ಯುದ್ಧಕ್ಕೆ ಹೋಗುತ್ತೇನೆ ಎಂದು ಹೇಳಿರುವುದನ್ನು ಸಕಾರಾತ್ಮಕವಾಗಿ ತೆಗೆದುಕೊಳ್ಳುತ್ತೇನೆ. ಅವರ ಉತ್ಸಾಹ ಒಪ್ಪುತ್ತೇನೆ. ಆದರೆ ಪಾಕಿಸ್ತಾನದ ಮೇಲೆ ಯುದ್ಧ ಮಾಡಲು ಸೈನಿಕರು ಇದ್ದಾರೆ. ಸಚಿವ ಜಮೀರ್ ಅಹಮದ್ ಹೋರಾಟ ಮಾಡಬೇಕಾಗಿರುವುದು ಪಾಕಿಸ್ತಾನ



ಜಿಂದಾಬಾದ್ ಎಂದು ಕೂಗುವವರನ್ನು, ಡಿ.ಜೆ.ಹಳ್ಳಿಯಲ್ಲಿ ಗಲಭೆ ಮಾಡಿದವರನ್ನು ಮಟ್ಟ ಹಾಕಲು ಜಮೀರ್ ಅಹಮದ್ ಬೇಕು ಎಂದು ವ್ಯಂಗ್ಯವಾಗಿ ಹೇಳಿದರು. ನಾವು ಅಲ್ಲಾ ದೇವರಲ್ಲ ಎಂದು ಹೇಳುವುದಿಲ್ಲ. ನಾವು ಎಲ್ಲ ದೇವರನ್ನು ಪೂಜಿಸುವವರು. ಆದರೆ ನೀವು ಅಲ್ಲಾ ಒಬ್ಬನೇ ದೇವರು ಎಂದು ಬದಲಿಸಿ, ದೇವರೊಬ್ಬ ನಾಮ ಹಲವು ಎಂದು ಹೇಳಿ ನೋಡೋಣ ಎಂದು ಸಿ.ಟಿ. ರವಿ ಜಮೀರ್ ಅಹಮದ್‌ಗೆ ಸವಾಲು ಹಾಕಿದರು.

ಸುಹಾಸ್ ಶೆಟ್ಟಿ ಹತ್ಯೆ ನಂತರ ಕಾಂಗ್ರೆಸ್ ಸರ್ಕಾರ ಓಲೈಕೆ ರಾಜಕಾರಣ ನಡೆಸಿದೆ. ಇದೊಂದು ಕಮ್ಯುನಲ್ ಸರ್ಕಾರ, ಕ್ರಿಮಿನಲ್‌ಗಳಿಗೆ ಬೆಂಬಲಿಸುವ ಸರ್ಕಾರ ಎಂದು ಹರಿಹಾಯ್ದರು. ಬುಧವಾರ ದೇಶಾದ್ಯಂತ ಯುದ್ಧ ಎದುರಿಸಲು ನಡೆಯುವ ಅಣಕು ತಾಲೀಮು ಬಗ್ಗೆ ಪ್ರತಿಕ್ರಿಯಿಸಿದ ಅವರು, ಜನ ಎಚ್ಚರ ವಹಿಸಬೇಕು. ಹೊರಗಿನ ಶತ್ರುಗಳ ಬಗ್ಗೆ ನಮಗೆ ಭಯ ಇಲ್ಲ. ಆದರೆ ಅಪಾಯ ಇರುವುದು ಒಳಗಿನ ದ್ರೋಹಿಗಳ ಬಗ್ಗೆ ಎಂದು ಅವರು ಹೇಳಿದರು.

ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣ

# ರಾಷ್ಟ್ರೀಯ ತನಿಖಾ ದಳ–ಎನ್‌ಐಎ ತನಿಖೆಗೆ ಕೋಟ ಶ್ರೀನಿವಾಸ ಪೂಜಾರಿ ಒತ್ತಾಯ

**ಬೆಂಗಳೂರು, ಮೇ. 6–** ಮಂಗಳೂರಿನಲ್ಲಿ ನಡೆದ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳ– ಎನ್‌ಐಎ ಮೂಲಕ ತನಿಖೆ ನಡೆಸಬೇಕು ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಒತ್ತಾಯಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹತ್ಯೆ ಪ್ರಕರಣದ ಸೂಕ್ಷ್ಮತೆಯನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಮತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಪ್ರಕರಣ ಸೂಕ್ಷ್ಮವಾಗಿರುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ತನಿಖಾ ದಳದಿಂದ ತನಿಖೆ ನಡೆಸಿದರೆ,




ಅಪರಾದಿ ,ಗಳನ್ನು ಕಾನೂನಿನ ಚೌಕಟ್ಟಿಗೆ ತರಲು ಸಾಧ್ಯ ಎಂದು ಹೇಳಿದರು.

ಈ ಘಟನೆಯ ನಂತರ ಗೃಹ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಕಾಪಾಡುವ ಸಲುವಾಗಿ ಜನಪ್ರತಿನಿಧಿಗಳ ಸಭೆ ಕರೆದು ಚರ್ಚೆ ನಡೆಸಬೇಕಾಗಿತ್ತು. ಆದರೆ ಆ ಕಾರ್ಯ ಮಾಡಿಲ್ಲ. ಬದಲಾಗಿ ಅಪರಾಧಿಗಳ ಸಹಾನೂಭೂತಿ ಇರುವವರ ಪರವಾಗಿ ಇರುವುದು ಅತ್ಯಂತ ಖಂಡನಾರ್ಹ. ಈ ಸಂಬಂಧ ಕೇಂದ್ರ ಗೃಹ ಸಚಿವರನ್ನು ಭೇಟಿ ಮಾಡಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ. ರಾಜ್ಯದಲ್ಲಿ ಕೋಮುಗಲಭೆ ಸೃಷ್ಟಿಸಿದವರು, ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದವರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂಪಡೆದಿದೆ.

# ರಾಜ್ಯ–ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಣಕು ತಾಲೀಮಿಗೆ ಕೇಂದ್ರ ಆದೇಶ

**ಬೆಂಗಳೂರು, ಮೇ.6–** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನ ನಡುವಿನ ಉದ್ವಿಗ್ನತೆ ಹೆಚ್ಚಾಗಿದೆ. ಉಭಯ ದೇಶಗಳ ನಡುವೆ ಯುದ್ಧದ ಕಾರ್ಮೋಡ ಆವರಿಸಿರುವ ಈ ಹೊತ್ತಲ್ಲಿ ದೇಶದ ಎಲ್ಲಾ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಣಕು ಪರೀಕ್ಷೆ ನಡೆಸಲು ಕೇಂದ್ರ ಸರ್ಕಾರ ಆದೇಶಿಸಿದೆ. ಆ ಹಿನ್ನೆಲೆ ದೇಶದ 259 ಸ್ಥಳಗಳಲ್ಲಿ ನಾಳೆ ಮಾಕ್ ಡ್ರಿಲ್ ನಡೆಯಲಿದೆ.

ಅದರಂತೆ ಕರ್ನಾಟಕದ ಮೂರು ಜಿಲ್ಲೆಗಳಲ್ಲಿ ಮಾಕ್ ಡ್ರಿಲ್ ನಡೆಯಲಿದೆ. ಈ ಮಾಕ್ ಡ್ರಿಲ್ ಹೇಗೆ ಮತ್ತು ಎಷ್ಟು ಗಂಟೆಗೆ ನಡೆಯಲಿದೆ ಎಂಬುದರ ಕುರಿತು ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳ ವಿಭಾಗದ ಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್ ಅವರು ಮಾಹಿತಿ ನೀಡಿದ್ದಾರೆ. ಬೆಂಗಳೂರು ನಗರ, ರಾಯಚೂರು, ಕಾರವಾರ ಜಿಲ್ಲೆಗಳಲ್ಲಿ ಮಾಕ್ ಡ್ರಿಲ್ ನಡೆಯಲಿದೆ. ಬುಧವಾರ ಮಧ್ಯಾಹ್ನ 4 ಗಂಟೆಯಿಂದ ಮಾಕ್ ಡ್ರಿಲ್ ಶುರುವಾಗಲಿದೆ. ಬೆಂಗಳೂರಿನಲ್ಲಿ ಸುಮಾರು 5 ಸಾವಿರ ಜನ ಹಾಗೂ ಇತರೆ 8 ಜಿಲ್ಲೆಗಳಲ್ಲಿ 1 ಸಾವಿರ ಜನ ಸಿವಿಲ್ ಡಿಫೆನ್ಸ್ ಕುರಿತು ತರಬೇತಿ ಪಡೆದ ಕೊಂಡಿದ್ದಾರೆ. ಆ ಎಲ್ಲರೂ ಸಹ ಬುಧವಾರ ನಡೆಯಲಿರುವ ಯುದ್ಧ ಕವಾಯತ್‌ನಲ್ಲಿ ಭಾಗಿಯಾಗಲಿದ್ದಾರೆ.

ತರಬೇತಿ ಪಡೆದ ಸಿಬ್ಬಂದಿ ತುರ್ತು ಸಂದರ್ಭದಲ್ಲಿ ಹೇಗೆ ಕಾರ್ಯ ನಿರ್ವಹಿಸಬೇಕು. ಯಾವ ಪರಿಕರಣಗಳನ್ನು ಕೊಡಬಹುದು ಎಂಬುದನ್ನು ಚರ್ಚಿಸಿ ಮಾಕ್ ಡ್ರಿಲ್ ಮಾಡಲಾಗುತ್ತದೆ. ಮತ್ತು ಮಾಕ್ ಡ್ರಿಲ್ ಒಂದು ವಾರ ಕಾಲ ನಡೆಯಲಿದೆ ಎಂದು ತಿಳಿಸಿದರು. ಮುಖ್ಯವಾಗಿ ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರ ರಕ್ಷಣೆ ಹಾಗೂ





ಅವರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ ಮಾಡುವುದು. ವೈದ್ಯಕೀಯ ಸಂದರ್ಭಗಳಲ್ಲಿ ತುರ್ತು ಸ್ಪಂದನೆಯ ಕುರಿತು ಸನ್ನದ್ಧವಾಗಿರುವುದು ಮಾಕ್ ಡ್ರಿಲ್‌ನ ಮುಖ್ಯ ಉದ್ದೇಶವಾಗಿದೆ. ಮಾಕ್ ಡ್ರಿಲ್‌ನಲ್ಲಿ ಎನ್ಡಿಆರ್‌ಎಫ್, ಎಸ್‌ಡಿಆರ್‌ಎಫ್, ಸಿವಿಲ್ ಡಿಫೆನ್ಸ್ ಸರ್ವೀಸ್, ಸಿಆರ್‌ಪಿಎಫ್ ಪಡೆ, ಸಿವಿಲ್ ಪೊಲೀಸ್ ಸಿಬ್ಬಂದಿ ಭಾಗಿಯಾಗಲಿದ್ದಾರೆ ಎಂದು ಮಾಹಿತಿ ನೀಡಿದರು. ಮಾಕ್ ಡ್ರಿಲ್ ಜಾರಿಯಲ್ಲಿರುವಾಗ ಒಟ್ಟು ಮೂರು ವಿಧದ ಸೈರನ್‌ಗಳು ಕೇಳಿಸಲಿವೆ. ಮೊದಲ ಸೈರನ್ ದಾಳಿ ನಡೆಯುವ ಸ್ಥಳದ ಕುರಿತು ಜನರಿಗೆ ಅಲರ್ಟ್ ನೀಡಲಿದೆ. ಎರಡನೇ ಸೈರನ್ ದಾಳಿ ಸಂದರ್ಭದಲ್ಲಿ ಆಗಲಿದೆ. ಮೂರನೇ ಸೈರನ್ ಪರಿಸ್ಥಿತಿ ಸಹಜ ಸ್ಥಿತಿಗೆ ಮರಳಿದಾಗ ಆಗಲಿದೆ ಎಂದು ವಿವರಿಸಿದರು.

ಮಾಕ್ ಡ್ರಿಲ್ ಮೂಲಕ ಇಂದಿನ ಪೀಳಿಗೆಯವರಿಗೆ ಯುದ್ಧ ಸನ್ನಿವೇಶಗಳಲ್ಲಿ ಶತ್ರುಗಳಿಂದ ಸ್ವಯಂ ರಕ್ಷಣೆ ಪಡೆಯುವುದರ ಕುರಿತು ತಿಳಿಸಲಾಗುತ್ತದೆ. ದೇಶದ ಸೂಕ್ಷ್ಮ ಪ್ರದೇಶಗಳಲ್ಲಿ ಶತ್ರುಗಳಿಂದ ನಡೆಯ ಬಹುದಾದ ವಾಯುದಾಳಿಯ ಸಾಧ್ಯತೆ, ಮತ್ತು ಅದರ ಕುರಿತು ಸೈರನ್ ಮೊಳಗಿಸುವ ಮೂಲಕ ಮಾಹಿತಿ ನೀಡಲಾಗುತ್ತದೆ. ದಾಳಿ ವೇಳೆ ಸ್ವಯಂ ರಕ್ಷಣೆಯ ತರಬೇತಿ ನೀಡಲಾಗುತ್ತದೆ. ವಾಯು ದಾಳಿ ಯಂತಹ ಸಂದರ್ಭಗಳಲ್ಲಿ ಶತ್ರುಗಳಿಗೆ ನಮ್ಮಲ್ಲಿನ ಜನಸಂಖ್ಯೆಯಿರುವ ಸ್ಥಳಗಳ ಗುರುತು ಸಿಗದಂತೆ ತಡೆಯಲು ನಗರ ಮತ್ತು ಹಳ್ಳಿಗಳಲ್ಲಿ ವಿದ್ಯುತ್ ದೀಪಗಳು ಸಂಪೂರ್ಣ ಬಂದ್ ಆಗಿರಲಿವೆ. ಹಾಗೂ ರಾತ್ರಿ ವಾಹನ ಸಂಚಾರ ಸ್ಥಗಿತವಾಗಿರಲಿದೆ. ಅದರಂತೆ ಮಾಕ್ ಡ್ರಿಲ್ ಸಂದರ್ಭದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಿದ್ಯುತ್ ದೀಪಗಳು ಬಂದ್ ಆಗಲಿವೆ. ಯುದ್ಧ ಸಂದರ್ಭದಲ್ಲಿ ದೇಶದ ಪ್ರಮುಖ ಸ್ಥಾವರಗಳನ್ನು ಶತ್ರುಗಳಿಂದ ಕಾಪಾಡುವುದು ಮುಖ್ಯವಾಗಿರಲಿದೆ.

ಅವುಗಳ ಮೇಲೆ ದಾಳಿ ಆಗದಂತೆ ಮರೆಮಾಚಿಕೊಳ್ಳಬೇಕಾದ ಅಗತ್ಯವಿರುವುದರಿಂದ ಈ ಬಗ್ಗೆಯೂ ಮಾಹಿತಿ ನೀಡಲಾಗುತ್ತದೆ.: ಯುದ್ಧ ಸಂದರ್ಭದಲ್ಲಿ ಸಂಕಷ್ಟಕ್ಕೆ ಸಿಲುಕಿದವರ ರಕ್ಷಣೆಯನ್ನು ಹೇಗೆ ಮಾಡಬೇಕು ಎಂಬುದರ ಕುರಿತು ಅಣಕು ಕಾರ್ಯಾಚರಣೆಯ ಮೂಲಕ ತಿಳಿಸಲಾಗುತ್ತದೆ.

# ಯಾರಿಗೆ ಯಾರೂ ಬೆದರಿಕೆ ಹಾಕಿಲ್ಲ: ಕಾಂಗ್ರೆಸ್ಸಿಗೆ ಜನರೇ ತಕ್ಕ ಪಾಠ ಕಲಿಸುತ್ತಾರೆ– ಯಡಿಯೂರಪ್ಪ ಎಚ್ಚರಿಕೆ

**ಬೀದರ, ಮೇ. 6:** ರಾಜ್ಯದಲ್ಲಿನ ಕೊಲೆ ಸುಲಿಗೆ ನಿರಂತರವಾಗಿನಡೆಯುತ್ತಿವೆ. ರಾಜ್ಯದ ಜನತೆ ಭಯದಲ್ಲಿ ಬದುಕುವಂತೆ ಮಾಡಿದೆ. ಇಲ್ಲಿ ಕಾನೂನು ಸುವ್ಯವಸ್ಥೆ ಇದೆಯೇ? ಎಂದು ಜನರು ಪ್ರಶ್ನಿಸುತ್ತಿದ್ದಾರೆ. ನಿರಂತರ ಹತ್ಯೆಗಳು ನಡೆಯುತ್ತಿವೆ. ಈ ಹತ್ಯೆಗಳನ್ನು ತಡೆಯುವ ಶಕ್ತಿ ಮುಖ್ಯಮಂತ್ರಿ ಹಾಗೂ ಗೃಹ ಸಚಿವರಿಗೆ ಇಲ್ಲ. ಹೀಗಾಗಿ ಸುಹಾಸ್ ಶೆಟ್ಟಿಯ ಬರ್ಭರ ಕೊಲೆಯಾಗಿದೆ. ಇದನ್ನು ನಾನು ಖಂಡಿಸುತ್ತೇನೆ. ಮುಖ್ಯಮಂತ್ರಿಗಳಿಗೆ ಬೆದರಿಕೆ ಸುಳ್ಳು. ಯಾರಿಗೂಯಾರೂ ಬಎದರಿಕೆ ಹಾಕಿಲ್ಲ. ಎಲ್ಲ ನಾಟಕ. ಮುಂದಿನ ದಿನಗಳಲ್ಲಿ ಜನರೇ ಕಾಂಗ್ರೆಸ್ ಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂಗೆ ಬೆದರಿಕೆ ಕರೆಗಳು ಬರುತ್ತದೆ ಎನ್ನುವುದರಲ್ಲಿ ಯಾವುದೇ ಸತ್ಯಾಂಶವಿಲ್ಲಾ. ಕೇವಲ ಪ್ರಚಾರಕ್ಕಾಗಿ ಮತ್ತು ಅನುಕಂಪ ಗಿಟ್ಟಿಸಿಕೊಳ್ಳಲು ಸಿಎಂ ಸಿದ್ದರಾಮಯ್ಯ ಈ ರೀತಿ ಹೇಳಿಕೆ ನೀಡುತ್ತಿದ್ದಾರೆ. ವಾಸ್ತವದಲ್ಲಿ ಸಿದ್ದರಾಮಯ್ಯ ಅವರು ಹಲವು ಹಗರಣಗಳಲ್ಲಿ ಸುಇಲುಕಿ ಒದ್ದಾಡುತ್ತಿದ್ದಾರೆ. ಅಲ್ಲದೇ ರಾಜ್ಯದಲ್ಲಿ ಅವರ ಜನಪ್ರಿಯತೆ ಕುಸಿದಿದೆ. ರಾಜ್ಯದ ಜನತೆ ಇವರು ಕೊಡುವ ಎರಡು ಸಾವಿರದ ಭಿಕ್ಷೆಗಾಗಿ ಓಟು ಹಾಕಿ ಅಧಿಕಾರಕ್ಕೆ ತಂದೆವು. ಈಗ ನೋಡಿದರೆ



ಎಲ್ಲದಕ್ಕೂ ಬಎಲೆ ಹೆಚ್ಚಿಸುವ ಮೂಲಕ ಜನರ ಜೀವ ಹಿಂಡುತ್ತಿದ್ದಾರೆಂದು ಜನತೆ ಬಹಿರಂಗವಾಗಿ ಈ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಇನ್ನೊಂದೆಡೆ ಮುಖ್ಯಮಂತ್ರಿ–ಉಪಮುಖ್ಯಮಂತ್ರಿ ನಡುವೆ ಕುರ್ಚಿಗಾಗಿ ಗುದ್ದಾಟ ಮುಂದುವರೆದಿದೆ. ನಾನು ಕೊಡಲ್ಲ ಎಂದರೆ, ನಾನು ಬಿಡಲ್ಲ ಎಂದು ಜಗ್ಗಾಟ ನಡೆಯುತ್ತಿದ್ದು, ರಾಜ್ಯದಲ್ಲಿ ಆಡಳಿತ ಸಂಪೂರ್ಣ ಕುಸಿದಿದೆ. ಈ ಸರ್ಕಾರ ಬಂದು ಎರಡು ವರ್ಷವಾಯಿತು. ಏನೂ ಅಬಿವೃದ್ಧಿ ಮಾಡಲು ಸಾಧ್ಯವಾಗಿಲ್ಲ. ಇದನ್ನು ಮರೆಮಾಚಲು ಕೇಂದ್ರದ ವಿರುದ್ಧ ಹೋರಾಟದ ನಾಟಕವಾಡುತ್ತಿರುವುದು ರಾಜ್ಯದ ಜನತೆಗೆ ಗೊತ್ತಾಗುವದಿಲ್ಲವೇ? ಇವರ ಬಂಡವಾಳವೆಲ್ಲ ಬಯಲಾಗಿದೆ. ಹೀಗಾಗಿ ಈ ಸರ್ಕಾರ ಬಹಳಷ್ಟು ದಿನ ಉಳಿಯುವುದಿಲ್ಲ. ಈ ಸರ್ಕಾರವನ್ನು ಯಾರೂ ಬೀಳಿಸುವದಿಲ್ಲ. ತಾನಾಗೇ ಬಿದ್ದು ಹೋಗುತ್ತದೆ ಎಂದರು. ಪಾಕಿಸ್ತಾನ ವಿರುದ್ಧ ಭಾರತ ಕೈಕೊಳ್ಳಬೇಕಾದ ಕ್ರಮಗಳ ಕುರಿತು ಮಾತನಾಡಿದ ಅವರು, ಯಾವ ಸಮಯದಲ್ಲಿ ಏನು ಮಾಡಬೇಕೆಂದು ಪ್ರಧಾನಿ ನರೇಂದ್ರ ಮೋದಿಗೆ ಗೊತ್ತಿದೆ. ಮೋದಿ ಸೂಕ್ತ ಕ್ರಮವನ್ನು ತೆಗೆದುಕೊಂಡು ಭಾರತಕ್ಕೆ ಏನೂ ಆಗದಂತೆ ಮತ್ತು ಪಾಕಿಸ್ತಾನ ಎಂದೂ ಮರೆಯದಂಥ ಪೆಟ್ಟುಕೊಡುತ್ತಾರೆನೋಡುತ್ತಾ ಇರಿ ಎಂದರು. ಜಾತಿಗಣತಿ ಆಗಬೇಕೆಂದು ಬಹಳಷ್ಟು ದಿನಗಳಿಂದ ಅಪೇಕ್ಷೆ ಇತ್ತು. ಈಗ ಅದು ಕೇಂದ್ರದಿಂದ ಆಗುತ್ತಿದೆ. ಎಲ್ಲರೂ ಸಹಕಾರ ನೀಡಬೇಕು ಎಂದ ಯಡಿಯೂರಪ್ಪ, ರಾಜ್ಯ ಸರ್ಕಾರ ನಡೆಸಿದ ಜಾತಿ ಗಣತಿ ಮತ್ತು ಇದೀಗ ಕೈಗೊಮಡಿರುವ ಒಳಮೀಸಲಾತಿ ಕುರಿತು, ಇದೆಲ್ಲವೂ ಜನರ ಗಮನ ಬೇರೆಡೆ ತಿರುಗಿಸುವ ಉದ್ದೇಶದಿಂದ ಕೂಡಿದೆಯೇ ಹೊರತು ಪ್ರಾಮಾಣಿಕ ಕಳಕಳಿ ಸರ್ಕಾರಕ್ಕಿಲ್ಲ ಎಂದು ಹೇಳಿದರು.

# ಸಂವಿಧಾನದ ಉಳಿವಿಗಾಗಿ ಬೀದಿಗಿಳಿಯಲಿದೆ ಕಾಂಗ್ರೆಸ್: ಡಾ.ಶರಣಪ್ರಕಾಶ ಪಾಟೀಲ್

**ಕಲಬುರಗಿ, ಮೇ. 6:** ಸಂವಿಧಾನ ಉಳಿವಿಗಾಗಿ ಹಾಗೂ ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರೋದಿಸಿ ಇದೇ ದಿ.7ರಂದು ನಗರದಲ್ಲಿ ವಿಭಾಗ ಮಟ್ಟದ ಪ್ರತಿಭಟನೆ ನಡೆಯಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ತಿಳಿಸಿದರು.



ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮಹಾತ್ಮಾ ಗಾಂಧಿ ಕ್ರೀಡಾಂಗಣದಲ್ಲಿ ಕೇಂದ್ರ ಸರ್ಕಾರದ ಬೆಲೆ ಏರಿಕೆ ಮತ್ತು ಸಂವಿಧಾನ ಉಳಿವಿಗಾಗಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿ, ಜನವಿರೋಧಿ ನೀತಿಯನ್ನು ಖಂಡಿಸಲಾಗವುದು. ಈ ಪ್ರತಿಭಟನೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಇ.ಕೆ. ಶಿವಕುಮಾರ ಮತ್ತು ಸಚಿವ ಶಾಸಕರು ಭಾಗಿಯಾಗಲಿದ್ದಾರೆ ಎಂದರು. ಈ ಪ್ರತಿಭಟನೆಯಲ್ಲಿ 25 ಸಾವಿರಕ್ಕೂ ಅಧಿಕ ಕಾರ್ಯಕರ್ತರು ಭಾಗಿಯಾಗಲಿದ್ದಾರೆ. ಬಿಜೆಪಿಯ ಜನಾಕ್ರೋಶ ಯಾತ್ರೆಗೆ ಇದು ಕೌಂಟರ್ ಅಲ್ಲ ಎಂದ ಅವರು, ರೈತರಿಗೆ ಅನುಕೂಲವಾಗಲಿ ಎಂಬ ನಿಟ್ಟಿನಲ್ಲಿ ಹಾಲಿನ ಬೆಲೆ ಏರಿಕೆ ಬಿಟ್ಟರೆ ನಾವು ಯಾವ ಬೆಲೆಯನ್ನೂ ಏರಿಸಿಲ್ಲ. ಆದರೆ, ಮೋದಿ ಸರ್ಕಾರ ಪ್ರತಿಯೊಂದರ ಬೆಲೆ ಏರಿಕೆ ಮಾಡಿದೆ. ಹೀಗಾಗಿ ನಾವು ಪ್ರತಿಭಟನೆ ಮಾಡುತ್ತಿದ್ದೇವೆ ಎಂದಿದ್ದಾರೆ.

ಪಹಲ್ಗಾಮ್ ದಾಳಿ ಪ್ರಕರಣ ಈ ದೇಶದ ಮೇಲೆ ನಡೆದಿರುವ ಆಕ್ರಮಣ ಅಂತಲೇ ಭಾವಿಸುತ್ತೇವೆ. ಈ ವಿಷಯದಲ್ಲಿ ನಾವು ಕೇಂದ್ರ ಸರ್ಕಾರದ ಜೊತೆಗಿದ್ದೇವೆ. ದೇಶದ ಭದ್ರತಾ ವಿಷಯದಲ್ಲಿ ರಾಜಕಾರಣ ಮಾಡಲ್ಲ. ಆತಂಕವನ್ನು ಉಂಟು ಮಾಡುವ ಶಕ್ತಿಗಳನ್ನು ಕೇಂದ್ರ ಸರ್ಕಾರ ದಮನ ಮಾಡಬೇಕು. ರಾಜ್ಯ ಸರ್ಕಾರ ಸಹಕಾರ ಕೊಡುತ್ತೆ. ಇ ಮೇಲ್ ಬೆದರಿಕೆ ಬಗ್ಗೆ ನಮ್ಮ ಗೃಹ ಇಲಾಖೆ ಪರಿಶೀಲನೆ ಮಾಡುತ್ತಿದೆ. ಅದಕ್ಕೆ ಏನು ಕ್ರಮ ತೆಗೆದುಕೊಳ್ಳಬೇಕೋ ಅದನ್ನು ನಾವು ತೆಗೆದುಕೊಳ್ಳುತ್ತಿದ್ದೇವೆ ಎಂದಿದ್ದಾರೆ.

ಜಾತಿಗಣತಿಗೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಬಹಳ ದಿನಗಳಿಂದ ಒತ್ತಾಯ ಮಾಡುತ್ತಿದ್ದರು. ಸಾಮಾಜಿಕ ನ್ಯಾಯ ಸಿಗಬೇಕು ಅಂದ್ರೆ ಗಣತಿ ಆಗಬೇಕು. ಕೇಂದ್ರದ ಜಾತಿಗಣತಿ ನಿರ್ಧಾರವನ್ನು ಒಪ್ಪಿದ್ದೇವೆ. ಬಿಹಾರ ಎಲೆಕ್ಷನ್ ಬಂದ ಕೂಡಲೇ ಕೇಂದ್ರ ಸರ್ಕಾರಕ್ಕೆ ಈಗ ಜ್ಞಾನೋದಯವಾಗಿದೆ ಎಂದು ತಿಳಿಸಿದರು. ಹಿಂದೂ ಕಾರ್ಯಕರ್ತನ ಹತ್ಯೆ ವಿಚಾರವಾಗಿ ಮಾತನಾಡಿದ ಅವರು, ರಾಜ್ಯದಲ್ಲಿ ಯಾವುದೇ ಹತ್ಯೆ ಆಗಲಿ, ಕಾನೂನು ಕ್ರಮ ಆಗುತ್ತೆ. ಕಾನೂನು ಸುವ್ಯವಸ್ಥೆ ಕಾಪಾಡುವುದು ನಮ್ಮ ಆದ್ಯತೆ. ಯಾರ ಮೇಲೆಯೂ ಇಂತಹ ಘಟನೆಯಾದರೆ ಅದನ್ನು ಸರ್ಕಾರ ಸಹಿಸುವುದಿಲ್ಲ. ಸೂಕ್ತ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ.

# ಪಾಕಿಸ್ತಾನಿಯರ ಗಡಿಪಾರಿಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ

**ಕಲಬುರಗಿ, ಮೇ. 6:** ನಗರದಲ್ಲಿರುವ 9 ಜನ ಪಾಕ್ ಪ್ರಜೆಗಳೂ ಸೇರಿದಂತೆ ಜಿಲ್ಲೆಯಲ್ಲಿ ಅನಧಿಕೃತವಾಗಿ ವಾಸಿಸುತ್ತಿರುವ ಪಾಕಿಸ್ತಾನಿಯರನ್ನು ಕೂಡಲೇ ಗಡಿಪಾರು ಮಾಡಬೇಕು. ಅಕ್ರಮವಾಗಿ ಇಲ್ಲಿ ನೆಲೆಸಿ ಮತೀಯ ಗಲಭೆಗಳನ್ನು ಸೃಷ್ಟಿಸುತ್ತಾರೆ. ಕೂಡಲೇ ಅವನ್ನು ಹೊರಗಟ್ಟಬೇಕೆಂದು ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಜಕಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಮೆರವಣಿಗೆ ಮಾಡಿದರು.



ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ನಡೆದ ಪ್ರತಿಭಟನಾ ಮೆರವಣಿಗೆಯಲ್ಲಿ ಬಿಜೆಪಿ ಗ್ರಾಮಾಂತರ ಘಟಕದ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ, ಶಾಸಕರಾದ ಗ್ರಾಮೀಣ ಕ್ಷೇತ್ರದ ಬಸವರಾಜ್ ಮತ್ತಿಮೂಡ್, ಚಿಂಚೋಳಿಯ ಡಾ. ಅವಿನಾಶ್ ಜಾಧವ್, ರಾಜ್ಯ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ, ಮಾಜಿ ಅಧ್ಯಕ್ಷ ಶಿವರಾಜ್ ಪಾಟೀಲ್ ರುದ್ದೇವಾಡಗಿ, ಮಾಜಿ ಶಾಸಕರಾದ ರಾಜಕುಮಾರ್ ಪಾಟೀಲ್ ತೇಲಕೂರ್, ಅಮರನಾಥ್ ಪಾಟೀಲ್, ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ್ ಬಿರಾದಾರ್, ಉಮೇಶ್ ಪಾಟೀಲ್, ಶಿವಯೋಗಿ ನಾಗನಹಳ್ಳಿ, ಮಹಾದೇವ್ ಬೆಳಮಗಿ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅವಿನಾಶ್ ಕುಲಕರ್ಣಿ, ಯುವಮೋರ್ಚಾ ಜಿಲ್ಲಾ ಉಪಾಧ್ಯಕ್ಷ ಶಿವ ಅಷ್ಠಗಿ, ಮಂಡಲ ಅಧ್ಯಕ್ಷರಾದ ವರದಾ ಶಂಕರ್ ಶೆಟ್ಟಿ, ಗಂಗಪ್ಪ ಗೌಡ, ವಿದ್ಯಾಧರ್ ಮಂಗಳೂರೆ, ಪ್ರಮುಖರಾದ ರಾಘವೇಂದ್ರ ಕುಲಕರ್ಣಿ, ರೇವಣಸಿದ್ದ ಸಂಕಾಲಿ, ಮಲ್ಲಣ್ಣ ಕುಲಕರ್ಣಿ, ಅಣವೀರ್ ಪಾಟೀಲ್, ಡಾ. ಸುಧಾ ಹಾಲಕಾಯಿ, ಯುವ ಮೋರ್ಚಾ ನಗರ ಅಧ್ಯಕ್ಷ ಮಹೇಶ್ ಚವಾಣ್, ಮುಖಂಡರಾದ ರವಿಚಂದ್ರ ಕಾಂತಿಕರ್,

ರಾಣೋಜಿ ದೊಡ್ಮನಿ, ಬಸವರಾಜ್ ಮಧುರಕಿ, ವಿಕಾಸ್ ಕರ್ಣಿಕ್, ಮಾಧ್ಯಮ ಪ್ರಮುಖ ಬಾಬುರಾವ್ ನಾಗರಗುಂಡಗಿ, ಭಾಗೇಶ್ ಹೋತಿನಮಡು, ಸುಂದರ್ ಕುಲಕರ್ಣಿ, ಸತೀಶ್ ಸೊರಡೆ, ಗಿರಿರಾಜ್ ಯಳಮೇಲಿ, ರಾಜುಗೌಡ ನಾಗನಳ್ಳಿ, ಗಿರೀಶಗೌಡ ಇನಾಂದಾರ್, ನಿಜಗುಣ ಯಲಗೋಡ್, ನಾರಾಯಣ ಜಾಗಿರದಾರ್ ಮುಂತಾದವರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ರಾಜ್ಯ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಅವರು ಮಾತನಾಡಿ, ಈಗಾಗಲೇ ಕೇಂದ್ರ ಸರ್ಕಾರವು ಪಹಲ್ಗಾಂವ್‌ನಲ್ಲಿ ಉಗ್ರರು 26 ಜನರನ್ನು ಹತ್ಯೆ ಮಾಡಿದ ಹಿನ್ನೆಲೆಯಲ್ಲಿ ಭಾರತದಲ್ಲಿರುವ ಎಲ್ಲ ಪಾಕಿಸ್ತಾನಿಯರ ವಿಸಾಗಳನ್ನು ತದ್ದುಪಡಿಸಿ ಗಡಿಪಾರಿಗೆ ಗಡುವು ವಿಧಿಸಿ ಆದೇಶ ಹೊರಡಿಸಿತ್ತು. ಹೀಗಾಗಿ ಎಲ್ಲ ರಾಜ್ಯಗಳಲ್ಲಿಯೂ ಸಹ ಕ್ರಮ ಕೈಗೊಳ್ಳಲಾಗುತ್ತಿದೆ. ಆದಾಗ್ಯೂ, ನಗರದಲ್ಲಿರುವ 9 ಜನ ಪಾಕ್ ಪ್ರಜೆಗಳು ದೀರ್ಘಾವಧಿ ವೀಸಾದಲ್ಲಿದ್ದು, ಅವರನ್ನು ಗಡಿಪಾರು ಮಾಡಲಾಗುವುದಿಲ್ಲ ಎಂದು ನಗರ ಪೋಲಿಸ್ ಆಯುಕ್ತರು ಹೇಳಿದ್ದಾರೆ. ಹೀಗಾಗಿ ಪಾಕಿಸ್ತಾನ್ ಪ್ರಜೆಗಳು ನಗರದಲ್ಲಿ ಉಳಿಯವುದು ನಮಗೆ ಆತಂಕಕ್ಕೆ ಒಳಗಾಗುವಂತೆ ಮಾಡಿದೆ. ಆದ್ದರಿಂದ ಕೂಡಲೇ ಕೇಂದ್ರ ಸರ್ಕಾರವು ದೀರ್ಘಾವಧಿ ವೀಸಾದ ಮೇಲೆ ಇರುವ ಪಾಕ್ ಪ್ರಜೆಗಳನ್ನೂ ಸಹ ಗಡಿಪಾರು ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು. ಈಗಾಗಲೇ ರಾಜ್ಯದಲ್ಲಿ ಹಿಂದೂಗಳ ಹತ್ಯೆ ವ್ಯಾಪಕ ಪ್ರಮಾಣದಲ್ಲಿ ಆಗುತ್ತಿವೆ. ಹಾಗಾಗಿ ಪಾಕ್ ಪ್ರಜೆಗಳನ್ನು ಕೂಡಲೇ ಗಡಿಪಾರು ಮಾಡಬೇಕು ಎಂದು ಅವರು ಒತ್ತಾಯಿಸಿದರು. ಬಿಜೆಪಿ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ್ ಬಗಲಿ ಅವರು, ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಗೃಹ ಸಚಿವರಿಗೆ ಮನವಿ ಪತ್ರ ಸಲ್ಲಿಸಿ, ಕಳೆದ ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಹಹಲ್ಗಾಮ್ ಪ್ರದೇಶದಲ್ಲಿ ನಡೆದ ಕ್ರೂರ ಭಯೋತ್ಪಾದಕ ದಾಳಿಯಲ್ಲಿ 26 ಜನ ಅಮಾಯಕ ನಾಗರಿಕರು ಸಾವನ್ನಪ್ಪಿದ್ದು, ಇಡೀ ರಾಷ್ಟ್ರವೇ ಆಘಾತಕ್ಕೆ ಒಳಗಾಗಿದೆ. ದುರಂತ ಘಟನೆಯ ನಂತರ ಕೇಂದ್ರ ಸರ್ಕಾರವು ಪಾಕಿಸ್ತಾನಿ ಪ್ರಜೆಗಳಿಗೆ ನೀಡಲಾದ ವೀಸಾಗಳನ್ನು ರದ್ದುಗೊಳಿಸುವ ಮತ್ತು ದೇಶದಿಂದ ಅವರನ್ನು ಗಡಿಪಾರು ಮಾಡುವ ಮೂಲಕ ಮಹತ್ವದ ಹೆಜ್ಜೆ ಇಟ್ಟಿದೆ ಎಂದರು. ಗೃಹ ಸಚಿವಾಲಯದ ಆದೇಶದ ಹಿನ್ನೆಲೆಯಲ್ಲಿ ಮತ್ತು ವಿದೇಶಿಯರ ಕಾಯ್ದೆ ಅಡಿಯಲ್ಲಿ ನೀಡಲಾದ ಅಧಿಕಾರಿಗಳನ್ನು ಬಳಸಿಕೊಂಡು ಪಾಕಿಸ್ತಾನಿ ನಾಗರಿಕರಿಗೆ ವೀಸಾ ಸೇವೆಗಳನ್ನು ಸ್ಥಗಿತಗೊಳಿಸಲು ನಿರ್ಧರಿಸಲಾಗಿದೆ. (ದೀರ್ಘಾವಧಿಯ ಮತ್ತು ರಾಜತಾಂತ್ರಿಕ ಮತ್ತು ಅಧಿಕೃತ ವೀಸಾಗಳನ್ನು ಹೊರತುಪಡಿಸಿ). ಜಿಲ್ಲೆಯ ವಿವಿಧ ಭಾಗಗಳಲ್ಲಿ ವಾಸಿಸುವ ಎಲ್ಲ ಪಾಕಿಸ್ತಾನಿ ಪ್ರಜೆಗಳು ಮಾನ್ಯ ದಾಖಲೆಗಳಿಲ್ಲದೇ ಅವಧಿ ಮೀರಿದ ವೀಸಾಗಳನ್ನು ಹೊಂದಿದ್ದಾರೆ ಅಥವಾ ಅವರ ವೀಸಾಗಳನ್ನು ಅಮಾನತ್ತುಗೊಳಿಸಬೇಕು ಎಂದು ಒತ್ತಾಯಿಸಿದ ಅವರು, ಇದು ಗಂಭೀರ ರಾಷ್ಟ್ರೀಯ ಭದ್ರತೆಯ ವಿಷಯವಾಗಿದೆ. ಆದ್ದರಿಂದ ಅಂತಹ ವ್ಯಕ್ತಿಗಳನ್ನು ವಿಳಂಬವಿಲ್ಲದೇ ಪಟ್ಟಿ ಮಾಡಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಕಲಬುರಗಿ ಸಂಚಾರಿ ಪೊಲೀಸರಿಗೆ ಹವಾನಿಯಂತ್ರಿತ ಹೆಲ್ಮೆಟ್ ವಿತರಣೆ



**ಕಲಬುರಗಿ, ಮೇ. 6:** ಬಿರು ಬಿಸಿಲಿನಲ್ಲಿ ಕಾರ್ಯನಿರ್ವಹಿಸುವ ಪೊಲೀಸ್ ಸಿಬ್ಬಂದಿಯ ಆರೋಗ್ಯದ ಹಿತ ರಕ್ಷಣೆ ದೃಷ್ಟಿಯಿಂದ ರಾಜ್ಯದಲ್ಲಿ ಪ್ರಥಮ ಬಾರಿಗೆ ನಗರ ಪೊಲೀಸ್ ವತಿಯಿಂದ ಸಂಚಾರಿ ಠಾಣೆಯ ಪೊಲೀಸ್ ಸಿಬ್ಬಂದಿಯವರಿಗೆ ಹವಾ ನಿಯಂತ್ರಿತ (ಎಸಿ) ಹೆಲ್ಮೆಟ್ ವಿತರಿಸಲಾಗುತ್ತಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರು ಹೇಳಿದರು.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಹೆಲ್ಮೆಟ್ ವಿತರಿಸಿ ಮಾತನಾಡಿದ ಅವರು, ಮೊದಲ ಹಂತವಾಗಿ 10 ಹವಾ ನಿಯಂತ್ರಿತ ಹೆಲ್ಮೆಟ್, 10 ಪೊಲ್ಲ್ಯೂಷನ್ ಕಂಟ್ರೋಲ್ ಮಾಸ್ಕ್, 140 ಮಿಂಚುವ ಜಾಕೆಟ್, ರಾತ್ರಿ ಸಮಯದಲ್ಲಿ ಕರ್ತವ್ಯ ನಿರ್ವಹಿಸಲು 150 ಬ್ಯಾಟನ್‌ಗಳನ್ನು ವಿತರಿಸಲಾಗಿದೆ ಎಂದರು. ನಗರದಲ್ಲಿ ತಾಪಮಾನ, ವಾಯು ಮಾಲಿನ್ಯ ಹೆಚ್ಚಾಗುತ್ತಿರುವ ಹಿನ್ನೆಲೆ ಟ್ರಾಫಿಕ್ ಸಿಬ್ಬಂದಿಯವರ ಆರೋಗ್ಯದ ಹಿತದೃಷ್ಟಿಯಿಂದ ಅವರಿಗೆ ಮೊದಲಾದ್ಯತೆಯಾಗಿ ಬಿಸಿಲಿನ ನಿಯಂತ್ರಣ ಪರಿಕರಗಳನ್ನು ಕೊಡಲಾಗುತ್ತಿದೆ. ಒಂದು ವೇಳೆ ಸಿಬ್ಬಂದಿಗಳಿಂದ ಈ ಪ್ರಯತ್ನಕ್ಕೆ ಉತ್ತಮ ಪ್ರತಿಕ್ರಿಯೆ ಬಂದರೆ ಮುಂದಿನ ದಿನಗಳಲ್ಲಿ ಎಲ್ಲರಿಗೂ ವಿಸ್ತರಿಸಲಾಗುತ್ತದೆ ಎಂದ ಅವರು, ಈಗಾಗಲೇ ಟ್ರಾಫಿಕ್ ಪೊಲೀಸರಿಗೆ ಬಿಸಿಲಿನ ವೇಳೆಯಲ್ಲಿ ನೀರು, ಮಜ್ಜಿಗೆ ಕೊಡಲಾಗುತ್ತಿದೆ ಎಂದರು.

ಈ ಮೊದಲು ಖಾಸಗಿಯಾಗಿ ಹವಾ ನಿಯಂತ್ರಿತ ಹೆಲ್ಮೆಟ್‌ಗಳು ಸಿಗುತ್ತಿದ್ದವು. ಆದಾಗ್ಯೂ, ಅವುಗಳ ಚಾರ್ಜ್ ಒಂದು ತಾಸಿನಲ್ಲಿ ಮುಗಿಯುತ್ತಿತ್ತು. ಆದಾಗ್ಯೂ. ಈಗ ಎಸಿ ಹೆಲ್ಮೆಟ್ ಚಾರ್ಜರ್‌ಗೆ ಒಂದು ಬಾರಿ ಚಾರ್ಜ್ ಮಾಡಿದರೆ, ಗರಿಷ್ಠ 8 ಗಂಟೆಗಳ ಬ್ಯಾಟರಿಯ ಸಾಮರ್ಥ್ಯ ಹೊಂದಿದೆ, ಇದು ಬೆಳಿಗ್ಗೆ 11ರಿಂದ ಸಂಜೆ 5 ಗಂಟೆಯ ವರೆಗೆ ಕಾರ್ಯ ನಿರ್ವಹಿಸುತ್ತದೆ ಎಂದು ಅವರು ಹೇಳಿದರು. ಇದೇ ವೇಳೆಯಲ್ಲಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಸಂಚಾರ ಪೊಲೀಸ್ ಠಾಣೆ – 1 ಮತ್ತು ಸಂಚಾರ ಪೊಲೀಸ್ ಠಾಣೆ – 2ರ ಪೊಲೀಸ್ ಅಧಿಕಾರಿಗಳಿಗೆ ಸಾಂಕೇತಿಕವಾಗಿ ಎಸಿ ಹೆಲ್ಮೆಟ್ ಸೇರಿದಂತೆ ಇತರೆ ಕಿಟ್‌ಗಳನ್ನು ವಿತರಿಸಿದರು. ಸುದ್ದಿಗೋಷ್ಠಿಯಲ್ಲಿ ಉಪ ಪೋಲಿಸ್ ಆಯುಕ್ತರಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ನಾಯಕ್ ಮುಂತಾದವರು ಉಪಸ್ಥಿತರಿದ್ದರು.

# ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಿಂದ ನಗರ ಸಂಚಾರ

**ರಾಯಚೂರು, ಮೇ. 6:** ಇಲ್ಲಿನ ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹಾಪಾತ್ರ ಅವರು ನಗರದ ಪರಿವೀಕ್ಷಣೆ ನಡೆಸಿದರು. ಬೆಳಗ್ಗೆ 10 ಗಂಟೆಗೆ ನಗರ ಸಂಚಾರ ಆರಂಭಿಸಿದ ಆಯುಕ್ತರು ಮಧ್ಯಾಹ್ನದ ವರೆಗೂ ನಿರಂತರ ನಗರವನ್ನು ಸುತ್ತಾಡಿದರು. ಬಿರುಬಿಸಿಲು ಲೆಕ್ಕಿಸದೆ ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಸಿಟಿ ಸಂಚಾರ ಆರಂಭಿಸಿದ ಆಯುಕ್ತರು, ಆಯಾ ಕಡೆಗಳಲ್ಲಿನ ಸಮಸ್ಯೆಗಳನ್ನು ಖುದ್ದು ತಾವೇ ಕಂಡುಕೊಂಡರು. ನಗರ ಸಂಚಾರ ವೇಳೆ ಕಂಡು ಬಂದ ನ್ಯೂನತೆಗಳ ಬಗ್ಗೆ ಪರಿಶೀಲಿಸಿದರು.



ಆಯಾ ಕಡೆಗಳಲ್ಲಿ ಕಂಡು ಬಂದ ಸಮಸ್ಯೆಗಳ ಬಗ್ಗೆ ಸ್ಥಳದಲ್ಲಿದ್ದ ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಚರ್ಚಿಸಿ, ನಗರ ಪರಿವೀಕ್ಷಣೆ ವೇಳೆಯಲ್ಲಿ ಕಂಡುಬಂದ ನ್ಯೂನತೆಗಳನ್ನು ಸರಿಪಡಿಸಲು ಸ್ಥಳದಲ್ಲಿ ಹಾಜರಿದ್ದ ಅಧಿಕಾರಿಗಳ ತಂಡಕ್ಕೆ ಗಡುವು ವಿಧಿಸಿದರು. ರಾಯಚೂರ ನಗರ ತನ್ನದೇ ಐತಿಹಾಸಿಕ ವಿಶೇಷತೆಯನ್ನು ಹೊಂದಿದೆ. ಇದನ್ನು ಪ್ರತಿಯೊಬ್ಬರು ಅರಿಯಬೇಕು. ನಗರ ಸೌಂದರ್ಯಕ್ಕೆ ಒತ್ತು ಕೊಡಬೇಕು. ಕೋಟೆಕೊತ್ತಲು, ಗುಡ್ಡದ ಪ್ರದೇಶದಲ್ಲಿರುವ ರಾಯಚೂರ್ ನಗರಕ್ಕೆ ಯಾರೇ ಬರಲಿ ಅವರು ನಗರದ ಬಗ್ಗೆ ಉತ್ತಮವಾದ ಅಭಿಪ್ರಾಯ ಹೊಂದುವ ರೀತಿಯಲ್ಲಿ ನಗರದ ಸೌಂದರ್ಯೀಕರಣಕ್ಕೆ ಒತ್ತು ಕೊಡಬೇಕಾಗಿರುವುದು ನಮ್ಮೆಲ್ಲರ ಆದ್ಯ ಕಾರ್ಯವಾಗಿದೆ ಎಂದು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಆಯುಕ್ತರಾದ ಜುಬಿನ್ ಅವರು ಮನವರಿಕೆ ಮಾಡಿದರು.

ಸಾರ್ವಜನಿಕರಲ್ಲಿ ಮನವಿ: ಸಿಟಿ ಸಂಚಾರ ವೇಳೆ ತಮ್ಮನ್ನು ಭೇಟಿ ಮಾಡಿದ ಸಾರ್ವಜನಿಕರೊಂದಿಗೆ ಆಯುಕ್ತರಾದ ಜುಬಿನ್ ಅವರು ಆಪ್ತವಾಗಿ ಮಾತನಾಡಿದರು. ಎಲ್ಲೆಂದರಲ್ಲಿ ಕಸ ಬೀಸಾಕಬೇಡಿ. ನಿಗದಿಪಡಿಸಿದ ಸ್ಥಳದಲ್ಲಿ ಕಸವನ್ನು ಹಾಕಿ. ನಗರ ಸೌಂದರ್ಯ ಶುಚಿತ್ವವು ಬರೀ ಪಾಲಿಕೆಯ ಕಾರ್ಯವಲ್ಲ; ಸಾರ್ವಜನಿಕರು ಸಹ ಸಹಕರಿಸಬೇಕು. ಎಲ್ಲೆಂದರಲ್ಲಿ ಮಲ ವಿಸರ್ಜನೆ ಮಾಡಬಾರದು. ಶುಚಿತ್ವಕ್ಕೆ ಸಾಕಷ್ಟು ಒತ್ತು ಕೊಡಬೇಕು. ನಗರದ ಸೌಂದರ್ಯೀಕರಣದ ಬಗ್ಗೆ ಏನಾದರು ಸಲಹೆಗಳಿದ್ದಲ್ಲಿ ಸಾರ್ವಜನಿಕರು ತಮ್ಮನ್ನು ಕಂಡು ಮಾತನಾಡಬಹುದು. ಎಲ್ಲರೂ ಸೇರಿ ರಾಯಚೂರ ನಗರದ ಸ್ವಚ್ಛತೆಯ ಬಗ್ಗೆ ಗಮನ ಹರಿಸೋಣ ಎಂದು ಇದೆ ವೇಳೆ ಆಯುಕ್ತ ಜುಬಿನ್ ಅವರು ಮನವಿ ಮಾಡಿದರು.

# ಮೇ 27ರಂದು ಬಳ್ಳಾರಿಯಲ್ಲಿ ಸಾರಿಗೆ ಅದಾಲತ್ ಆಯೋಜನೆ: ಬಿ.ಎಸ್.ಶ್ರೀನಿವಾಸಗಿರಿ

**ಬಳ್ಳಾರಿ ಮೇ 06:** ಬಳ್ಳಾರಿ ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಮೇ 27 ರಂದು ಸಂಜೆ 04 ಗಂಟೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕುಂದುಕೊರತೆಗಳಿರುವ ಸಾರ್ವಜನಿಕರು ಅರ್ಜಿ ಸಲ್ಲಿಸುವ ಮೂಲಕ ಕುಂದುಕೊರತೆಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಸಾರ್ವಜನಿಕರು ಸಾರಿಗೆ ಅದಾಲತ್‌ನ ಉಪಯೋಗ ಪಡೆದುಕೊಳ್ಳುವ ಮೂಲಕ ಬಾಕಿ ಇರುವ ತಮ್ಮ ಅರ್ಜಿಗಳನ್ನು ಪೂರ್ಣಗೊಳಿಸಿಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಬಿ.ಎಸ್.ಶ್ರೀನಿವಾಸಗಿರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ವಾಸವಿ ವಿದ್ಯಾಲಯ ವಿದ್ಯಾರ್ಥಿಗಳ ಸಾಧನೆ

**ಬಳ್ಳಾರಿ ಮೇ 06.** 2024–25ನೇ ಶೈಕ್ಷಣಿಕ ಸಾಲದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು, ಶ್ರೀ ವಾಸವಿ ವಿದ್ಯಾಲಯದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮೂಲಕ ಶಾಲೆಯ ಗೌರವವನ್ನು ಹೆಚ್ಚಿಸಿದ್ದಾರೆ. ಕುಮಾರಿ ಬನಶ್ರೀ 564 ಅಂಕಗಳನ್ನು ಗಳಿಸುವುದರ ಮೂಲಕ ಪ್ರಥಮ ಸ್ಥಾನ ಪಡೆದಿದ್ದಾರೆ. 5 ಡಿಸ್ಟಿಂಕ್ಷನ್, 18 ಫಸ್ಟ್ ಕ್ಲಾಸ್, 7 ಸೆಕೆಂಡ್ ಕ್ಲಾಸ್ ಪಡೆಯುವುದರ ಮೂಲಕ ಶಾಲೆಯ ಶ್ರೇಯಸ್ಸಿಗೆ ಸಾಕ್ಷಿಯಾಗಿದ್ದಾರೆ. ನಮ್ಮ ಶಾಲೆಯ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳು ಈ ವರ್ಷವೂ ಉತ್ತಮ ಫಲಿತಾಂಶ ಗಳಿಸಿರುವುದು ನಮಗೆ ಹೆಮ್ಮೆಯ ವಿಷಯ. ವಿದ್ಯಾರ್ಥಿಗಳ ಶ್ರಮ, ಶಿಕ್ಷಕರ ಮಾರ್ಗದರ್ಶನ ಮತ್ತು ಪಾಲಕರ ಸಹಕಾರವೇ ಈ ಯಶಸ್ಸಿನ ಮೂಲ. ಪ್ರತಿಯೊಬ್ಬ ವಿದ್ಯಾರ್ಥಿಗೂ ಹೃದಯಪೂರ್ವಕ ಅಭಿನಂದನೆಗಳು. ಅವರು ಮುಂದಿನ ವಿದ್ಯಾಭ್ಯಾಸ ಮತ್ತು ಜೀವನದಲ್ಲಿ ಉತ್ತಮ ಸಾಧನೆ ಮಾಡಲಿ ಎಂಬುದು ನಮ್ಮ ಆಶಯ. ನಾವು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ದಿಗೆ ಸದಾ ಬದ್ಧರಾಗಿದ್ದೇವೆ ಎಂದು ಶ್ರೀ ವಾಸವಿ ಎಜುಕೇಶನ್ ಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ವಿಟ್ಟ ಕೃಷ್ಣಕುಮಾರ್ ರವರು ಹರ್ಷ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ಈ ಅಮೋಘ ಸಾಧನೆಯನ್ನು ಶಾಲಾ ಆಡಳಿತ ಮಂಡಳಿ ಹರ್ಷದಿಂದ ಅಭಿನಂದಿಸಿದ್ದು, ಮುಂದಿನ ಹಂತದಲ್ಲಿಯೂ ಈ ರೀತಿ ಶೈಕ್ಷಣಿಕ ಪ್ರಗತಿ ನಿರಂತರವಾಗಲಿ ಎಂಬ ಆಶಯ ವ್ಯಕ್ತಪಡಿಸಲಾಗಿದೆ.ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಕಾರ್ಯದರ್ಶಿಗಳು ತಮ್ಮ ಶುಭಾಶಯಗಳನ್ನು ವ್ಯಕ್ತಪಡಿಸಿ, ಈ ಸಾಧನೆಗೆ ಕಾರಣರಾದ ಎಲ್ಲಾ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ಹಾಗೂ ಪಾಲಕರಿಗೆ ಧನ್ಯವಾದ ತಿಳಿಸಿದ್ದಾರೆ.

# ಕಾರ್ಮಿಕರ ವೇತನ ಹೆಚ್ಚಿಸಲು ಖಾಸಗಿ ಸಂಸ್ಥೆಗಳಿಗೆ ಕರೆ

**ಬೀದರ್, ಮೇ. 6 :** ಕಾರ್ಮಿಕರು ಸರ್ಕಾರದಿಂದ ಸಿಗುವ ಎಲ್ಲ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಕಾರ್ಮಿಕರ ಪಡೆಯ ಗೌರವಾಧ್ಯಕ್ಷ ಶಿವಶರಣಪ್ಪ ಪಾಟೀಲ್ ಅವರು ಕರೆ ನೀಡಿದರು. ನಗರದಲ್ಲಿ ಹಮ್ಮಿಕೊಂಡ ವಿಶ್ವ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಖಾಸಗಿ ಕಂಪೆನಿಗಳಲ್ಲಿ ಕಾರ್ಮಿಕರಿಗೆ ವೇತನ ಹೆಚ್ಚಿಸಬೇಕು, ಪಿಎಫ್, ಇಎಸ್‌ಐ ಕಟ್ಟಬೇಕೆಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸೋಮನಾಥ ಎಂ. ಪಂಚಾಳ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಖಾಸಗಿ ಕಂಪೆನಿಯವರು ಶೇಕಡಾ 60ರಷ್ಟು ಸ್ಥಳೀಯರನ್ನು ಆದ್ಯತೆ ನೀಡಬೇಕೆಂದು ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿದ್ದಂತಹ ಇಎಸ್‌ಐ ಆಸ್ಪತ್ರೆಯಂತೆ ನಮ್ಮ ಜಿಲ್ಲೆಯಲ್ಲಿಯೂ ಕೂಡ ಇಎಸ್‌ಐ. ಆಸ್ಪತ್ರೆ ವ್ಯವಸ್ಥೆ ಮಾಡಬೇಕೆಂದು




ಸರ್ಕಾರಕ್ಕೆ ಮನವಿ ಮಾಡಿದರು. ನಗರಸಭೆ ಅಧ್ಯಕ್ಷ ಎಂ.ಡಿ. ಗೌಸ್ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿ, ಕಾರ್ಮಿಕರಿಗೆ ಕನಿಷ್ಠ ವೇತನ ನೀಡಬೇಕು. ಕಾರ್ಮಿಕರ ಒಂದು ದೊಡ್ಡ ಶಕ್ತಿ ಇದೆ, ಕಾರ್ಮಿಕರ ದಿನಾಚರಣೆ ಮಾಡುವ ಸಮಯದಲ್ಲಿ ಕಾರ್ಮಿಕ ಅಧಿಕಾರಿಗಳು ಉಪಸ್ಥಿತರಿರಬೇಕೆಂದು ತಿಳಿಸಿದರು.

ಇನ್ನೋರ್ವ ಮುಖ್ಯ ಅತಿಥಿಗಳಾಗಿದ್ದ ಜೆಡಿಎಸ್ ಎಸ್‌ಸಿ ವಿಭಾಗದ ಜಿಲ್ಲಾಧ್ಯಕ್ಷ ದೇವಿಂದ್ರಪ್ಪ ಸೋನಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಖಾಸಗಿ ಕಂಪೆನಿಗಳಲ್ಲಿ ಜಿಲ್ಲೆಯ ಜನರಿಗೆ ಹೆಚ್ಚಿನ ಸಂಖ್ಯೆಯಲ್ಲಿ ತೆಗೆದುಕೊಳ್ಳುತ್ತಿದ್ದೇವೆ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಜಿಲ್ಲೆಯವರನ್ನೇ ಕಂಪೆನಿಗಳಲ್ಲಿ ಕೆಲಸ ನೀಡುವುದಾಗಿ ಹೇಳಿದರು.


ಮತ್ತೋರ್ವ ಮುಖ್ಯ ಅತಿಥಿ ಜೆ.ಕೆ. ದೇವೇಂದ್ರಪ್ಪಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಖಾಸಗಿ ಕಂಪೆನಿಗಳಲ್ಲಿ ಸ್ಥಳೀಯವರನ್ನೇ ತೆಗೆದುಕೊಳ್ಳಲಾಗುವುದೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿಜಯಕುಮಾರ್ ಪಾಂಚಾಳ್, ರಾಘವೇಂದ್ರ, ಸಲೋಮಿ ಡಾಂಗೆ, ವಿದ್ಯಾಸಾಗರ್ ಬಿರಾದಾರ್ ಜಾಂತಿ, ಸಂತೋಷ ಪಾಟೀಲ್ ಚಿಟ್ಟಾ, ಧನರಾಜ್ ಟೈಗರ್ ಹಳ್ಳಿಖೇಡ, ಸುಲೋಚನಾ ಪಂಚಾಳ್ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಕವಿತಾ ಪಂಚಾಳ್ ಮುಂತಾದವರು ಉಪಸ್ಥಿತರಿದ್ದರು.

## ನೂರಕ್ಕೆ ನೂರರಷ್ಟು ದೇಶಕ್ಕಾಗಿ ಬಲಿಯಾಗಲು ನಾನು ಸಿದ್ಧ: ಸಚಿವ ಜಮೀರ್ ಅಹಮದ್



**ಕಲಬುರಗಿ, ಮೇ. 6:** ನೂರಕ್ಕೆ ನೂರರಷ್ಟು ದೇಶಕ್ಕೋಸ್ಕರ ಬಲಿಯಾಗಲು ಸಿದ್ಧನಿದ್ದೇನೆ, ಭಾರತ ಯುದ್ದ ಮಾಡುವುದಿದ್ದರೆ ನನಗೆ ಅವಕಾಶ ಕೊಡಲಿ, ನಾನು ಆತ್ಮಾಹುತಿ ಬಾಂಬ್ ಕಟ್ಟಿಕೊಂಡು ಹೋಗುತ್ತೇನೆ ಎಂದು ಸಚಿವ ಜಮೀರ ಅಹಮದ್ ಪುನರುಚ್ಚರಿಸಿದರು. ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲು ಆಗಮಿಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ನನಗೆ ದೇಶ ಮುಖ್ಯ. ನೂರಕ್ಕೆ ನೂರರಷ್ಟು ಹೋಗಲು ಸಿದ್ದನಿದ್ದೇನೆ. ದೇಶಕ್ಕಾಗಿ ಬಲಿಯಾಗಲೂ ನಾನು ಸಿದ್ಧ. ಯುದ್ಧದ ವಿಚಾರದಲ್ಲಿ ಕೇಂದ್ರ ಸರಕಾರ ಏನು ತೀರ್ಮಾನ ಕೈಗೊಳ್ಳುತ್ತದೆಯೋ ತಗೊಳ್ಳಲಿ. ಕಾಂಗ್ರೆಸ್ ಪಕ್ಷದ ನಾಯಕರಾದ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಸರಕಾರಕ್ಕೆ ಬೆಂಬಲ ಘೋಷಿಸಿದ್ದಾರೆ. ನಿಮ್ಮ ಜೊತೆ ನಾವಿದ್ದೇವೆ. ನೀವು ಏನಾದರೂ ತೀರ್ಮಾನ ಕೈಗೊಳ್ಳಿ ಎಂಬುದಾಗಿ ಹೇಳಲಾಗಿದೆ ಎಂದು ಹೇಳಿದರು.ವಕ್ಫ್ ವಿಚಾರದಲ್ಲಿ ಕೇಂದ್ರ ಸರಕಾರದ ಕಾಯ್ದೆಗೆ ವಿರೋಧಿಸಿ ನಮ್ಮ ಕಾಂಗ್ರೆಸ್ ಪಕ್ಷ ನಿರ್ಣಯ ಕೈಗೊಂಡಿದೆ. ಪ್ರಮುಖವಾಗಿ ನ್ಯಾಯಾಲಯವು ತಡೆಯಾಜ್ಞೆ ನೀಡಿದೆ. ನಮಗೆ ಸುಪ್ರೀಂ ಕೋರ್ಟನಲ್ಲಿ ನ್ಯಾಯ ಸಿಗುತ್ತದೆ ಎನ್ನುವ ವಿಶ್ವಾಸ ಇದೆ ಎಂದು ಸಚಿವ ಜಮೀರ್ ಅಹಮದ್ ಇದೇ ಸಂದರ್ಭದಲ್ಲಿ ಹೇಳಿದರು.

## ಬಳ್ಳಾರಿಯಲ್ಲಿ ಹಲವಾರು ಸಮಸ್ಯೆಗಳ ತಾಂಡವ ಪರಿಷ್ಕರಿಸಲು ಕಾಂಗ್ರೆಸ್ ವಿಫಲ:ಆಕ್ರೋಶ ವ್ಯಕ್ತಪಡಿಸಿದ ಮೇಕಲ ಈಶ್ವರರೆಡ್ಡಿ



**ಬಳ್ಳಾರಿ ಮೇ 06.** ಬಳ್ಳಾರಿ ಜಿಲ್ಲೆಯಲ್ಲಿ ನಗರ ಶಾಸಕರು , ಗ್ರಾಮಾಂತರ ಶಾಸಕರು , ಲೋಕಸಭಾ ಸದಸ್ಯರು , ರಾಜ್ಯಸಭಾ ಸದಸ್ಯರು, ಮಹಾನಗರ ಪಾಲಿಕೆಯಲ್ಲಿ ಸುಮಾರು 26 ಮಂದಿ ಕಾಂಗ್ರೆಸ್ ಸದಸ್ಯರು ಇದ್ದರೂ ಕೂಡ ಹಲವಾರು ಸಮಸ್ಯೆಗಳನ್ನು ಪರಿ?ಕ್ಕರ ಮಾಡಲು ವಿಫಲ ಮತ್ತು ವಿಳಂಬವಾಗಿದೆ ಎಂದು ಮೇಕಲ ಈಶ್ವರ ರೆಡ್ಡಿ ಸಾಮಾಜಿಕ ಹೋರಾಟಗಾರ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ. ಇವರೆಲ್ಲ ಪಕ್ಷದ ಆದೇಶದಂತೆ ಜಿಲ್ಲೆಯಲ್ಲಿ ಮತ್ತು ನಗರದಲ್ಲಿ ಹಲವಾರು ಹೋರಾಟಗಳನ್ನು ಒಗ್ಗಟ್ಟಾಗಿ ಪಾಲ್ಗೊಂಡಿದ್ದಾರೆ, ಇದರ ಪೈಪೋಟಿ ಆಗಿ ಬಿಜೆಪಿ ಕೂಡ ಅವರ ಬಲವನ್ನು ತೋರಿಸಲು ಪಕ್ಷದ ಆದೇಶದಂತೆ ಅವರು ಬಲ ಪ್ರದರ್ಶನ ಮಾಡುತಿದ್ದಾರೆ, ಕೇವಲ ಅಧಿಕಾರಕ್ಕಾಗಿ ಮಾಡುತಿದ್ದಾರೆ ಹೊರತು ಅಭಿವೃದ್ಧಿಗಲ್ಲ ಎಂದು ದೂರಿದ್ದಾರೆ. ಬಳ್ಳಾರಿ ನಗರದಲ್ಲಿರುವ

**ಸಮಸ್ಯೆಗಳು:**

**1)** ಬಳ್ಳಾರಿ ನಗರದಲ್ಲಿ ಇಂದಿರಾಗಾಂಧಿ ವೃತ್ತದಿಂದ ಗಡಿಗೆ ಚೆನ್ನಪ್ಪ ವೃತ್ತದ ವರಿಗೆ ಬೀದಿ ಕಂಬಗಳು , ಬೀದಿ ದೀಪಗಳಿಲ್ಲ . ಸುಮಾರು ಎರಡು ವರ್ಷ ಕಾಮಗಾರಿಗೆ ಮಾಡಿ ಸುಂದರವಾದ ರಸ್ತೆಯನ್ನು ಹಾಕಿದ್ದಾರೆ , ಆದರೆ ಆ ರಸ್ತೆಯಲ್ಲಿ ಬೆಳಕು ಇಲ್ಲ ರಾತ್ರಿ ಸಮಯದಲ್ಲಿ ಅನೇಕ ಅಪಘಾತಗಳು ಆಗುತ್ತಿದೆ ಎರಡು ಬದಿಗಳಲ್ಲಿ ಎರಡು ಪೊಲೀಸ್ ಠಾಣೆ ಇವೆ ಗಾಂಧಿನಗರ ಮತ್ತು ಬ್ರೂಸ್ಪೇಟ್ ಪೊಲೀಸ್ ಠಾಣೆ , ಪ್ರತಿನಿತ್ಯ ಅನೇಕ ಜನರು ಆ ಪೊಲೀಸ್ ಠಾಣೆಯ ಸಿಬ್ಬಂದಿ ವರ್ಗದವರು ಮತ್ತು ಮುಖ್ಯಸ್ಥರು ಅಡ್ಡಾಡುವಂತ ರಸ್ತೆ ಅ?ೇ ಅಲ್ಲದೆ ಮಾನ್ಯ ಜಿಲ್ಲಾಧಿಕಾರಿಗಳು ಅದೇ ರಸ್ತೆಯಲ್ಲಿ ಕಚೇರಿಗೆ ಅಡ್ಡಾಡಬೇಕಾಗುತ್ತದೆ ಆದರೆ ಪ್ರಶ್ನೆ ಮಾಡಬೇಕಾದ ಅಧಿಕಾರಗಳೆಲ್ಲ ಏಕೆ ಪ್ರಶ್ನೆ ಮಾಡುತ್ತಿಲ್ಲ.

**2)** ಬಿಜೆಪಿ ಸರ್ಕಾರ ಆಡಳಿತ ದಲ್ಲಿ ಗಡಿಗೆ ಚನ್ನಪ್ಪ ವೃತ್ತದಲ್ಲಿ ಪ್ರಾರಂಭವಾದ ಸ್ತೂಪ ಇದುವರೆಗೂ ಏಕೆ ಪ್ರಾರಂಭವಾಗಿಲ್ಲ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಸುಮಾರು ಎರಡು ವರ್ಷ ಆಯ್ತು ಇನ್ನ ಪ್ರಾರಂಭವಾಗಿಲ್ಲ ಮತ್ತೊಂದು ಸರ್ಕಾರ ಆಡಳಿತಕ್ಕೆ ಬರಬೇಕೆನೋ.

**3)** ಗ್ರಾಹಂ ರಸ್ತೆಯಲ್ಲಿ ಸುಮಾರು 1800 ಚದರ ಅಡಿಯಷ್ಟು ಜಾಗದಲ್ಲಿ ತರಕಾರಿ ಮತ್ತು ಮಾಂಸದ ಮಾರ್ಕೆಟ್ ಆ ಸ್ಥಳದಲ್ಲಿತ್ತು , ಗ್ರಾಹಂ ರಸ್ತೆಯಲ್ಲಿ ಕಟ್ಟಡವನ್ನು ಚಿಕ್ಕ ಮಾರ್ಕೆಟ್ ಅಂತ ಕರೆಯುತಿದ್ದರು , ಆ ಕಟ್ಟಡ ನೆಲ ಸಮಾನ ಮಾಡಿ ಸುಮಾರು ಎರಡು ವರ್ಷ ಆಯ್ತು ಮಹಾನಗರ ಪಾಲಿಕೆ ಅಧಿಕಾರಿಗಳು ಆ ಸ್ಥಳದಲ್ಲಿ ಇನ್ನೂ ಕಟ್ಟಡ ಪ್ರಾರಂಭ ಮಾಡಿಲ್ಲ ಆ ಸ್ಥಳ ಕಾರು ಪಾರ್ಕಿಂಗ್ ಆಗಿದೆ , ವ್ಯಾಪಾರಸ್ತರೆಲ್ಲ ಬೀದಿ ಪಾಲಾಗಿದ್ದಾರೆ ಕಟ್ಟಡ ನಿರ್ಮಾಣ ಮಾಡಲು ಎಷ್ಟು ವರ್ಷ ಬೇಕಾಗುತ್ತೆ ಅಧಿಕಾರಿಗಳೇ ಮತ್ತು ಆಡಳಿತ ನಾಯಕರೇ.

**4)** ಬಳ್ಳಾರಿ ನಗರದಲ್ಲಿ ಎಂಟು ರಿಂದ ಹತ್ತು ದಿನಕೊಮ್ಮೆ ನೀರು ಬಿಡುಗಡೆ ಆಗುತ್ತದೆ , ಇನ್ನು ಸ್ವಲ್ಪ ದಿನ ಹೋದರೆ 12 ದಿನಕ್ಕೊಮ್ಮೆ ನೀರು ಬಿಡುಗಡೇ ಆಗಬಹುದೇನೋ ಎರಡುವರೆ ಲಕ್ಷ ಜನ ಸಂಖ್ಯೆ ಇದ್ದಾಗ ಮಾನ್ಯ ಭಾಸ್ಕರ್ ನಾಯ್ಡು ಬಳ್ಳಾರಿಗೆ ಶಾಸಕರಾಗಿದ್ದಾಗ ಆಗ ಸುಮಾರು 497 ಎಕರೆಗಳಲ್ಲಿ ಕೆರೆ ನಿರ್ಮಾಣ ಮಾಡಿದ್ದಾರೆ , ಆದರೆ ಅಂದಿನಿಂದ ಇದುವರೆಗೆ ಶಾಸಕರು ಯಾರು ಕೂಡ ನೀರಿಗಾಗಿ ಮತ್ತೊಂದು ಕೆರೆ ನಿರ್ಮಾಣ ಮಾಡಿಲ್ಲ ಈಗ ಜನಸಂಖ್ಯೆ ಸುಮಾರು 10 ಲಕ್ಷ ಆಗಿದೆ ಈ ಸಮಸ್ಯೆ ಪರ್ರಿಕಾರ ಆಗಬೇಕಾದರೆ ಕೊಳಗಲ್ಲು ಗ್ರಾಮದಲ್ಲಿರುವ 397 ಎಕರೆ ಗಳ ಅಷ್ಟು ಸರ್ಕಾರ ಕೆರೆಯನ್ನು ಬಳಸಬಹುದಲ್ಲವೇ ಶಾಸಕರೆ ಮತ್ತು ಅಧಿಕಾರಿಗಳೇ ಆಗ ನೀರಿನ ತೊಂದರೆ ಇರುವುದಿಲ್ಲ , ನಗರವಾಸಿಗಳು ಮೂರು ದಿನಕ್ಕೊಮ್ಮೆ ನೀರು ಬೇಸಿಗೆಯಲ್ಲಿ ಕೂಡ ಬಳಸಬಹುದು , ಶಾಶ್ವತವಾಗಿ ನೀರಿನ ಸಮಸ್ಯೆ ಪರಿ?ಕ್ಕರ ಮಾಡಿ ಮತ್ತೊಂದು ಕೆರೆಯನ್ನು ನಿರ್ಮಿಸುವಂತ ಶಾಸಕರು ಯಾರಿದ್ದಾರೆ.

**5)** ನಗರದಲ್ಲಿ ರಾಜ್ ಕಾಲುವೆಗಳು ವ್ಯರ್ಥ ಪದಾರ್ಥಗಳಿಂದ ತುಂಬಿಕೊಂಡು ದುರ್ವಾಸನೆ ಉಂಟಾಗುತ್ತಿದೆ ಮಹಾನರ ಪಾಲಿಕೆ ಅಧಿಕಾರಿಗಳೇ ಆಡಳಿತ ನಾಯಕರೇ ಒಮ್ಮೆ ವೀಕ್ಷಿಸಿ ಆ ರಾಜ್ ಕಾಲುವೆ? ಕಾಲುವೆ ಗಳನ್ನು ವರ್ಷಕ್ಕೆ ಒಮ್ಮೆ ಆದರೂ ಸ್ವಚ್ಛ ಮಾಡಿಸಿ , ಅಷ್ಟೇ ಅಲ್ಲದೆ ಅ ಕಾಲುವೆ ಪಕ್ಕದಲ್ಲಿರುವ ನಿವಾಸಿಗಳು ಮಲಮೂತ್ರ ವಿಸರ್ಜನೆಯಲ್ಲ ಆ ಕಾಲವೇಗೆ ಸಂಪರ್ಕವನ್ನು ನೀಡಿದ್ದಾರೆ ಇದರಿಂದ ಸೊಳ್ಳೆಗಳ ಕಾಟ ಜಾಸ್ತಿ ಆಗುತ್ತದೆ , ಅಧಿಕಾರಿಗಳೇ ಅವರಿಗೆ ಅವಗಾಹನ ನೀಡಿ ಸಿಮೆಂಟ್‌ನಿಂದ ಆ ಸಂಪರ್ಕವನ್ನು ಮುಚ್ಚಿಸಿ.

**6)** ಸುಮಾರು ಒಂದು ವರ್ಷ ಆಯಿತು ಕಾಮಗಾರಿ ಪ್ರಾರಂಭ ಮಾಡಿ ಕೆಇಬಿ ವೃತ್ತದಿಂದ ಗ್ರಾಮೀಣ ಪ್ರಧಾನ ಕಚೇರಿ ಅವರಿಗೆ ಸುಮಾರು 350 ಮೀಟರ್, ಇನ್ನೂ ಈ ಕೆಲಸ ಮುಗಿಯ ಬೇಕಾದರೆ ಒಂದು ವರ್ಷ ಮೇಲ್ಪಟ್ಟಾಗುತ್ತದೆ ಇಷ್ಟು ವಿಳಂಬ ಯಾಕ ದಿನ ನಿತ್ಯ ಧುಮ್ಮು ಧೂಳಿಯಿಂದ ಕೊರಗುತಿದ್ದಾರೆ ಅಧಿಕಾರಿಗಳೇ ಮತ್ತು ಶಾಸಕರೇ ಆರು ತಿಂಗಳಲ್ಲಿ ಮುಗಿಯಬೇಕಾದ ಕೆಲಸ ಇಷ್ಟು ವಿಳಂಬವೇಕೆ.

**7)** ವಡ್ಡರಬಂಡ ಬಾಲಾಜಿ ರಾವ್ ರಸ್ತೆಯಲ್ಲಿ ಕೊನೆಯ ಭಾಗದಲ್ಲಿ ಸುಮಾರು ಒಂದು ವರ್ಷ ಮೇಲ್ಪಟ್ಟಾಯ್ತು ದೊಡ್ಡ ಗುಂಡು ಬಿದ್ದಿದೆ ಆ ಗುಂಡನ್ನು ಮುಚ್ಚಲು ಹಾಗೂ ಹೊಸದಾಗಿ ಸೇತುವೆ ನಿರ್ಮಾಣ ಮಾಡಲು ಎಷ್ಟು ದಿನ ಬೇಕು ಅಥವಾ ಎಷ್ಟು ವರ್ಷಗಳು ಬೇಕು ಇನ್ನು ಅನೇಕ ಸಮಸ್ಯೆಗಳಿವೆ ಆ ಸಮಸ್ಯೆಗಳೆಲ್ಲಾ ಪರಿಷ್ಕಾರ ಆಗಬೇಕಾದರೆ ಮತ್ತೊಂದು ಸರ್ಕಾರ ಬರಬೇಕೆನೋ ಇಷ್ಟೆಲ್ಲ ಸಮಸ್ಯೆಗಳು ಇದ್ದಲ್ಲಿ ಬಿಜೆಪಿ ಪಕ್ಷ ನ್ಯಾಯ ಬದ್ಧವಾಗಿ ಹೋರಾಟ ಮತ್ತು ಮುಷ್ಕರ ಮಾಡಲು ಏಕೆ ಮೌನ? ಆಡಳಿತ ಪಕ್ಷದ ವೈಫಲ್ಯಗಳನ್ನು ಎತ್ತಿಡಲು ಏಕೆ ಮೌನ ಅದಕ್ಕೆ ಅನ್ನೋದು ಒಂದು ನಾಣ್ಯಕ್ಕೆ ಎರಡು ಮುಖಗಳು ಇದ್ದಾಗೆ ಎಂದು ಮೇಕಲ ಈಶ್ವರ ರೆಡ್ಡಿ ಸಾಮಾಜಿಕ ಹೋರಾಟಗಾರ ತನ್ನ ನೋವನ್ನು ಹಂಚಿಕೊಂಡಿದ್ದಾರೆ.

## ವರ್ಲ್ಡ್‌ಜುರಿಸ್ಟ್ ಅಸೋಸಿಯೇಷನ್ ಗೌರವಿಸಿದ ಮೊದಲ ಭಾರತೀಯ ವಕೀಲರು-ಭುವನ್‌ರಿಭು



**ಬಳ್ಳಾರಿ ಮೇ 06.** ಮಕ್ಕಳ ಹಕ್ಕುಗಳ ಪರಿವಾರದವರಾದ ಭುವನ್‌ರಿಭು ಅವರು ಡೊಮಿನಿಕನ್ ರಿಪಬ್ಲಿಕ್ನಲ್ಲಿ ನಡೆದ ವಿಶ್ವ ಕಾನೂನು ಸಮ್ಮೇಳನದಲ್ಲಿ ವರ್ಲ್ಡ್‌ಜುರಿಸ್ಟ್ ಅಸೋಸಿಯೇಷನ್‌ನಿಂದ ಮೆಡಲ್‌ಆಫ್‌ಆನರ್ ಪ್ರಶಸ್ತಿ ಪಡೆದ ಮೊದಲ ಭಾರತೀಯ ವಕೀಲರಾಗಿದ್ದಾರೆ. ಇವರುಬಳ್ಳಾರಿಯಲ್ಲಿ ರೀಚ್ ಸಂಸ್ಥೆ ಮೂಲಕ ಜೆಆರ್‌ಸಿ ಜಾಲತಂತ್ರದ ಸಹಭಾಗಿಯಾಗಿ ಬಲವಾದ ನಂಟು ಹೊಂದಿದ್ದಾರೆ.

ಇವರು Just Rights for Children (JRC) ಜಾಲತಂತ್ರ ಮತ್ತುರೀಚ್ ಸಂಸ್ಥೆ ಸಹಯೋಗದಿಂದ ಬಳ್ಳಾರಿ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಮುಂಚೂಣಿಯಲ್ಲಿದ್ದಾರೆ. ಭುವನ್‌ರಿಭು ಅವರು ಬಳ್ಳಾರಿಯಲ್ಲಿ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಕಾರ್ಯಗಳಲ್ಲಿ ನಿಕಟವಾಗಿ ತೊಡಗಿಸಿಕೊಂಡಿದ್ದಾರೆ, ಇಲ್ಲಿ ಎಖಅಸ್ಥಳೀಯ ಮಟ್ಟದಲ್ಲಿ ಬಾಲ್ಯವಿವಾಹ ಮತ್ತು ಮಕ್ಕಳ ಮಾರಾಟತಡೆಯಲು ನೇತೃತ್ವ ನೀಡುತ್ತಿದ್ದಾರೆ.

Just Rights for Children (JRC)ಜಾಲತಂತ್ರವು ಭಾರತದಲ್ಲಿ 416ಕ್ಕೂ ಹೆಚ್ಚು ಜಿಲ್ಲೆಗಳಲ್ಲಿರುವ ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಮಕ್ಕಳ ರಕ್ಷಣೆಯ ವಿಶ್ವದಅತಿದೊಡ್ಡ ಕಾನೂನು ಅಭಿಯಾನ ಜಾಲವಾಗಿದೆ. ರೀಚ್ ಸಂಸ್ಥೆ, ಎಖಅಜಾಲದ ಸ್ಥಳೀಯ ಸಹಭಾಗಿಯಾಗಿ, ಭುವನ್‌ರಿಭು ಅವರ ಕಾನೂನು ಮತ್ತು ತಂತ್ರಾತ್ಮಕ ಮಾರ್ಗದರ್ಶನದಲ್ಲಿ 2030ರ ಒಳಗೆ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತವಾಗಿ ಮಾಡಲು ಕಾರ್ಯನಿರ್ವಹಿಸುತ್ತಿದೆ. ಅವರ ಕಾನೂನು ಹಸ್ತಕ್ಷೇಪಗಳು ಕರ್ನಾಟಕ ರಾಜ್ಯದ ಮಕ್ಕಳ ಹಕ್ಕುಗಳ ನೀತಿಗಳನ್ನು ರೂಪಿಸುವಲ್ಲಿ ಪರಿಣಾಮ ಬೀರುವಂತೆ ಮಾಡಿವೆ.ಈ ಜಾಗತಿಕ ಗೌರವ ಬಳ್ಳಾರಿ ಜಿಲ್ಲೆಯಲ್ಲಿ ನಡೆಯುತ್ತಿರುವ ಮಕ್ಕಳ ರಕ್ಷಣಾ ಕಾರ್ಯಕ್ಕೆ ಉತ್ತೇಜನ ನೀಡುವಂತಹದ್ದು ಹಾಗೂ 2030ರ ಒಳಗೆ ಬಾಲ್ಯವಿವಾಹ ಮುಕ್ತ ಜಿಲ್ಲೆಯಾಗಿ ಬಳ್ಳಾರಿ ರೂಪಿಸುವತ್ತ ಕರೆ ನೀಡುವಂತದ್ದು. ವಿಶ್ವಜುರಿಸ್ಟ್ ಅಸೋಸಿಯೇಷನ್ 1963ರಲ್ಲಿ ಸ್ಥಾಪನೆಯಾಗಿ, ವಿಶ್ವದ ಅತಿ ಪುರಾತನ ನ್ಯಾಯವಾದಿಗಳ ಸಂಘವಾಗಿದೆ. ಈ ಸಂಘವು ಸರ್ ವಿನ್‌ಸ್ಟನ್‌ಚರ್ಚಿಲ್, ನೆಲ್ಸನ್ ಮಂಡೇಲಾ, ರೂತ್ ಬಡರ್‌ಗಿನ್‌ಸ್ಬರ್ಗ್, ಸ್ಪೇನ್ನಕಿಂಗ್ ಫೆಲಿಪ್, ರೆನೆ ಕಾಸಿನ್ ಮತ್ತು ಕೆರಿಕೆನಡಿ ಮುಂತಾದ ಪ್ರಮುಖ ವ್ಯಕ್ತಿಗಳನ್ನು ಗೌರವಿಸಿದೆ.

"ಇದು ಭುವನ್‌ರಿಭುಜಿಗೆ ಮಾತ್ರವಲ್ಲ, ನಮ್ಮೆಲ್ಲರಿಗೂ ಹೆಮ್ಮೆಯ ಕ್ಷಣವಾಗಿದೆ. ಈ ಜಾಗತಿಕ ಗೌರವದಿಂದ ನಮ್ಮ ಸಂಕಲ್ಪ ಮತ್ತಷ್ಟು ಬಲಗೊಂಡಿದೆ. 2030ರ ಒಳಗೆ ಬಾಲ್ಯವಿವಾಹ ಮುಕ್ತಜಿಲ್ಲೆ ರೂಪಿಸುವ ನಿಟ್ಟಿನಲ್ಲಿ ನಾವು ಬದ್ಧರಾಗಿದ್ದೇವೆ."ಎಂದು ಈ ಗೌರವದ ಬಗ್ಗೆ ರೀಚ್ ಸಂಸ್ಥೆಯ ಸಂಯೋಜಕರು, ವಿನೋದಕುಮಾರಹೇಳಿದರು.ಈ ಕಾರ್ಯಕ್ರಮದಲ್ಲಿ 70ಕ್ಕೂ ಹೆಚ್ಚು ದೇಶಗಳಿಂದ 1500 ಕ್ಕೂ ಹೆಚ್ಚು ಕಾನೂನು ತಜ್ಞರು ಹಾಗೂ 300 ವಕ್ತಾರರು ಭಾಗವಹಿಸಿದ್ದರು. "ಇದು ನಮ್ಮ JRC ಜಾಲದಜೊತೆಗೆ ಭಾರತದಲ್ಲಿನ ಮಕ್ಕಳ ಹಕ್ಕುಗಳ ಅಭಿಯಾನಕ್ಕೆ ಬಹುಮಾನದ ಕ್ಷಣವಾಗಿದೆ. ಇದು ನಮ್ಮ ಚಟುವಟಿಕೆಗೆ ಜಾಗತಿಕ ಗಮನವನ್ನು ನೀಡುತ್ತದೆ. JRC ರಾಷ್ಟ್ರೀಯ ಸಂಯೋಜಕರಾದ ರವಿಕಾಂತ್ ಹೇಳಿದರು. "ಭುವನ್ ನ್ಯಾಯವೆಂಬುದು ಪ್ರಜಾಪ್ರಭುತ್ವದ ಅತಿದೊಡ್ಡ ಕಂಬವಾಗಿದೆ ಎಂಬ ನಂಬಿಕೆಯಲ್ಲಿ ತಮ್ಮಜೀವನವನ್ನು ಮಕ್ಕಳ ಮತ್ತು ಮಹಿಳೆಯರ ನ್ಯಾಯಕ್ಕಾಗಿ ಸಮರ್ಪಿಸಿದ್ದಾರೆ. ಅವರ ಕೆಲಸದ ಪರಿಣಾಮವಾಗಿ ಲಕ್ಷಾಂತರ ಮಕ್ಕಳು ಮತ್ತು ಮಹಿಳೆಯರು ರಕ್ಷಿಸಿದ್ದಾರೆ. "WJA ಅಧ್ಯಕ್ಷರಾದ ಜಾವಿಯರ್ ಕ್ರೆಮೇಡ್ಸ್ ಅವರು ಹೇಳಿದರು. ಈ ಪ್ರಶಸ್ತಿಯನ್ನು ಡೊಮಿನಿಕನ್ ರಿಪಬ್ಲಿಕ್‌ನ ಕಾರ್ಮಿಕ ಸಚಿವಎಡ್ಡಿ ಓಲಿವರಸ್‌ಓರ್ಟೆಗಾ ಹಾಗೂ ಘಎಂ ಅಧ್ಯಕ್ಷರಾದ ಜಾವಿಯರ್ ಕ್ರೆಮೇಡ್ಸ್ ಅವರು ನೀಡಿದರು. ಮಹಿಳಾ ಸಚಿವ ಮಾಯ್ರಾಜಿಮೆನೆಜ್ ಈ ಸಂದರ್ಭದಲ್ಲಿದ್ದರು. ಭುವನ್‌ರಿಭುಅವರು 60ಕ್ಕೂ ಹೆಚ್ಚು ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು (ಕಖಿಖ)ಮುನ್ನಡೆಸಿ ಸುಪ್ರೀಂಕೋರ್ಟ್ ಮತ್ತು ವಿವಿಧ ಹೈಕೋರ್ಟ್‌ಗಳಲ್ಲಿ ಐತಿಹಾಸಿಕ ತೀರ್ಪುಗಳನ್ನು ತಂದಿದ್ದಾರೆ. 2011ರಲ್ಲಿ ಅವರು ಹುರಿದುಂಬಿಸಿದ ಪ್ರಕರಣದ ಫಲವಾಗಿ ಸುಪ್ರೀಂಕೋರ್ಟ್ ಮಾನವಕಳ್ಳ ಸಾಗಾಣಿಕೆ ತಡೆ ಕುರಿತು ಸ್ಪಷ್ಟ ನಿರ್ವಹಣೆ ಕುರಿತು ಹಾಗೂ 2013ರಲ್ಲಿ ಕಾಣೆಯಾಗುವ ಮಕ್ಕಳ ಕುರಿತು ನಡೆಸಿದ ಅವರ ಅಭಿಯಾನದಿಂದ ಭಾರತದ ಕಾನೂನು ವ್ಯವಸ್ಥೆ ಕಾಣೆಯಾಗುವ ಮಕ್ಕಳ ಪ್ರಕರಣಗಳನ್ನು ಹೇಗೆ ನೋಡುತ್ತಿತ್ತೆಂಬ ದೃಷ್ಟಿಕೋನವೇ ಬದಲಾಗಿತು. ಅ ವ ' ರ ' ಎ ಆ ನ್ ' ಲ್ ' ೖ ನ್ ಮತ್ತುಆಫ್‌ಲೈನ್‌ಎರಡರಲ್ಲಿಯೂ ಮಕ್ಕಳ ಲೈಂಗಿಕ ದೌರ್ಜನ್ಯದ ವಿರುದ್ಧ ಪ್ರಮುಖ ಕಾನೂನು ಸುಧಾರಣೆಗಳನ್ನು ಮುಂದುವರಿಸಿದ್ದಾರಲ್ಲದೇ, ಮಕ್ಕಳ ಮೇಲಿನ ಅತ್ಯಾಚಾರ ಮತ್ತು ಬಾಲ್ಯವಿವಾಹದ ವಿರುದ್ಧ ಕಾನೂನುಗಳನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.

When Children Have Children ಎಂಬ ಅವರ ಪುಸ್ತಕದಲ್ಲಿ ನೀಡಿರುವಕಖಅಏಇಖತಂತ್ರವನ್ನು 2024ರಲ್ಲಿ ಸುಪ್ರೀಂಕೋರ್ಟ್ ಮಾರ್ಗಸೂಚಿಗಳಾಗಿ ಅಂಗೀಕರಿಸಿದೆ. ಈ ತಂತ್ರವನ್ನುರೀಚ್ ಸಂಸ್ಥೆ ಸಹ ಅನುಸರಿಸುತ್ತಿದ್ದು, ಬಳ್ಳಾರಿಜಿಲ್ಲೆಯನ್ನು 2030ರ ಒಳಗೆ ಬಾಲ್ಯವಿವಾಹ ಮುಕ್ತವಾಗಿಸಲು ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

## ಮೇ 11ರಂದು ಹುಬ್ಬಳ್ಳಿಯಲ್ಲಿ ಜನಾಕ್ರೋಶ ರ್‍ಯಾಲಿ: ಜನನ-ಮರಣ ಪ್ರಮಾಣಪತ್ರಕ್ಕೂ ತೆರಿಗೆ ಹಾಕುವ ಸರ್ಕಾರವಿದು



**ಹುಬ್ಬಳ್ಳಿ, ಮೇ. 6:** ಕರ್ನಾಟಕದಲ್ಲಿ ಹುಟ್ಟಿದರೂ, ಸತ್ತರೂ ತೆರಿಗೆ ಹಾಕುವ ಸರ್ಕಾರವಿದು. ಜನರಿಗೆ ಆಸೆ ಆಮಿಷಗಳನ್ನೊಡ್ಡಿ ಅಧಿಕಾರಕೆಕ ಬಂದ ಸರ್ಕಾರ ನಿತ್ಯ ಒಂದಿಲ್ಲೊಂದು ತೆರಿಗೆ ಹೆಚ್ಚಳ, ಬಎಲೆ ಏರಿಕೆ ಮಾಡುತ್ತಲೇ ಬಂದಿದ್ದು, ಇದನ್ನು ಕೇಂದ್ರ ಸಕಾರದ ಮೇಲೆ ಹೇರಲು ಪ್ರಯತ್ನಿಸುತ್ತಿದೆ. ಸರ್ಕಾರದ ಬೆಲೆ ಏರಿಕೆ ವಿರೋಧಿಸಿ ಇದೇ ಮೇ 11 ರಂದು ನಗರದಲ್ಲಿ ಬೃಹತ್ ಜನಾಕ್ರೋಶ ರ್‍ಯಾಲಿ ನಡೆಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ತಿಳಿಸಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ರೈತರ ಮಕ್ಕಳಿಗೆ ಜಾರಿ ತಂದಿದ್ದ ಸ್ಕಾಲರ್‌ಶಿಪ್ ಯೋಜನೆಗಳನ್ನು ನಿಲ್ಲಿಸಿದೆ. ಈ ಸರ್ಕಾರ ಬಂದ ಮೇಲೆ ಅದನ್ನು ತಡೆ ಹಿಡಿದಿದೆ ದಲಿತರ ಪರ ಎನ್ನುವ ಸರ್ಕಾರ ದಲಿತರಿಗೆ ದ್ರೋಹ ಮಾಡಿದೆ ಎಂದು ಆಕ್ರೋಶ ಹೊರ ಹಾಕಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಸಮುದಾಯಕ್ಕೆ ನಿಗದಿ ಮಾಡಿರುವ ಹಣವನ್ನು ಗ್ಯಾರಂಟಿಯೋಜನೆಗಳ ಉದ್ದೇಶಗಳಿಗೆ ಬಳಸಿಕೊಳ್ಳಲಾಗುತ್ತಿದೆ. ಸರ್ಕಾರದ ಅಭಿವೃದ್ಧಿಗೆ ವಿರೋಧಿಯಾಗಿದೆ. ನಿಗಮಗಳಿಗೆ ಹಣ ಕೊಡುವುದನ್ನೇ ಈ ಸರ್ಕಾರ ನಿಲ್ಲಿಸಿ ಬಿಟ್ಟಿದ್ದು. ಅಭಿವೃದ್ಧಿಯಲ್ಲಿ ಮಲತಾಯಿ ಧೋರಣೆ ಮಾಡುತ್ತಿದೆ. ಆಡಳಿತದ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೇಲ್ ಆಗಿದ್ದಾರೆ ಎಂದರು.

ಹಿಂದು ವಿರೋಧಿ ಸರ್ಕಾರ ಇದಾಗಿದೆ. ಸುಹಾಸ್ ಶೆಟ್ಟಿ ಕೊಲೆ ಸರ್ಕಾರಿ ಪ್ರಾಯೋಜಿತವಾಗಿದೆ ಎನ್ನುವ ಗಂಭೀರ ಆರೋಪವನ್ನು ಅವರು ಮಾಡಿದ್ದಾರೆ. ಫಾಜಿಲ್‌ಗೆ ಸರ್ಕಾರ ಪರಿಹಾರವಾಗಿ ನೀಡಿದ್ದ 25 ಲಕ್ಷ ರೂಪಾಯಿ ಹಣದಲ್ಲಿ 3 ಲಕ್ಷವನ್ನು ಕೊಲೆ ಸೂಪಾರಿಗೆ ಎಂದು ನೀಡಲಾಗಿದೆ. ಈ ಸರ್ಕಾರ ಹಿಂದು ವಿರೋಧಿ ಆಗಿದೆ. ಭಯೋತ್ಪಾದಕರಿಗೆ ಕರ್ನಾಟಕ ಸ್ಲೀಪರ್ ಸೆಲ್ ಆಗಿದೆ ಎಂದರು. ಇನ್ನು ರಾಜ್ಯ ಸರ್ಕಾರದ ವಿರುದ್ಧ ನಡೆಸಲಾಗುತ್ತಿರುವ ಜನಾಕ್ರೋಶ ಯಾತ್ರೆಗೆ ಉತ್ತಮ ಸ್ಪಂದನೆ ಸಿಕ್ಕಿದೆ. ಇದೇ 11ರಂದು ಹುಬ್ಬಳ್ಳಿಯಲ್ಲಿ ಜನಾಕ್ರೋಶ ಯಾತ್ರೆ ಸಮಾರೋಪ ಕಾರ್ಯಕ್ರಮ ನಡೆಯುತ್ತದೆ ಎಂದರು. ಧಾರವಾಡ ಜಿಲ್ಲೆಯ ಕಾರ್ಯಕರ್ತರು ಸೇರಿದಂತೆ ರಾಜ್ಯದ ಅನೇಕ ನಾಯಕರು ಸಮಾರೋಪ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ಅವರು ಹೇಳಿದರು.

ನಮ್ಮ ನಿರೀಕ್ಷೆಗು ಮೀರಿ ಜನರು ಭಾಗಿಯಾಗುತ್ತಿದ್ದಾರೆ. ಜನಾಕ್ರೋಶ ಯಾತ್ರೆ ಇದು ಪ್ರಾರಂಭ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ದಿನೇ ದಿನೇ ಬೆಲೆ ಏರಿಸುತ್ತಿದೆ. ಈ ಸರ್ಕಾರದಲ್ಲಿ ಒಂದು ವಿಂಗ್ ಬೆಲೆ ಏರಿಕೆ ಬಗ್ಗೆ ಕೆಲಸ ಮಾಡುತ್ತಿದೆ. ಈ ಸರ್ಕಾರ ಕಸಕ್ಕೂ ಟ್ಯಾಕ್ಸ್ ಹಾಕುತ್ತಿದ್ದು ಸುಮಾರು 50 ವಸ್ತುಗಳ ಮೇಲೆ ಟ್ಯಾಕ್ಸ್ ಹಾಕುವಂತ ಕೆಲಸ ಮಾಡಿದೆ. ಈ ಸರ್ಕಾರ ಬೆಲೆ ಏರಿಕೆ ಅಭಿಯಾನ ನಡೆಸುತ್ತಿದೆ ಎಂದರು.

## ಜಾತಿ ನಿರ್ಮೂಲನೆಯ ಜ್ಯೋತಿ ನೀಡಿದವರು ಶರಣರು: ಚನ್ನಬಸವಾನಂದ ಶ್ರೀ ಬಣ್ಣನೆ



**ಬೀದರ, ಮೇ. 6:** ಬಸವಾದಿ ಶರಣರು ಒಂದು ಜಾತಿಗೆ ಸೀಮಿತರಲ್ಲ. ಅದಕ್ಕಾಗಿಯೇ ವಿಶ್ವಗುರು ಬಸವಣ್ಣನವರನ್ನು ಜಗಜ್ಯೋತಿ ಎಂದು ಕರೆಯುತ್ತಾರೆ. ಜಾತಿ ನಿರ್ಮೂಲನೆ ಮಾಡಿ ಜ್ಯೋತಿತತ್ವ ಜಗತ್ತಿನಲ್ಲಿ ಸಾರಿದವರು ಬಸವಾದಿ ಶರಣರು ಎಂದು ರಾಷ್ಟ್ರೀಯ ಬಸವ ದಳದ ಕೇಂದ್ರ ಸಮಿತಿ ಅಧ್ಯಕ್ಷ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ನುಡಿದರು.

ನಗರದ ಅಲ್ಲಮಪ್ರಭು ನಗರದ ಉದ್ಯಾನದಲ್ಲಿ ಜರುಗಿದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 892ನೇ ಜಯಂತಿ ಉತ್ಸವದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ವಿಶ್ವದ ಮೊಟ್ಟಮೊದಲ ಅನುಭವ ಮಂಟಪವೆಂಬ ಮೊದಲ ಪಾರ್ಲಿಮೆಂಟಿನ ಪ್ರಥಮ ಲೋಕಸಭಾ ಸ್ಪೀಕರ್ ಅಲ್ಲಮಪ್ರಭುದೇವರಾಗಿದ್ದರು. ಪ್ರತಿದಿನ ವಚನಗಳ ಬರೆದು ಚರ್ಚಿಸುತಿದ್ದರು. ಶರಣರು ಒಂದು ಜಾತಿಗೆ ಸೀಮಿತರಲ್ಲ. ಅವರ ಸಂದೇಶಗಳು ಸಾರ್ವಕಾಲಿತ ಸತ್ಯವನ್ನು ಸಾರುತ್ತವೆ. ಮುಂದಿನ ಪೀಳಿಗೆಗೆ ವಚನ ಸಾಹಿತ್ಯ ತಿಳಿಸುವ ಕಾರ್ಯ ಎಲ್ಲಾ ಪಾಲಕರು ಮಾಡಬೇಕು. ಬಸವ ತತ್ವ ಉಳಿಯದಿದ್ದರೆ ಯಾರಿಗೂ ಉಳಿವಿಲ್ಲ. ಜಾಗತಿಕ ಸಮಸ್ಯೆಗಳಿಗೆ ಬಸವಾದಿ ಶರಣರ ವಚನಗಳೇ ಪರಿಹಾರವಾಗಿವೆ ಎಂದು ಶ್ರೀಗಳು ತಿಳಿಸಿದರು. ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿದ ಬಿಜೆಪಿ ವಿಭಾಗೀಯ ಸಹಪ್ರಭಾರಿ ಈಶ್ವರಸಿಂಗ್ ಠಾಕೂರ ಮಾತನಾಡಿ, ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಜಗಜ್ಯೋತಿ ಬಸವಣ್ಣನವರು 12ನೇ ಶತಮಾನದಲ್ಲಿ ಸ್ಥಾಪಿಸಿದ ಅನುಭವ ಮಂಟಪದ ಮಾದರಿಯಲ್ಲಿ ನಮ್ಮ ಸರ್ಕಾರ ಮುನ್ನಡೆಸಿಕೊಂಡು ಹೋಗುತ್ತಿದ್ದೇನೆ ಎಂದು ವಿಶ್ವದ ತುಂಬಾ ಹೇಳುತ್ತಾರೆ. ಅಂತಹ ಶರಣರು ಕಾಯಕ ಮಾಡಿ, ವಿಶ್ವಕ್ಕೆ ಸಮಾನತೆಯ ಸಂದೇಶ ನೀಡಿದ ಪವಿತ್ರ ನೆಲದಲ್ಲಿ ನಾವು ಜೀವನ ಸಾಗಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯ. ಕ್ಷೇತ್ರದ ಎಲ್ಲಾ ಜನಾಂಗದವರ ಜೊತೆ ಸಹಪಂಕ್ತಿ ಭೋಜನ ಮಾಡಿ ನಾನು ಸ್ವತಃ ಶರಣ ತತ್ವ ಅಳವಡಿಸಿಕೊಂಡಿದ್ದೇನೆ ಎಂದರು. ನಗರಸಭೆ ಸದಸ್ಯ ರಾಜಾರಾಮ ಚಿಟ್ಟಾ ಷಟಸ್ಥಲ ಧ್ವಜಾರೋಹಣ ನೆರವೇರಿಸಿ ಮಾತನಾಡಿ ಅಲ್ಲಮಪ್ರಭು ಓಣಿಯ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುತ್ತೇನೆ ಎಂದರು. ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ. ರಾಜಕುಮಾರ ಹೆಬ್ಬಾಳೆ ಮಾತನಾಡಿದರು.ಅಧ್ಯಕ್ಷತೆಯನ್ನು ಓಣಿಯ ಮುಖಂಡರಾದ ನೂರಂದಪ್ಪ ಗಿರಿ ವಹಿಸಿದ್ದರು. ಕೆ.ಎ.ಎಸ್. ಪಾಸಾದ ಓಣಿಯ ಯುವಕ ಶಿವಕುಮಾರ ಮನೋಹರ ಸ್ವಾಮಿ ಹಾಗೂ ಐಐಟಿ ಪಾಸಾದ ರಾಹುಲ ಚಂದ್ರಕಾಂತ ಪಟ್ನೆ ಅವರನ್ನು ಸನ್ಮಾನಿಸಲಾಯಿತು.

ಮಲ್ಲಿಕಾರ್ಜುನ ಬುಕ್ಕಾ ದಂಪತಿಗಳು ಬಸವಪೂಜೆ ನೆರವೇರಿಸಿದರು. ಶ್ರೀನಾಥ ಕೋರೆ, ಅಕ್ಕಮಹಾದೇವಿ ಸ್ವಾಮಿ ವಚನ ಗಾಯನ ಮಾಡಿದರು. ಬಸವಕುಮಾರ ಚಟನಳ್ಳಿ ಪ್ರಾರ್ಥಿಸಿದರು. ಕೀರ್ತಿ ಘೂಳೆ ವಚನ ನೃತ್ಯ ಮಾಡಿದರು. ಚಂದ್ರಕಾಂತ ಪಟ್ನೆ ಸ್ವಾಗತಿಸಿದರು. ಸುಜೀತಕುಮಾರ ಬಿ ನಿರೂಪಿಸಿದರೆ ಶಶಿಧರ ಹೊಸದೊಡ್ಡಿ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಮಲ್ಲಯ್ಯ ಸ್ವಾಮಿ, ಭೀಮರಾವ ಪೋ.ಪಾಟೀಲ, ವೀರಶೆಟ್ಟಿ ಗಣಾಪುರ, ಚಂದ್ರಶೇಖರ ಸ್ವಾಮಿ, ಶಿವರಾಜ ಪಟ್ನೆ, ಚಂದ್ರಶೇಖರ ರೆಡ್ಡಿ, ಬಸಯ್ಯ ಸ್ವಾಮಿ, ರಾಜಕುಮಾರ ಸ್ವಾಮಿ, ಗಣಪತಿ ಬಿರಾದಾರ, ಗಣಪತರಾವ ಗುಡುರೆ, ಈಶ್ವರಮ್ಮ ಪಾಟೀಲ ಸೇರಿದಂತೆ ಹಲವರಿದ್ದರು. ಕೊನೆಯಲ್ಲಿ ಓಣಿಯ ಶರಣ ಶರಣೆಯರಿಂದ ಆಕರ್ಷಕ ಸಾಂಪ್ರದಾಯಿಕ ಕೋಲಾಟ ನೆರವೇರಿತು.

## ಮೆಡಿಕಲ್ ಕಾಲೇಜ್ ವಿದ್ಯಾರ್ಥಿಗಳ ಸ್ಟೈಫಂಡ್ ಹಗರಣ ಡಾ.ಬಿಲಗುಂದಿ ಮನೆ ಮೇಲೆ ದಾಳಿಯಿಂದ ಅಕ್ರಮ ಸಾಬೀತು: ಇ.ಡಿ



**ಕಲಬುರಗಿ, ಮೇ. 6:** ನಗರದ ಪ್ರತಿಷ್ಠಿತ ಹೈದರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂಆರ್‌ಎಂಸಿ ಮೆಡಿಕಲ್ ಕಾಲೇಜ್ ವಿದ್ಯಾರ್ಥಿಗಳ ಸ್ಟೈಫಂಡ್ ಹಣ ದುರುಪಯೋಗಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಸಂಸ್ಥೆಯ ಹಿಂದಿನ ಅಧ್ಯಕ್ಷ ಡಾ.ಭೀಮಾಶಂಕರ ಬಿಲಗುಂದಿ ಸೇರಿದಂತೆ ಮೂವರು ಆಡಳಿತ ಮಂಡಳಿ ಸದಸ್ಯರ ಮನೆಯ ಮೇಲೆ ದಾಳಿ ನಡೆಸಿದ ಜಾರಿ ನಿರ್ದೇಶನಾಲಯವು 81.21 ಕೋಟಿ ದುರುಯೋಗ ಪಡಿಸಿಕೊಂಡಿದ್ದು ಸಾಬೀತಾಗಿದೆ ಎಂದು ಇಡಿ ಮೂಲಗಳು ತಿಳಿಸಿವೆ. ಹೈದರಾಬಾದ ಕರ್ನಾಟಕ ಶಿಕ್ಷಣ ಸಮಸ್ಥೆಯ ಮಾಜಿ ಅಧ್ಯಕ್ಷ ಡಾ.ಭೀಮಾಶಂಕರ ಬಿಲಗುಂದಿ, ಎಸ್ ಎಂ ಪಾಟೀಲ್, ಸುಭಾಷ್ ಜಗನ್ನಾಥ್ ಅವರು ಎಂಆರ್‌ಎಂಸಿ ವೈದ್ಯಕೀಯ ಕಾಲೇಜಿನ 282 ಸ್ನಾತಕೋತ್ತರ ವಿದ್ಯಾರ್ಥಿಗಳ 81.21 ಕೋಟಿ ರೂ. ಹಣವನ್ನು ದುರುಪಯೋಗ ಪಡಿಸಕೊಂಡಿರುವುದು ಇಡಿ ತನಿಖೆ ವೇಳೆ ಬೆಳಕಿಗೆ ಬಂದಿದೆ ಎಂದು ತಿಳಿದುಬಂದಿದೆ. ಪ್ರಕರಣ ಸಂಬಂಧ ಇಡಿ ಅಧಿಕಾರಿಗಳು ಕಲಬುರಗಿಯ 7 ಕಡೆ ದಾಳಿ ನಡೆಸಿದ್ದರು. ಹೈದರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಮಾಜಿ ಅಧ್ಯಕ್ಷ ಡಾ.ಭೀಮಾಶಂಕರ್ ಬಿಲಗುಂದಿ, ಎಮ್‌ಆರ್‌ಎಮ್‌ಸಿ ವೈದ್ಯಕೀಯ ಕಾಲೇಜಿನ ಮಾಜಿ ಡೀನ್ ಎಸ್. ಎಂ.ಪಟೇಲ್, ಲೆಕ್ಕಪರಿಶೋಧಕ ಸುಭಾಷ್ ಚಂದ್ರ ಅವರುಗಳ ಕಚೇರಿಗಳ ಮೇಲೆ ಇಡಿ ದಾಳಿ ನಡೆಸಿ, ಪರಿಶೀಲನೆ ನಡೆಸಿದ್ದರು.

**ಏನಿದು ಪ್ರಕರಣ?** 2018 ರಿಂದ 2024 ರ ವರೆಗೆ ಹೈದರಾಬಾದ್ ಶಿಕ್ಷಣ ಸಂಸ್ಥೆಯ ಎರಡು ಅವಧಿಗೆ ಅಧ್ಯಕ್ಷರಾಗಿದ್ದ ಭೀಮಾಶಂಕರ್ ಬಿಲಗುಂದಿ ವಿರುದ್ಧ ಎಂಆರ್?ಎಂಸಿ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ಸ್ಟೈಫಂಡ್ ಹಗರಣ ಆರೋಪ ಕೇಳಿಬಂದಿತ್ತು. 700 ಜನ ಎಂಬಿಬಿಎಸ್ ವಿದ್ಯಾರ್ಥಿಗಳಿಗೆ ಸುಮಾರು 80 ಕೋಟಿ ರೂ. ಅಧಿಕ ಹಣ ನೀಡದೆ ವಂಚನೆ ಮಾಡಿರುವ ಆರೋಪ ಇವರ ಮೇಲೆ ಕೇಳಿಬಂದಿತ್ತು. ಕಳೆದ ವರ್ಷ ಸುಮಾರು 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸ್ಟೈಫಂಡ್ ಹಣ ನೀಡದೆ ವಂಚಿಸಿದ್ದ ಅಂದು ದೊಡ್ಡ ಸುದ್ದಿಯಾಗಿತ್ತು. ವೈದ್ಯಕೀಯ ವಿದ್ಯಾರ್ಥಿಗಳಿಂದ ಖಾಲಿ ಚೆಕ್‌ಗೆ ಸಹಿ ಮಾಡಿಸಿಕೊಂಡು ಅಕ್ರಮ ಎಸಗಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ವಿದ್ಯಾರ್ಥಿಗಳಿಗೆ ಹಣ ಜಮೆ ಆಗ್ತಿದ್ದಂತೆ ಚೆಕ್‌ಗಳನ್ನು ಬಳಸಿ ಆರೋಪಿಗಳು ರೀಫಂಡ್ ಮಾಡಿಕೊಳುತ್ತಿದ್ದರು. ಅಕ್ರಮದ ಬಗ್ಗೆ ಕಲಬುರಗಿಯ ಸಿಇಎನ್ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು. ಈ ಎಫ್‌ಐಆರ್ ಆಧಾರದ ಮೇಲೆ ಇಡಿ ತನಿಖೆ ನಡೆಸುತ್ತಿದೆ.

## ಜನಿವಾರ ಪ್ರಕರಣ: ಬಂಧನದ ನಂತರ ಬದಲಾದ ವರಸೆ ವಿದ್ಯಾರ್ಥಿ ಸ್ವಯಂ ಪ್ರೇರಿತವಾಗಿ ಜನಿವಾರ ತೆಗೆದಿದ್ದಾನೆಂಬ ವಾದ

**ಕಲಬುರಗಿ, ಮೇ. 6:** ನಗರದ ಸೇಂಟ್ ಮೇರಿ ಶಾಲೆಯ ನೀಟ್ ಪರೀಕ್ಷಾ ಕೇಂದ್ರದಲ್ಲಿ, ಪರೀಕ್ಷೆ ಬರೆಯಲು ಬಂದಿದ್ದ ಬ್ರಾಹ್ಮಣ ವಿದ್ಯಾರ್ಥಿ ಶ್ರೀಪಾದ ಸುಧೀರ ಪಾಟೀಲ್‌ನ ಜನಿವಾರ ತೆಗಿಸಿದ ಪ್ರಕರಣದಲ್ಲಿ ಇಬ್ಬರನ್ನು ಬಂಧಿಸಿದ ನಂತರ, ಇದೀಗ ಸಿಬ್ಬಂದಿಗಳು ಜನಿವಾರ ತೆಗೆಸಿಲ್ಲ, ಸ್ವಯಂ ಪ್ರೇರಿತನಾಗಿ ಜನಿವಾರ ತೆಗೆದು ಪರೀಕ್ಷಾ ಕೋಣೆಗೆ ಬಂದಿದ್ದಾನೆ ಎಂದು ಪರೀಕ್ಷಾ ಕೇಂದ್ರದವರು ವರಸೆ ಬದಲಿಸಿದ್ದಾರೆ. ಈ ಘಟನೆ ಸಂಬಂಧ ಬ್ರಾಹ್ಮಣ ಸಮುದಾಯ ಮತ್ತು ಹಿಂದೂ ಪರ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸುತ್ತಿದ್ದಂತೆಯೇ ಪರೀಕ್ಷಾ ಕೇಂದ್ರದ ಸಿಬ್ಬಂದಿ ಪ್ರಕರಣ ತಿಳಿಗೊಳಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಪರೀಕ್ಷೆಬರೆಯಲು ಬಂದ ಎಲ್ಲ ವಿದ್ಯಾರ್ಥಿಗಳನ್ನು ಸಾಲಾಗಿ ನಿಲ್ಲಿಸಿ ನೀಟ್ ಪರೀಕ್ಷಾ ನಿಯಮಗಳನ್ನು ತಿಳಿಸಿದೆವು. ಬಳಿಕ, ವಿದ್ಯಾರ್ಥಿಗಳನ್ನು ತಪಾಸಣೆಗೆ ಒಳಡಿಸಿದೆವು. ಈ ವೇಳೆ, ವಿದ್ಯಾರ್ಥಿಗಳು ತಮ್ಮ ಕೈಯಲ್ಲಿ ಕಟ್ಟಿರುವ ದಾರ, ಕೊರಳಲ್ಲಿನ ತಾಯತಗಳನ್ನು ತೆಗೆದರು. ಎಲ್ಲ ವಿದ್ಯಾರ್ಥಿಗಳು ತಮ್ಮ ಧಾರ್ಮಿಕ ಚಿಹ್ನೆಗಳನ್ನು ತೆಗೆಯುತ್ತಿದ್ದಂತೆ ಶ್ರೀಪಾದ ಪಾಟೀಲ್ ಕೂಡ ಜನಿವಾರ ತೆಗೆದಿದ್ದಾನೆ. ನಾವು ಜನಿವಾರ ತೆಗೆದಿಡು ಅಂತ ಹೇಳಿಲ್ಲ. ತಾನಾಗಿಯೇ ತೆಗೆದಿದ್ದಾನೆ. ಬೇರೆ ಯಾವ ಬ್ರಾಹ್ಮಣ ವಿದ್ಯಾರ್ಥಿ ಕೂಡ ಜನಿವಾರ ತೆಗೆದಿಲ್ಲ. ಶ್ರೀಪಾದ ಪಾಟೀಲ್ ಜನಿವಾರ ತೆಗೆದು, ಬಳಿಕ ಹೊರಗೆ ಹೋಗಿ ತಮ್ಮ ತಂದೆಯವರಿಗೆ ನೀಡಿದ್ದಾರೆ ಎಂದು ಪರೀಕ್ಷಾ ಕೇಂದ್ರ ಸಿಬ್ಬಂದಿ ಹೇಳುತ್ತಿದ್ದಾರೆ.

ಈ ಸಂಬಂಧ ಪೊಲೀಸ್ ಕಮಿಷನರ್ ಎಸ್.ಡಿ.ಶರಣಪ್ಪ ಮಾತನಾಡಿ, ಸದ್ಯ ಇಬ್ಬರನ್ನು ಸಿಬ್ಬಂದಿ ಬಂಧಿಸಿ ಕಾನೂನು ಕ್ರಮ ಕೈಗೊಂಡಿದ್ದೇವೆ. ವಿದ್ಯಾರ್ಥಿ ದೂರು ಆಧರಿಸಿ ಶರಣಗೌಡ, ಗಣೇಶ ಎಂಬುವರ ಇಬ್ಬರ ವಿರುದ್ಧ ಎಫ್‌ಐಆರ್ ದಾಖಲಿಸಿ ಬಂಧಿಸಿದ್ದೇವೆ ಎಂದರು. ಸದ್ಯ ಪ್ರಕರಣದ ತನಿಖೆ ಮುಂದುವರಿಸಿದ್ದೇವೆ ಎಂದು ಡಾ.ಶರಣಪ್ಪ ಎಸ್.ಡಿ. ತಿಳಿಸಿದರು.

**ನೀಟ್ ನಿಯಮಗಳು:** ಪರೀಕ್ಷಾ ಕೇಂದ್ರಕ್ಕೆ ಪ್ರವೇಶಿಸುವಾಗ ಅಭ್ಯರ್ಥಿಗಳು ಕಟ್ಟುನಿಟ್ಟಾದ ಡ್ರೆಸ್ ಕೋಡ್ ನಿಯಮ ಪಾಲಿಸಬೇಕು. ಜನಿವಾರ ಕುರಿತಂತೆ ನಿರ್ದಿಷ್ಟವಾಗಿ ಯಾವುದೇ ಸ್ಪಷ್ಟ ನಿಯಮವನ್ನು ನೀಡಿಲ್ಲ. ಜನಿವಾರ ತೆಗಯುವುದನ್ನ ಅಧಿಕೃತ ಎಂದು ಉಲ್ಲೇಖಿಸಿಲ್ಲ. ಆದರೆ, ಕೆಲವು ಪರೀಕ್ಷಾ ಕೇಂದ್ರಗಳಲ್ಲಿ ತಪಾಸಣೆಯ ಸಂದರ್ಭದಲ್ಲಿ ಜನಿವಾರವನ್ನು ತೆಗೆಯುವಂತೆ ಸೂಚಿಸಬಹುದು. ವಿಶೇಷವಾಗಿ ಜನಿವಾರ ಲೋಹದ ವಸ್ತುಗಳನ್ನು ಒಳಗೊಂಡಿದ್ದರೆ ತೆಗಸಬಹುದು. ಆದರೆ ಜನಿವಾರ ದಾರದ್ದಾಗಿದ್ದು ಧಾರ್ಮಿಕವಾಗಿ ಮಹತ್ವದ್ದಾಗಿದ್ದರೆ ಅರ್ಜಿ ಫಾರ್ಮ್‌ನಲ್ಲಿ "ಕಸ್ಟಮರಿ ಡ್ರೆಸ್" ಆಯ್ಕೆಯನ್ನು ಆಯ್ಕೆ ಮಾಡಬೇಕಾಗುತ್ತದೆ. ಇದರಿಂದ ಸುರಕ್ಷತಾ ತಪಾಸಣೆಗೆ ವಿಶೇಷ ವ್ಯವಸ್ಥೆಯನ್ನು ಮಾಡಲಾಗುತ್ತದೆ.

ಪರೀಕ್ಷಾ ಕೇಂದ್ರದ ಅಧಿಕಾರಿಗಳನ್ನು ಮುಂಚಿತವಾಗಿ ಸಂಪರ್ಕಿಸಬೇಕಾಗುತ್ತದೆ. ಒಂದು ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರವನ್ನು ತಲುಪಬೇಕಾಗುತ್ತದೆ.

ಪರೀಕ್ಷಾ ಕೇಂದ್ರದ ಬಳಿ ತಪಾಸಣೆಗೆ ಒಳಗಾಗಬೇಕಾಗುತ್ತದೆ. ಧಾರ್ಮಿಕ ಅಥವಾ ಸಾಂಸ್ಕೃತಿಕ ಸಾಂಪ್ರದಾಯಿಕ ಉಡುಗೆ ಧರಿಸುವ ಅಭ್ಯರ್ಥಿಗಳಿಗೆ ಅನ್ವಯ. ಉದಾಹರಣೆಗೆ ಹಿಜಾಬ್, ಸಿಖ್‌ರ ಕಂಗ ಕರ, ಕೃಪಾಣ್ ನೀಟ್ ಅರ್ಜಿ ಫಾರ್ಮ್‌ನಲ್ಲಿ "ಕಸ್ಟಮರಿ ಡ್ರೆಸ್" ಆಯ್ಕೆಯನ್ನು ಆಯ್ಕೆ ಮಾಡಬೇಕು.

# ಭಾರತದ ವಿರುದ್ಧ ಸುಳ್ಳು ಆರೋಪ: ಪಾಕ್‌ಗೆ ಹಿಗ್ಗಾಮುಗ್ಗಾ ಜಾಡಿಸಿದ ವಿಶ್ವಸಂಸ್ಥೆ

**ನ್ಯೂಯಾರ್ಕ್, ಮೇ. 6:** ಪಾಕಿಸ್ತಾನದ ಕೋರಿಕೆಯ ಮೇರೆಗೆ ಕರೆಯಲಾಗಿದ್ದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ರಹಸ್ಯ ಸಭೆಯಲ್ಲಿ ಪಾಕ್ ಬೆವರಿಳಿಸಿಕೊಂಡಿದೆ. ಭಾರತದ ವಿರುದ್ಧ ಸುಳ್ಳು ಆರೋಪ ಮಾಡಿದ್ದ ಪಾಕಿಸ್ತಾನಕ್ಕೆ ವಿಶ್ವಸಂಸ್ಥೆ ಹಿಗ್ಗಾಮುಗ್ಗಾ ಜಾಡಿಸಿದೆ.


ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಪಾಕ್ ಮನವಿಯ ಮೇರೆಗೆ ತುರ್ತು ಸಭೆ ನಡೆಯಿತು. ಸಭೆಯಲ್ಲಿ ಪಾಕಿಸ್ತಾನ ಪಹಲ್ಗಾಮ್ ವಿಚಾರವನ್ನು ಬದಿಗೆ ಸರಿಸಿ ಕಾಶ್ಮೀರದ ವಿಚಾರವನ್ನು ಮುಂದಿಟ್ಟು ಭಾರತ ಮಿಲಿಟರಿ ಪಡೆಯನ್ನು ಸಿದ್ಧವಾಗಿಟ್ಟುಕೊಂಡಿರುವ ಬಗ್ಗೆ ಸಿಂಪಥಿ ಗಿಟ್ಟಿಸಲು ಪ್ಲ್ಯಾನ್ ಮಾಡಿತ್ತು. ಆದರೆ ಪಾಕ್ ನಾಟಕಕ್ಕೆ ವಿಶ್ವಸಂಸ್ಥೆ ಸೊಪ್ಪು ಹಾಕದೇ ಛೀಮಾರಿ ಹಾಕಿದೆ. ಇದೇ ವೇಳೆ ವಿಶ್ವಸಂಸ್ಥೆ ಪಾಕಿಸ್ತಾನಕ್ಕೆ ಪಹಲ್ಗಾಮ್ ಹತ್ಯಾಕಾಂಡದ



ಹಿಂದೆ ಲಷ್ಕರ್ ನಂಟಿನ ಬಗ್ಗೆಯೂ ಪ್ರಸ್ತಾಪಿಸಿ ಹಾಗೂ ಬಹಿರಂಗವಾಗಿ ನ್ಯೂಕ್ಲಿಯರ್ ಬಾಂಬ್ ದಾಳಿಯ ಹೇಳಿಕೆ, ಕ್ಷಿಪಣಿ ಪ್ರಯೋಗದ ಬಗ್ಗೆ ಪ್ರಶ್ನಿಸಿ ಬೆವರಿಳಿಸಿದೆ. ಸಭೆಯಲ್ಲಿ ಭಯೋತ್ಪಾದಕ ದಾಳಿಗೆ ವ್ಯಾಪಕ ಖಂಡನೆ ವ್ಯಕ್ತವಾಗಿದ್ದು, ಕೆಲವು ಸದಸ್ಯರು ನಿರ್ದಿಷ್ಟವಾಗಿ ತಮ್ಮ ಧಾರ್ಮಿಕ ನಂಬಿಕೆಯ ಆಧಾರದ ಮೇಲೆ ಪ್ರವಾಸಿಗರನ್ನು ಗುರಿಯಾಗಿಸಿಕೊಂಡಿದ್ದಾರೆ ಎಂದು ಹೇಳಿ ಟೀಕಿಸಿತು. ಕೊನೆಗೆ ಭಾರತದೊಂದಿಗೆ ನೀವೇ ಮಾತುಕತೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಸೂಚಿಸಲಾಯಿತು. ಯಾವೆಲ್ಲ ದೇಶಗಳು ಭಾಗಿಚೀನಾ, ಫ್ರಾನ್ಸ್, ರಷ್ಯನ್ ಒಕ್ಕೂಟ, ಯುನೈಟೆಡ್ ಕಿಂಗ್ಡಮ್ ಮತ್ತು ಅಮೆರಿಕ ಶಾಶ್ವತ ಸದಸ್ಯ ದೇಶಗಳ ಜೊತೆ ಸಾಮಾನ್ಯ ಸಭೆಯಿಂದ ಎರಡು ವರ್ಷಗಳ ಅವಧಿಗೆ ಆಯ್ಕೆಯಾದ 10 ದೇಶಗಳ ಪ್ರತಿನಿಧಿಗಳು ಭದ್ರತಾ ಸಮಿತಿಯ ಸಭೆಯಲ್ಲಿ ಭಾಗಿಯಾದರು. ಅಲ್ಜೀರಿಯಾ, ಡೆನ್ಮಾರ್ಕ್, ಗ್ರೀಸ್, ಗಯಾನಾ, ಪಾಕಿಸ್ತಾನ, ಪನಾಮ, ಕೊರಿಯಾ ಗಣರಾಜ್ಯ, ಸಿಯೆರಾ ಲಿಯೋನ್, ಸ್ಲೊವೇನಿಯಾ, ಸೊಮಾಲಿಯಾ ಭಾಗಿಯಾಗಿತ್ತು.

# ನಮ್ಮ ಮೇಲೆ ದಾಳಿ ಮಾಡಿದರೆ ಯಾರೂ ಉಳಿಯುವುದಿಲ್ಲ: ರಕ್ಷಣಾ ಸಚಿವ

**ಇಸ್ಲಾಮಾಬಾದ್, ಮೇ. 6:** ಭಾರತದಿಂದ ಯುದ್ಧ ಆತಂಕ ಅನುಭವಿಸುತ್ತಿರುವ ಪಾಕಿಸ್ತಾನವು ಇದರ ನಡುವೆ ಭಾರತವನ್ನು ಬೆದರಿಸುವ ತಂತ್ರದ ಮೊರೆ ಹೋಗಿದೆ. ಪಾಕಿಸ್ತಾನದ ಭದ್ರತೆಗೆ ಧಕ್ಕೆ ತರುವ ಯಾವುದೇ ಆಕ್ರಮಣ ಅಥವಾ ಪ್ರಯತ್ನ ನಡೆದರೆ ಅದು ಉಗ್ರ ಮತ್ತು ಐತಿಹಾಸಿಕ ಪ್ರತಿಕ್ರಿಯೆ ನೀಡುತ್ತದೆ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಹೇಳಿದ್ದಾರೆ. ಭಾರತ ಪಾಕಿಸ್ತಾನದ ಮೇಲೆ ದಾಳಿ ಮಾಡಲು ಧೈರ್ಯ ಮಾಡಿದರೆ ಯಾರೂ ಬದುಕುಳಿಯುವುದಿಲ್ಲ ಎಂದು ಆಸಿಫ್ ಹೇಳಿದರು. ಪಹಲ್ಯಾಮ್ ಘಟನೆಯ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಯುದ್ಧ ಭೀತಿ ಆವರಿಸಿದೆ. ಘಟನೆಯ ಬಳಿಕ ಭಾರತವು ನೆರೆ ರಾಷ್ಟ್ರದ ವಿರುದ್ಧ ಹಲವು ರಾಜತಾಂತ್ರಿಕ ನಿರ್ಧಾರಗಳನ್ನು ಕೈಗೊಂಡಿದೆ. ಸಿಂಧೂ ನದಿ ನೀರು ಒಪ್ಪಂದ ಸೇರಿ ಹಲವು ದಿಟ್ಟ ಕ್ರಮಗಳನ್ನು ತೆಗೆದುಕೊಂಡಿದೆ. ಭಾರತ ಯಾವುದೇ ಸಮಯದಲ್ಲಿ ದಾಳಿ



ನಡೆಸಬಹುದು ಎಂಬ ಗುಪ್ತಚರ ಮಾಹಿತಿ ತಮಗೆ ಇದೆ ಎಂದು ಪಾಕಿಸ್ತಾನಿ ಸಚಿವರು ಪದೇ ಪದೇ ಹೇಳಿಕೊಂಡಿದ್ದಾರೆ. "ನಾವು ಇಲ್ಲದಿದ್ದರೆ ಯಾರೂ ಇರುವುದಿಲ್ಲ. ನಮ್ಮ ಭದ್ರತೆಗೆ ಬೆದರಿಕೆ ಬಂದರೆ, ನಾವು ಪೂರ್ಣ ಆಕ್ರಮಣಶೀಲತೆಯಿಂದ ಪ್ರತಿದಾಳಿ ನಡೆಸುತ್ತೇವೆ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಸಮಾ ಟಿವಿ ಸಂದರ್ಶನದಲ್ಲಿ ಹೇಳಿದರು. ಭಾರತವು ಪಾಕಿಸ್ತಾನದಲ್ಲಿ ಭಯೋತ್ಪಾದನೆಯನ್ನು ಪ್ರಾಯೋಜಿಸುತ್ತಿದೆ ಎಂದು ಆರೋಪಿಸುತ್ತಾ, ಪಾಕಿಸ್ತಾನವು ಎಲ್ಲಾ ಸನ್ನಿವೇಶಗಳಿಗೂ ಸಿದ್ಧವಾಗಿದೆ ಎಂದು ಸಚಿವರು ಹೇಳಿಕೊಂಡರು.

ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಇಬ್ಬರೂ ಅಹಂ ಮತ್ತು ಚುನಾವಣಾ ಉದ್ದೇಶಗಳಿಂದ ನಡೆಸಲ್ಪಡುವ ಅಪಾಯಕಾರಿ ರಾಜಕೀಯ ಮಾಡುತ್ತಾರೆ ಎಂದು ಆಸಿಫ್ ಹೇಳಿದರು. ಯಾವುದೇ ಯುದ್ಧವು ನಿಯಂತ್ರಣ ರೇಖೆಗೆ (ಎಲ್‌ಒಸಿ) ಸೀಮಿತವಾಗಿ ಉಳಿಯುವ ಸಾಧ್ಯತೆಯಿದೆ, ಆದರೆ ಅದು ಪ್ರಾರಂಭವಾದರೆ ಅದನ್ನು ನಿಯಂತ್ರಿಸಲಾಗುವುದಿಲ್ಲ ಎಂದು ಅವರು ಹೇಳಿದರು.



ಹೆಬ್ರಾನ್‌ನ ದಕ್ಷಿಣ ಪಶ್ಚಿಮ ದಂಡೆಯ ನಗರದ ಮಸಾಫರ್ ಯಟ್ಟಾದಲ್ಲಿರುವ ಖಲ್ಲೆತ್ ಅಲ್–ದಬಾ ಗ್ರಾಮದಲ್ಲಿ ಇಸ್ರೇಲಿ ಪಡೆಗಳು ಪ್ಯಾಲೆಸ್ತೀನಿಗಳು ತಮ್ಮ ಮನೆ ತೊರೆಯುವಂತೆ ಒತ್ತಾಯಿಸಿವೆ.

# ಆರ್ಚರಿ ವಿಶ್ವಕಪ್: ಭಾರತ ಪಾರಮ್ಯ


**ಶಾಂಘೈ, ಮೇ. 6:** ಭಾರತದ ಪುರುಷ ಮತ್ತು ಮಹಿಳಾ ತಂಡಗಳು ಇಲ್ಲಿ ನಡೆಯುತ್ತಿರುವ ಆರ್ಚರಿ ವಿಶ್ವಕಪ್ ಸ್ಟೇಜ್ 2ರ ಕಾಂಪೌಂಡ್ ವಿಭಾಗದ ಅರ್ಹತಾ ಸುತ್ತಿನಲ್ಲಿ ಅಗ್ರಸ್ಥಾನ ಪಡೆದುಕೊಂಡವು. ಮಂಗಳವಾರ ನಡೆದ ಪುರುಷರ ವೈಯಕ್ತಿಕ ರ‍್ಯಾಂಕಿಂಗ್ ಸುತ್ತಿನಲ್ಲಿ ಅನುಭವಿ ಅಭಿಷೇಕ್ ವರ್ಮಾ (714 ಅಂಕ) ಮತ್ತು ರಿಷಭ್ ಯಾದವ್ (713) ಕ್ರಮವಾಗಿ ಎರಡನೇ ಮತ್ತು ಮೂರನೇ ಸ್ಥಾನ ಪಡೆದರು. ಅನುಭವಿ ಓಜಸ್ ದೇವತಾಳೆ (707) ಅಗ್ರ 10ರಲ್ಲಿ ಸ್ಥಾನ ಪಡೆದರು. ಇದರೊಂದಿಗೆ ಪುರುಷರ ತಂಡವು (2134) ರ‍್ಯಾಂಕಿಂಗ್‌ನಲ್ಲಿ ಮೊದಲ ಸ್ಥಾನದೊಂದಿಗೆ ಕ್ವಾರ್ಟರ್ ಫೈನಲ್‌ಗೆ ಮುನ್ನಡೆಯಿತು. ದಕ್ಷಿಣ ಕೊರಿಯಾ ತಂಡ (2132) ನಂತರದ ಸ್ಥಾನ ಪಡೆಯಿತು.

# ಓಪನ್ ಬ್ಯಾಡ್ಮಿಂಟನ್: ಅರ್ಹತಾ ಸುತ್ತಿನಲ್ಲೇ ಎಡವಿದ ಯುವತಾರೆಗಳು

**ತೈಪೆ, ಮೇ. 6:** ಭಾರತದ ಉದಯೋನ್ಮುಖ ಬ್ಯಾಡ್ಮಿಂಟನ್ ಪಟುಗಳು, ತೈಪೆ ಓಪನ್ ಸೂಪರ್ 300 ಟೂರ್ನಿಯಲ್ಲಿ ಮಂಗಳವಾರ ಸಿಂಗಲ್ಸ್ ಅರ್ಹತಾ ಸುತ್ತಿನಲ್ಲೇ ಮುಗ್ಗರಿಸಿದರು. ಈ ವಿಭಾಗದಿಂದ ಒಬ್ಬರೂ ಪ್ರಧಾನ ಸುತ್ತಿಗೆ ಅರ್ಹತೆ ಪಡೆಯಲಾಗಲಿಲ್ಲ. ಮನರಾಜ್ ಸಿಂಗ್, ರಘು ಮರಿಸ್ವಾಮಿ ಮತ್ತು ಮಾನಸಿ ಸಿಂಗ್ ಅವರು ಕ್ವಾಲಿಫೈರ್ಸ್‌ನ ಮೊದಲ ಸುತ್ತಿನಲ್ಲಿ ಗೆದ್ದು ಭರವಸೆ ಮೂಡಿಸಿದರೂ, ಎರಡನೇ ಸುತ್ತಿನಲ್ಲಿ ತಮ್ಮ ಎದುರಾಳಿಗಳ ವಿರುದ್ಧ ಸೋಲನುಭವಿಸಿದರು. ಮನರಾಜ್ 21–9, 19–21, 20–22ರಲ್ಲಿ ಮಲೇಷ್ಯಾದ ತಾನ್ ಜಿಯಾ ಜೀ ಅವರಿಗೆ ಮಣಿದರು. ರಘು ಅವರು 16–21, 17–21ರಲ್ಲಿ ನೇರ ಸೆಟ್ಗಳಿಂದ ಇಂಡೋನೇಷ್ಯಾದ ಮೊಹ್ ಝಾಕಿ ಉಬೇದುಲ್ಲಾ ಎದುರು ಸೋಲನುಭವಿಸಿದರು. ಮಹಿಳಾ ಸಿಂಗಲ್ಸ್‌ನಲ್ಲಿ ಮಾನಸಿ ಅವರು ಥಾಯ್ಲೆಂಡ್‌ನ ಪಿಚಮೊನ್ ಒಪಟ್ನಿಪುತ್ ಅವರಿಗೆ ಸಾಟಿಯಾಗದೇ 17–21, 10–21ರಲ್ಲಿ ಸೋಲನುಭವಿಸಿದರು. ಇದಕ್ಕೆ ಮೊದಲು ರಘು, ಮನ್ರಾಜ್ ಮತ್ತು ಮಾನಸಿಮೊದಲ ಪಂದ್ಯಗಳಲ್ಲಿ ಮೂರು ಗೇಮ್ಗಳ ಹೋರಾಟದಲ್ಲಿ ಜಯಗಳಿಸಿದ್ದರು. ಪುರುಷರ ಸಿಂಗಲ್ಸ್‌ನ ಇತರ ಕ್ವಾಲಿಫೈರ್ ಪಂದ್ಯಗಳಲ್ಲಿ ಆರ್ಯಮನ್ ಟಂಡನ್ 27–25, 10–21, 8–21 ರಲ್ಲಿ ಮಲೇಷ್ಯಾದ ಕೊಕ್ ಜಿಂಗ್ ಹಾಂಗ್ ಅವರಿಗೆ ಮಣಿದರೆ, ಮಿಥುನ್ ಮಂಜುನಾಥ್ 21–17, 19–21, 9–21ರಲ್ಲಿ ತಾನ್ ಜಿಯಾ ಝೀ ಎದುರು ಸೋಲನುಭವಿಸಿದ್ದರು. ಮಹಿಳಾ ಸಿಂಗಲ್ಸ್‌ನಲ್ಲಿ ಇಶಾರಾಣಿ ಬರೂವ, ಇರಾ ಶರ್ಮಾ ಮತ್ತು ಶ್ರೇಯಾ ಲೇಲೆ ಅವರೂ ಅರ್ಹತಾ ವಿಭಾಗದ ಮೊದಲ ಸುತ್ತಿನಲ್ಲೇ ಹೊರಬಿದ್ದಿದ್ದರು.

# ಆರ್.ಸಿ.ಬಿ ಸುವರ್ಣ ಕ್ಷಣ: ಇತಿಹಾಸ ಸೃಷ್ಟಿಸಲು ಈಗ ಸಕಾಲ

**ಬೆಂಗಳೂರು, ಮೇ 6:** ಸುದೀರ್ಘ ಕಾಲದ ನಂತರ, ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಮತ್ತೊಮ್ಮೆ ಶ್ಲಾಘನೀಯ ಸ್ಥಾನಕ್ಕೇರಿದೆ. 16 ಅಮೂಲ್ಯ ಅಂಕಗಳನ್ನು ಪಡೆದು ಪ್ಲೇಆಫ್‌ನ ರೇಸ್‌ನಲ್ಲಿ ಬಲವಾಗಿ ನಿಂತಿದೆ. ಲಖನೌ ಸೂಪರ್ ಜೈಂಟ್ಸ್, ಸನ್‌ರೈಸರ್ಸ್ ಹೈದರಾಬಾದ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಕೇವಲ ಮೂರು ನಿರ್ಣಾಯಕ ಪಂದ್ಯಗಳು ಉಳಿದಿವೆ ಮತ್ತು ಅದರ ನಂತರ ಪ್ರೀ ಫೈನಲ್‌ಗಳು, ಸೆಮಿಫೈನಲ್ಸ್‌ಗಳು ಮತ್ತು ಫೈನಲ್ ಪಂದ್ಯಗಳು ನಡೆಯಲಿವೆ. ಆರ್.ಸಿ.ಬಿ 200 ಕ್ಕೂ ಅಧಿಕ ಮೊತ್ತವನ್ನು ಪೇರಿಸುವ ಸಾಮರ್ಥ್ಯವಿರುವ ಹೆಚ್ಚಿನ ಸ್ಕೋರಿಂಗ್ ಹೊಂದಿರುವ ಎದುರಾಳಿಗಳನ್ನು ಎದುರಿಸುತ್ತಿದೆ. ಗೆಲುವನ್ನು ಖಚಿತಪಡಿಸಿಕೊಳ್ಳಲು ಮತ್ತು ಅಸ್ಕರ್ ಟ್ರೋಫಿಯಲ್ಲಿ ತಮ್ಮ ಇರುವಿಕೆಯನ್ನು ಖಚಿತಪಡಿಸಿಕೊಳ್ಳಲು ಕಾರ್ಯತಂತ್ರದ ಹೊಂದಾಣಿಕೆ, ಬದಲಾವಣೆ ಅತ್ಯಗತ್ಯವಾಗಿ ಬೇಕಾಗಿವೆ.



ತಂಡದ ಆರಂಭಿಕ ಜೋಡಿಯಾದ ಜಾಕೋಬ್ ಬೆಹೆಲ್ ಮತ್ತು ವಿರಾಟ್ ಕೊಹ್ಲಿ ಪವರ್ ಪ್ಲೇ ನಲ್ಲಿ ಅತ್ಯುತ್ತಮವಾಗಿ ಆಟ ಆಡುತ್ತಿದ್ದಾರೆ. ನಿರಂತರವಾಗಿ ಆರ್‌ಸಿಬಿಗೆ ಬಲವಾದ ಆರಂಭ ನೀಡುತ್ತಿದ್ದಾರೆ. ಆದಾಗ್ಯೂ, ಒಂದು ಸಾಮಾನ್ಯ ಸಮಸ್ಯೆಯು ಮರುಕಳಿಸುತ್ತದೆ: ವಿಕೆಟ್ ಪತನದ ನಂತರ ರನ್ ದರವು ತೀವ್ರವಾಗಿ ಕುಸಿಯುತ್ತಿದೆ. ಈ ಹಂತವು ತಕ್ಷಣದ ಬದಲಾವಣೆಯನ್ನು ಬಯಸುತ್ತದೆ. ಮೊದಲು ಟಿಮ್ ಡೇವಿಡ್ ಮತ್ತು ರೊಮಾರಿಯೊ ಶೆಫರ್ಡ್ ಅವರಿಗೆ ಬಡ್ತಿ ನೀಡುವುದು ಸೂಕ್ತ. ಅವರ ಆಕ್ರಮಣಕಾರಿ ಶೈಲಿಯು ಆವೇಗವನ್ನು ಕಾಯ್ದುಕೊಳ್ಳಬಹುದು ಮತ್ತು ಮಧ್ಯಮ ಕ್ರಮಾಂಕದ ಓವರ್‌ಗಳಲ್ಲಿ ಲಾಭ ಗಳಿಸಬಹುದು. ಈ ಪ್ರಯೋಗವು ವಿಫಲವಾದರೆ, ದೇವದತ್ ಪಡಿಕ್ಕಲ್ ಮತ್ತು ರಜತ್ ಪಾಟಿದಾರ್ ಅವರಂತಹ ವಿಶ್ವಾಸಾರ್ಹ ಬ್ಯಾಟ್ಸಮನ್‌ಗಳು ಇನ್ನಿಂಗ್ಸ್ ಅನ್ನು ಸ್ಥಿರಗೊಳಿಸಲು ಹೆಜ್ಜೆ ಹಾಕಬಹುದು. ಆದಾಗ್ಯೂ, ಈ ಓವರ್‌ಗಳಲ್ಲಿ ನಿಧಾನಗತಿಯ ಸ್ಕೋರಿಂಗ್ ದರವು ದುಬಾರಿಯಾಗಿದೆ ಎಂದು ಸಾಬೀತುಪಡಿಸುವುದರಿಂದ ಹೆಚ್ಚಿನ ತುರ್ತು ಆಟಕ್ಕೆ ಅವರನ್ನು ಪ್ರೋತ್ಸಾಹಿಸಬೇಕು.



ಇದು ಧೈರ್ಯದಿಂದಿರುವ ಸಮಯ. ಆರ್.ಸಿ.ಬಿ ಕನಿಷ್ಠ 250 ರನ್ ಗುರಿಯನ್ನು ಹೊಂದಿರಬೇಕು – ಮಾನಸಿಕವಾಗಿ ಎದುರಾಳಿಯನ್ನು ಕುಗ್ಗಿಸಲು ಈ ಸ್ಕೋರ್ ಉಪಕಾರಿಯಾಗುತ್ತದೆ ಮತ್ತು ಗೆಲುವಿನ ಸಾಧ್ಯತೆಯನ್ನು ಹೆಚ್ಚಿಸುತ್ತದೆ.

ಆರ್‌ಸಿಬಿಗೆ ಲೀಗ್‌ನಲ್ಲಿ ಪ್ರಾಬಲ್ಯ ಸಾಧಿಸಲು ಇದು ಸುವರ್ಣಾವಕಾಶವಾಗಿದೆ. ಆದರೆ ಅಂತಿಮವಾಗಿ ಅವರ ಅಭಿಮಾನಿಗಳು ಬಹುನಿರೀಕ್ಷಿತ ಟ್ರೋಫಿಯನ್ನು ಎತ್ತಿಹಿಡಿಯಲು. ಯುದ್ಧತಂತ್ರದ ಧೈರ್ಯ, ನಮ್ಯತೆ ಮತ್ತು ನಿರ್ಭೀತ ಕ್ರಿಕೆಟ್ ಪ್ರಮುಖವಾಗಿದೆ. ಆರ್‌ಸಿಬಿಗೆ ಅವರ ಉಳಿದ ಪಂದ್ಯಗಳಲ್ಲಿ ನಾನು ಶುಭ ಹಾರೈಸುತ್ತೇನೆ. ಇದು ಅವರು ಇತಿಹಾಸ ಸೃಷ್ಟಿಸ ಸಕಾಲವಾಗಲಿ ಎಂದು ಹಾರೈಸುತ್ತೇನೆ.

**ಸಿ.ಎ ವಿಷ್ಣುಭರತ್ ಅಲಂಪಲ್ಲಿ**
**ಅಧ್ಯಕ್ಷರು, ಆಚಾರ್ಯ ಪಾಠ ಶಾಲಾ ಶಿಕ್ಷಣ ಸಂಸ್ಥೆ.**

# ರಕ್ಷಣಾ ವೆಚ್ಚ ಶೇ 18ರಷ್ಟು ಹೆಚ್ಚಿಸಲಿರುವ ಪಾಕ್: ವರದಿ

**ಇಸ್ಲಾಮಾಬಾದ್, ಮೇ. 6:** ರಕ್ಷಣಾ ಉದ್ದೇಶಗಳಿಗಾಗಿ ಮಾಡುವ ವೆಚ್ಚವನ್ನು ಮುಂದಿನ ಬಜೆಟ್‌ನಲ್ಲಿ ಶೇ 18ರಷ್ಟು ಹೆಚ್ಚಿಸಲು ಪಾಕಿಸ್ತಾನದ ಮೈತ್ರಿಕೂಟ ಸರ್ಕಾರ ಒಪ್ಪಿದೆ ಎಂದು ಮಂಗಳವಾರ ಮಾಧ್ಯಮ ವರದಿಯೊಂದು ಹೇಳಿದೆ. ಮುಂದಿನ ತಿಂಗಳ ಮೊದಲ ವಾರದಲ್ಲಿ ಪಾಕಿಸ್ತಾನ ಸರ್ಕಾರವು 2025–26ರ ಬಜೆಟ್ ಮಂಡಿಸಲಿದೆ. ಪಾಕಿಸ್ತಾನದಲ್ಲಿ ಜುಲೈ 1ರಿಂದ ಹೊಸ ಆರ್ಥಿಕ ವರ್ಷ ಶುರುವಾಗುತ್ತದೆ.



ಬಜೆಟ್ ಕುರಿತು ಚರ್ಚಿಸಲು ಪಾಕಿಸ್ತಾನ ಪೀಪಲ್ಸ್ ಪಾರ್ಟಿಯ (ಪಿಪಿಪಿ) ನಿಯೋಗ ಬಿಲಾವಲ್ ಭುಟ್ಟ ಝರ್ದಾರಿ ನೇತೃತ್ವದಲ್ಲಿ ಪ್ರಧಾನಿ ಶೆಹಬಾಜ್ ಶರೀಫ್ ಅವರನ್ನು ಸೋಮವಾರ ಭೇಟಿ ಮಾಡಿದೆ ಎಂದು ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ. ಪಾಕಿಸ್ತಾನ ಮುಸ್ಲಿಂ ಲೀಗ್–ನವಾಜ್ ನೇತೃತ್ವದ ಸರ್ಕಾರವು ಅಂದಾಜು 17.5 ಲಕ್ಷ ಕೋಟಿ (ಪಾಕಿಸ್ತಾನ ರೂಪಾಯಿ) ಕೋಟಿ ಮೊತ್ತದ ಬಜೆಟ್ ಬಗ್ಗೆ ಪಿಪಿಪಿ ನಿಯೋಗಕ್ಕೆ ಮಾಹಿತಿ ನೀಡಿದೆ. ಬಜೆಟ್‌ನಲ್ಲಿ ರಕ್ಷಣಾ ಉದ್ದೇಶಕ್ಕಾಗಿ ಮೀಸಲಿರುವ ಮೊತ್ತವನ್ನು ಶೇ 18ರಷ್ಟು (2.5 ಲಕ್ಷ ಕೋಟಿಗಿಂತ ಹೆಚ್ಚು) ಜಾಸ್ತಿ ಮಾಡುವ ಪ್ರಸ್ತಾವಕ್ಕೆ ಪಿಪಿಪಿ ಒಪ್ಪಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ.

# ದಕ್ಷಿಣ ಏಷ್ಯಾ ಶಾಂತಿಗಾಗಿ ಪಾಕ್‌ಗೆ ಬೆಂಬಲ: ಚೀನಾ ಘೋಷಣೆ

**ಇಸ್ಲಾಮಾಬಾದ್, ಮೇ. 6:** ಭಾರತ ಮತ್ತು ಪಾಕಿಸ್ತಾನದ ನಡುವೆ ನಡೆಯುತ್ತಿರುವ ಕಾದಾಟದ ನಡುವೆ ಇದೀಗ ಪಾಕ್‌ಗೆ ಚೀನಾ ಬೆಂಬಲ ನೀಡುವುದಾಗಿ ತಿಳಿಸಿದೆ. ಏ.22ರಂದು ಪಹಲ್ಗಾಮ್‌ನಲ್ಲಿ ನಡೆದ ಹಿಂದೂಗಳ ನರಮೇಧದ ಬಳಿಕ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಬಂಧ ಬಿಗಡಾಯಿಸುವ ಪರಿಸ್ಥಿತಿ ಉಂಟಾಗಿದೆ. ಒಂದು ಕಡೆ ಭಾರತಕ್ಕೆ ರಷ್ಯಾ, ಜಪಾನ್ ಬೆಂಬಲಿ ನೀಡಿದರೆ, ಇನ್ನೊಂದು ಕಡೆ ನೆರೆ ರಾಷ್ಟ್ರ ಚೀನಾ ಪಾಕ್‌ಗೆ ಬೆಂಬಲ ನೀಡುವುದಾಗಿ



ಹೇಳಿದೆ. ದಕ್ಷಿಣ ಏಷ್ಯಾದಲ್ಲಿ ಶಾಂತಿ ಸ್ಥಾಪನೆಗಾಗಿ ನಾವು ಸದಾ ಪಾಕಿಸ್ತಾನ ಬೆಂಬಲಿಸುತ್ತೇವೆ ಎಂದು ಹೇಳಿದೆ. ಸೋಮವಾರ ಪಾಕ್ ಅಧ್ಯಕ್ಷ ಅಲಿ ಜರ್ದಾರಿ ಅವರನ್ನು ಪಾಕಿಸ್ತಾನದಲ್ಲಿನ ಚೀನಾ ರಾಯಭಾರಿ ಜಿಯಾಂಗ್ ಜೈಡಾಂಗ್ ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ ಚೀನಾ ಮತ್ತು ಪಾಕಿಸ್ತಾನದ ಸ್ನೇಹ ಶಾಶ್ವತ ವಾಗಿದೆ. ಕಾಲ ಕಾಲಕ್ಕೆ ಪರೀಕ್ಷೆಗೆ ಒಳಗಾಗಿದ್ದರೂ ಯಾವಾಗಲೂ ಸವಾಲಿನ ಸಮಯದಲ್ಲಿ ಪರಸ್ಪರ ಬೆಂಬಲಿಸಿದ ಸ್ನೇಹ ನಮ್ಮದಾಗಿದೆ. ಹೀಗಾಗಿ ದಕ್ಷಿಣ ಏಷ್ಯಾ ಶಾಂತಿಗಾಗಿ ಪಾಕ್‌ಗೆ ನಮ್ಮ ಬೆಂಬಲವಿದೆ ಎಂದಿದ್ದಾರೆ. ಪಾಕ್ ಬೆಂಬಲಿಸುವುದಾಗಿ ತಿಳಿಸಿ ಮಾತನಾಡಿದ ಜರ್ದಾರಿ, ಭಾರತವು ಬೇಜವಾಬ್ದಾರಿ ಮತ್ತು ಆಕ್ರಮಣಕಾರಿ ನಡೆಯನ್ನು ಅನುಸರಿಸುತ್ತಿದೆ ಎಂದು ಕಿಡಿಕಾರಿದರು.

# ಪಾಕ್‌ಗೆ ಬಿಸಿ ಮುಟ್ಟಿಸಿದ ಬಲೂಚಿಸ್ತಾನ: ಕರಾಚಿ–ಕ್ವೆಟ್ಟಾ ಹೆದ್ದಾರಿ ಬಂದ್, ಪೊಲೀಸರ ಅಪಹರಣ

**ಬಲೂಚಿಸ್ತಾನ್, ಮೇ. 6:** ಪಹಲ್ಯಾಮ್ ಭಯೋ*ತ್ಪಾದಕ ದಾಳಿ ವಿಚಾರದಲ್ಲಿ ಹೊಣೆಗಾರಿಕೆಯಿಂದ ನುಣುಚಿಕೊಳ್ಳಲು ವಿಶ್ವಸಂಸ್ಥೆಯಲ್ಲಿ ಜಮ್ಮು–ಕಾಶ್ಮೀರ ವಿಷಯ ಪ್ರಸ್ತಾಪಿಸಿ ಪಾಕಿಸ್ತಾನ ಛೀಮಾರಿ ಹಾಕಿಸಿಕೊಂಡಿದ್ದು ಒಂದೆಡೆಯಾದರೆ, ಮತ್ತೊಂದೆಡೆ ಬಲೂಚಿ ಪ್ರತ್ಯೇಕತಾವಾದಿಗಳು ಕರಾಚಿ–ಕ್ವೆಟ್ಟಾ ಹೆದ್ದಾರಿಯನ್ನು ಬಂದ್ ಮಾಡಿ, ಪೊಲೀಸರನ್ನು ಅಪಹರಿಸುವ ಮೂಲಕ ದಂಗೆ ಎದ್ದಿರುವುದಾಗಿ ವರದಿ ತಿಳಿಸಿದೆ. ಭಾರತದ ಮೇಲೆ ಗೂಬೆ ಕೂರಿಸುವುದನ್ನು ಮುಂದುವರಿಸಿರುವ ಪಾಕಿಸ್ತಾನದ ಸೇನೆಗೆ ಬಲೂಚಿ ಲಿಬರೇಶನ್ ಆರ್ಮಿಯನ್ನು ನಿಯಂತ್ರಿಸಲು ಸಾಧ್ಯವಾಗದೇ ಹೈರಾಣಗಿರುವುದಾಗಿ ವರದಿ ವಿವರಿಸಿದೆ. ಬಲೂಚಿ ಲಿಬರೇಶನ್ ಆರ್ಮಿ ಸರ್ಕಾರಿ ಕಚೇರಿಗಳನ್ನು, ಬ್ಯಾಂಕ್, ಕೋರ್ಟ್ ಕಟ್ಟಡಗಳಿಗೆ ಬೆಂಕಿ ಹಚ್ಚಿರುವುದು ಟಿವಿ ಮಾಧ್ಯಮಗಳಲ್ಲಿ ವರದಿಯಾಗಿದೆ. 30 ಮಂದಿ ಶಸ್ತ್ರಧಾರಿ ಬಲೂಚಿಸ್ತಾನಿಗಳು ಟ್ರಾಫಿಕ್ ಬಂದ್ ಮಾಡಿ, ಕಟ್ಟಡಗಳಿಗೆ



ಬೆಂಕಿ ಹಚ್ಚಿರುವುದಾಗಿ ವರದಿ ತಿಳಿಸಿದೆ. ಪೊಲೀಸ್ ವಾಹನಗಳ ಮೇಲೆ ದಾಳಿ ನಡೆಸಿ, ಐವರು ಪೊಲೀಸರನ್ನು ಅಪಹರಿಸಿದ್ದು, 10 ಕೈದಿಗಳನ್ನು ಬಂಧಮುಕ್ತಗೊಳಿಸಿರುವ ಘಟನೆ ನಡೆದಿದೆ ಎಂದು ವರದಿ ವಿವರಿಸಿದೆ.

ಬಲೂಚಿ ಲಿಬರೇಶನ್ ಆರ್ಮಿ ವಿರುದ್ಧ ಪಾಕ್ ಸೇನೆ ಕಾರ್ಯಾಚರಣೆಗಿಳಿದಿದ್ದರು ಕೂಡಾ ಅವರನ್ನು ನಿಯಂತ್ರಿಸಲು ಸಾಧ್ಯವಾಗದೇ ಕೈಚೆಲ್ಲುವಂತಾಗಿದೆ ಎಂದು ಮೂಲಗಳು ತಿಳಿಸಿವೆ. ಮತ್ತೊಂದೆಡೆ ಪಹಲ್ಯಾಮ್ ದಾಳಿಯ ವಿಚಾರದಲ್ಲಿ ಭಾರತ–ಪಾಕ್ ನಡುವೆ ಯುದ್ಧ ಸಂಘರ್ಷ ಸನ್ನಿಹಿತವಾಗತೊಡಗಿದೆ. ಆದರೆ ಬಲೂಚಿ ದಂಗೆ ಪಾಕ್ ಸೇನಾ ಸಾಮರ್ಥ್ಯಕ್ಕೆ ಸವಾಲೊಡ್ಡಿರುವುದಾಗಿ ವರದಿ ತಿಳಿಸಿದೆ. ಪಾಕಿಸ್ತಾನ ಸೇನೆಯಲ್ಲಿರುವ ಸುಮಾರು 800ಕ್ಕೂ ಅಧಿಕ ಬಲೂಚಿ ಯೋಧರು ರಾಜೀನಾಮೆ ನೀಡುವ ಮೂಲಕ ಪಾಕಿಸ್ತಾನ ಸೇನೆಯಲ್ಲಿನ ಒಳ ಜಗಳ ತಾರಕಕ್ಕೇರಿದಂತಾಗಿದೆ ಎಂದು ವರದಿ ವಿವರಿಸಿದೆ.



ಬ್ರಿಟನ್‌ನ ಶೆಫೀಲ್ಡ್‌ನಲ್ಲಿ ನಡೆದ ವಿಶ್ವ ಸ್ನೂಕರ್ ಚಾಂಪಿಯನ್‌ಶಿಪ್ 2025 ರಲ್ಲಿ ಚೀನಾದ ಝಾವೊ ಕ್ಸಿಂಟಾಂಗ್ ಮತ್ತು ವೇಲ್ಸ್‌ನ ಮಾರ್ಕ್ ವಿಲಿಯಮ್ಸ್ ನಡುವಿನ ಫೈನಲ್ ಪಂದ್ಯದ ನಂತರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಝಾವೊ ಕ್ಸಿಂಟಾಂಗ್ ಟ್ರೋಫಿಯೊಂದಿಗೆ ಸಂಭ್ರಮಿಸಿದರು.

# ಶೂಟಿಂಗ್: ಮಯಾಂಕ್‌ಗೆ 2ನೇ ಚಿನ್ನ

**ನವದೆಹಲಿ,ಮೇ 6:** ರಾಜಸ್ಥಾನದ ಶೂಟರ್ ಮಯಂಕ್ ಚೌಧರಿ ಅವರು ಖೇಲೊ ಇಂಡಿಯಾ ಯೂತ್ ಗೇಮ್ಸ್‌ನಲ್ಲಿ ಮಂಗಳವಾರ ತಮ್ಮ ಎರಡನೇ ಚಿನ್ನ ಗೆದ್ದರು. ಮಿಶ್ರ ತಂಡ ವಿಭಾಗದಲ್ಲಿ ಸೋಮವಾರ ಚಿನ್ನದ ಸಾಧನೆ ಮಾಡಿದ್ದ ಮಯಾಂಕ್, ಬಾಲಕರ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ 239.2 ಸ್ಕೋರ್ನೊಂದಿಗೆ ಅಗ್ರಸ್ಥಾನಿಯಾದರು. ಚಂಡೀಗಢದ ಧೈರ್ಯ ಪ್ರಶಾರ್ (235.3) ಮತ್ತು ಮಧ್ಯಪ್ರದೇಶದ ಯುಗ್ ಪ್ರತಾಪ್ ಸಿಂಗ್ ರಾಥೋಡ್ (214.8) ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕ ಜಯಿಸಿದರು. ಮಹಾರಾಷ್ಟ್ರದ ಪ್ರಾಚಿ ಗಾಯಕವಾಡ್ (458.4) ಅವರು ಬಾಲಕಿಯರ 50 ಮೀಟರ್ ರೈಫಲ್ 3



ಪೊಸಿಷನ್ ಸ್ಪರ್ಧೆಯಲ್ಲಿ ಕರ್ನಾಟಕದ ತಿಲೋತ್ತಮ ಸೇನ್ (455.6) ಅವರನ್ನು ಹಿಂದಿಕ್ಕಿ ಸ್ವರ್ಣ ಗೆದ್ದರು. ಕಳೆದ ಆವೃತ್ತಿಯಲ್ಲಿ ಪ್ರಾಚಿ ಕಂಚಿನ ಪದಕ ಗೆದ್ದಿದ್ದರು. ತಿಲೋತ್ತಮ ಬೆಳ್ಳಿ ಪದಕ ತಮ್ಮದಾಗಿಸಿಕೊಂಡರು.